23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 324 | ನವದೆಹಲಿ | ಬೆಲೆ ₹10 | ಮೇ 30 2026, ಶನಿವಾರ

## ರಾಜೀನಾಮೆ ಬೆನ್ನಲ್ಲೇ ಹೊಸ ಸಂಪುಟ ರಚನೆಗೆ ಸಿದ್ದರಾಮಯ್ಯ-ಡಿಕೆಶಿ ಕಸರತ್ತು

**ನವದೆಹಲಿ, ಮೇ 29: ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ ಬೆನ್ನಲ್ಲೇ ಹೊಸ ಸರ್ಕಾರದ ರಚನೆಗೆ ಕಸರತ್ತು ಆರಂಭವಾಗಿದೆ. ಕೃತ್ಯಜ್ಞತೆ ಸಲ್ಲಿಸುವ ನೆಪದಲ್ಲಿ ದೆಹಲಿಗೆ ಆಗಮಿಸಿದ್ದ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಬೆಂಬಲಿಗರಿಗೆ ಆದ್ಯತೆ ನೀಡಲು ಹೈಕಮಾಂಡ್‌ಗೆ ಒತ್ತಾಯಿಸಿದ್ದಾರೆ.**

ಶುಕ್ರವಾರ ಸಿಪಿಪಿ ನಾಯಕಿ ಸೋನಿಯಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕರ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಎಂಟು ವರ್ಷಗಳ ಕಾಲ ಸೇವೆ ಸಲ್ಲಿಸಲು ಅವಕಾಶ ನೀಡಿದ್ದಕ್ಕಾಗಿ ಧನ್ಯವಾದ ಹೇಳಿದರು. ಬಳಿಕ ಹೊಸ ಸರ್ಕಾರದಲ್ಲಿ ಬೆಂಬಲಿಗ ಶಾಸಕರಿಗೆ ಆದ್ಯತೆ ನೀಡಲು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿ ರಾಹುಲ್ ಗಾಂಧಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಮತ್ತು ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಜೊತೆಗೆ ಮಾತುಕತೆ ನಡೆಸಲು ಸಲಹೆ ನೀಡಿದರು. ಈ ಹಿನ್ನಲೆ ಮಲ್ಲಿಕಾರ್ಜುನ್ ಖರ್ಗೆ, ಕೆ.ಸಿ ವೇಣುಗೋಪಾಲ್ ಭೇಟಿಯಾಗಿ ಸುದೀರ್ಘ ಚರ್ಚೆ ನಡೆಸಿದರು. ಈ ಸಮಯದಲ್ಲಿ ಸಂಪುಟದಲ್ಲಿ ಕನಿಷ್ಠ 15 ಸ್ಥಾನಗಳನ್ನು ಬೆಂಬಲಿಗ ಶಾಸಕರಿಗೆ ನೀಡುವಂತೆ ಮನವಿ ಮಾಡಿದರು. ಹೈಕಮಾಂಡ್ ಸೂಚನೆಗೆ ಮೇರೆಗೆ ಪುತ್ರ ಡಾ.ಯತೀಂದ್ರ ಅವರಿಗೆ ಸಂಪುಟ ಸೇರ್ಪಡೆಗೆ ಸಮ್ಮತಿ ಸೂಚಿಸಿದರು ಎನ್ನಲಾಗಿದೆ.

**ವರಿಷ್ಠರನ್ನು ಭೇಟಿಯಾದ ಡಿ.ಕೆ ಶಿವಕುಮಾರ್:** ಸಿಎಂ ಸಿದ್ದರಾಮಯ್ಯ ಅವರ ಬೆನ್ನಲ್ಲೇ ಡಿ.ಕೆ ಶಿವಕುಮಾರ್ ಮಲ್ಲಿಕಾರ್ಜುನ್ ಖರ್ಗೆ, ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್ ಜೊತೆಗೆ ಚರ್ಚಿಸಿದರು. ಬೆಂಗಳೂರಿನಿಂದಲೇ ಪಟ್ಟಿಯನ್ನು ತಂದಿದ್ದ ಡಿ.ಕೆ.ಶಿವಕುಮಾರ್ ಹೈಕಮಾಂಡ್‌ಗೆ ನೀಡಿದ್ದು ಅನುಮತಿಗೆ ಮನವಿ ಮಾಡಿದ್ದಾರೆ. ಈ ಪಟ್ಟಿಯಲ್ಲಿ ಸಿದ್ದರಾಮಯ್ಯ ಅವರ ಬಣದ ಹಲವು ಶಾಸಕರೂ ಇದ್ದು ಮುಖ್ಯವಾಗಿ ಡಿಸಿಎಂ ಹುದ್ದೆಗೆ ಯತೀಂದ್ರ ಹೆಸರನ್ನು ಡಿ.ಕೆ.ಶಿವಕುಮಾರ್ ಸೂಚಿಸಿದ್ದಾರೆ ಎಂದು ಉನ್ನತ ಮೂಲಗಳು ಹೇಳಿವೆ.





### ಇಂದು ಸಂಜೆ 4ಕ್ಕೆ ಕಾಂಗ್ರೆಸ್ ಶಾಸಕಾಂಗ ಸಭೆ

**ಬೆಂಗಳೂರು, ಮೇ 29:** ಬಹುದಿನಗಳ ಕನಸು ನನಸಾಗುವ ಕಾಲ ಸನ್ನಿಹಿತವಾಗಿದ್ದು, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಲು ವೇದಿಕೆ ಸಜ್ಜಾಗಿದೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶನಿವಾರ ಸಂಜೆ 4 ಗಂಟೆಗೆ ಶಾಸಕಾಂಗ ಪಕ್ಷದ ಸಭೆ ಕರೆದಿದ್ದು, ಅಲ್ಲಿ ಡಿಕೆಶಿ ಅವರನ್ನು ವಿಧ್ಯುಕ್ತವಾಗಿ ಶಾಸಕಾಂಗ ನಾಯಕರನ್ನಾಗಿ ನೇಮಿಸಲಾಗುತ್ತಿದೆ. ಭಾನುವಾರ ಇಲ್ಲವೇ ಸೋಮವಾರ ಡಿ.ಕೆ.ಶಿ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸುವ ನಿರೀಕ್ಷೆಯಿದೆ.

ಡಿ.ಕೆ.ಶಿ ಜೊತೆ ಬಹುತೇಕ ಪೂರ್ಣ ಪ್ರಮಾಣದ ಸಂಪುಟ ಅಸ್ಥಿತ್ವಕ್ಕೆ ಬರುವ ನಿರೀಕ್ಷೆಯಿದೆ. ಶಾಸಕಾಂಗ ಪಕ್ಷ ಸಭೆಗೆ ಪಕ್ಷದ ಎಲ್ಲ ಶಾಸಕರೂ ಪಾಲ್ಗೊಳ್ಳುವಂತೆ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ಮೇರೆಗೆ ಶಾಸಕಾಂಗ ಕಾರ್ಯದರ್ಶಿ ಅಲ್ಲಮಪ್ರಭು ಪಾಟೀಲ್ ಪಾಲ್ಗೊಳ್ಳುವಂತೆ ಸೂಚಿಸಿದ್ದಾರೆ.

■ ...3ನೇ ಪುಟಕ್ಕೆ

### ಸಂಪುಟ ರಚನೆ ಬಗ್ಗೆ ತೀರ್ಮಾನ ಆಗಿಲ್ಲ: ಡಿಕೆಶಿ

**ನವದೆಹಲಿ, ಮೇ 29:** ರಾಜ್ಯದಲ್ಲಿ ಹೊಸ ಸಚಿವ ಸಂಪುಟ ರಚನೆಯ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಆಗಿಲ್ಲ. ಶನಿವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ಸಭೆ ಕರೆಯಲಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚೆ ಇನ್ನೂ ನಡೆಯುತ್ತಿದೆ. ಶಾಸಕಾಂಗ ಪಕ್ಷ ಸಭೆ ಹಿನ್ನೆಲೆಯಲ್ಲಿ ಪಕ್ಷದ ಎಲ್ಲಾ ಶಾಸಕರಿಗೆ ಬೆಂಗಳೂರಿನಲ್ಲಿಯೇ ಇರುವಂತೆ ತಿಳಿಸಲಾಗಿದೆ. ಎಲ್ಲವೂ ಹೈಕಮಾಂಡ್ ಕೋರಿಕೆಯಂತೆ ನಡೆಯುತ್ತಿದೆ. ಏನನ್ನೂ ನಿರ್ಧರಿಸಲಾಗಿಲ್ಲ. ಶನಿವಾರ ಸಿಎಲ್‌ಪಿ ಸಭೆ ಕರೆದಿದ್ದೇವೆ, ನಮ್ಮ ಕೇಂದ್ರ ನಾಯಕರು ಬರಬೇಕು. ನಾವು ನಮ್ಮ ಹೈಕಮಾಂಡ್ ಜೊತೆ ಚರ್ಚಿಸಬೇಕು. ಅದನ್ನು ಹೊರತುಪಡಿಸಿ, ಬೇರೆ ಏನೂ ಇಲ್ಲ' ಎಂದು ಸ್ಪಷ್ಟಪಡಿಸಿದರು. ಹೊಸ ಸರ್ಕಾರ ರಚನೆ ಕುರಿತು ಚರ್ಚಿಸಲು ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತು ಮಾಜಿ ಸಚಿವ ಕೆ.ಜೆ. ಜಾರ್ಜ್ ಅವರು ಶುಕ್ರವಾರ ನವದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

■ ...3ನೇ ಪುಟಕ್ಕೆ

### ಒಳಪುಟಗಳಲ್ಲಿ

ಮುಂದಿನ 8 ವರ್ಷ ಡಿಕೆಶಿ ಅಲ್ಲಾಡಿಸಲು ಯಾರಿಂದಲೂ ಸಾಧ್ಯವಿಲ್ಲ: ರಾಜಗುರು ದ್ವಾರಕಾನಾಥ್ ಗುರೂಜಿ ಭವಿಷ್ಯ - ಪು.5

ಹಳಬರು ಹೊಸಬರಿಗೆ ದಾರಿ ಮಾಡಿಕೊಡಲಿ ಸಚಿವ ಆಕಾಂಕ್ಷಿ ತನ್ವೀರ್‌ಸೇಠ್ ನೇರ ಒತ್ತಾಯ - ಪು.6


## ರಾಜೀನಾಮೆ ಅಂಗೀಕಾರ, ಸಂಪುಟ ವಿಸರ್ಜನೆ: ಸಿದ್ದರಾಮಯ್ಯ ಹಂಗಾಮಿ ಸಿಎಂ

**ಬೆಂಗಳೂರು, ಮೇ 29: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಂಗೀಕರಿಸಿದ್ದಾರೆ. ಮುಖ್ಯಮಂತ್ರಿಯವರ ರಾಜೀನಾಮೆಯೊಂದಿಗೆ ರಾಜ್ಯ ಸಚಿವ ಸಂಪುಟ ವಿಸರ್ಜನೆಯಾಗಿದೆ. ಈ ಬಗ್ಗೆ ಲೋಕಭವನದಿಂದ ಅಧಿಕೃತ ಆದೇಶ ಹೊರಡಿಸಲಾಗಿದೆ.**

ಸಂವಿಧಾನದ ಅಡಿಯಲ್ಲಿ ಅಧಿಕಾರವನ್ನು ಚಲಾಯಿಸಿ ಸಿದ್ದರಾಮಯ್ಯ ಅವರ ರಾಜೀನಾಮೆಯನ್ನು ಅಂಗೀಕರಿಸಿದ್ದೇನೆ ಮತ್ತು ಅವರ ನೇತೃತ್ವದ ಸಚಿವ ಸಂಪುಟವನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸಿರುವುದಾಗಿ ರಾಜ್ಯಪಾಲರು ಅಧಿಸೂಚನೆಯಲ್ಲಿ ತಿಳಿಸಿದ್ದಾರೆ. ಹಾಗೂ ಹೊಸ ಸರ್ಕಾರ ರಚನೆಯಾಗುವವರೆಗೆ ಅಥವಾ ಮುಂದಿನ ವ್ಯವಸ್ಥೆಯವರೆಗೆ, ಸಿದ್ದರಾಮಯ್ಯ ಅವರು ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರಿಯಲು ರಾಜ್ಯಪಾಲರು ಸೂಚನೆ ನೀಡಿದ್ದಾರೆ.

ಈ ಪ್ರಕ್ರಿಯೆಯು ಸಾಂವಿಧಾನಿಕವಾಗಿ ಸರ್ಕಾರವೊಂದು ಬದಲಾಗುವಾಗ ಅನುಸರಿಸುವ ಸಾಮಾನ್ಯ ಕ್ರಮವಾಗಿದೆ. ಸಚಿವ ಸಂಪುಟ ವಿಸರ್ಜನೆ ಎಂಬ ಪದ ಬಳಸಲಾಗಿದೆ.

ಅಂದರೆ, ಮುಖ್ಯಮಂತ್ರಿಗಳ ಜತೆ ಕಾರ್ಯ ನಿರ್ವಹಿಸುತ್ತಿದ್ದ ಎಲ್ಲಾ ಸಚಿವರ ಹುದ್ದೆಗಳು ಕೂಡ ಕೊನೆಗೊಳ್ಳುತ್ತವೆ. ಸಚಿವ ಸಂಪುಟ ವಿಸರ್ಜನೆಯ ನಂತರ, ರಾಜ್ಯದಲ್ಲಿ ತಾತ್ಕಾಲಿಕ ಆಡಳಿತ ವ್ಯವಸ್ಥೆ ಹೇಗೆ ಸಾಗಬೇಕು ಎಂಬುದನ್ನು ರಾಜ್ಯಪಾಲರು ನಿರ್ಧರಿಸುತ್ತಾರೆ.



ಆದರೆ ಇಲ್ಲಿ ನೀಡಿರುವ ಮಾಹಿತಿಯಲ್ಲಿ ಮುಂದಿನ ಹಂತಗಳ ಬಗ್ಗೆ ಯಾವುದೇ ವಿವರ ಇಲ್ಲ. ಕೊಟ್ಟಿರುವ ಮಾಹಿತಿ ಪ್ರಕಾರ, ಮುಖ್ಯಮಂತ್ರಿಗಳ ರಾಜೀನಾಮೆ, ರಾಜ್ಯಪಾಲರ ಅಂಗೀಕಾರ ಮತ್ತು ಸಚಿವ ಸಂಪುಟ ವಿಸರ್ಜನೆ ಇವಷ್ಟೇ ವಿಷಯಗಳು ಸ್ಪಷ್ಟವಾಗಿ ಕಾಣಿಸುತ್ತದೆ.

#### ಒಂದು ಸಾಲಿನ ರಾಜೀನಾಮೆ ಪತ್ರ

ರಾಜೀನಾಮೆ ಪತ್ರ ಬಹಳ ಚಿಕ್ಕದಾಗಿದ್ದು, ಒಂದೇ ಸಾಲಿನಲ್ಲಿ ಬರೆಯಲಾಗಿದೆ ಎನ್ನುವುದು ವಿಶೇಷ. ಅವರು ರಾಜ್ಯಪಾಲರಿಗೆ ಬರೆದ ಪತ್ರದಲ್ಲಿ, ಗೌರವಾನ್ವಿತರೇ, ನಾನು ಕರ್ನಾಟಕದ ಮುಖ್ಯಮಂತ್ರಿ ಹುದ್ದೆಯಿಂದ ನನ್ನ ರಾಜೀನಾಮೆಯನ್ನು ಸಲ್ಲಿಸುತ್ತಿದ್ದೇನೆ. ದಯವಿಟ್ಟು ಅದನ್ನು ಸ್ವೀಕರಿಸಲು ವಿನಂತಿ. ಸಾದರವಾಗಿ, ನಿಮ್ಮ ವಿಶ್ವಾಸಿ, ಸಿದ್ದರಾಮಯ್ಯ ಎಂದು ಸರಳವಾಗಿ ತಮ್ಮ ಇಚ್ಛೆಯನ್ನು ತಿಳಿಸಿದ್ದಾರೆ. ಈ ರಾಜೀನಾಮೆ ಪತ್ರದಲ್ಲಿ ಅವರು ಯಾವುದೇ ಕಾರಣ ವಿವರಿಸಿಲ್ಲ, ಕೇವಲ ರಾಜೀನಾಮೆಯನ್ನು ಸಲ್ಲಿಸುತ್ತೇನೆ ಎಂದು ತಿಳಿಸಿ, ಅದನ್ನು ಸ್ವೀಕರಿಸಲು ವಿನಂತಿ ಮಾಡಿದ್ದಾರೆ.



## ನಿತ್ಯ ಪಂಚಾಂಗ 30.05.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ಚತುರ್ದಶಿ,
ವಿಶಾಖ ನಕ್ಷತ್ರ,
ಸೌರ ನೃಸಿಂಹ ಜಯಂತಿ,
ನಮ್ಮಾಳ್ವಾರ್ ತಿರುನಕ್ಷತ್ರ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04-6.33 | 12.00-1.30 | 3.00-4.00 |
| ಸೋಮ | ಬೆ.7.20-9.04 | 10.30-12.00 | 1.30-12.00 |
| ಮಂಗಳ | ಮ.3.25-4.59 | 9.00-10.30 | 12.00-1.30 |
| ಬುಧ | ಮ.12.16-1.50 | 7.30-9.00 | 10.30-12.00 |
| ಗುರು | ಮ.1.50-3.29 | 6.00-7.30 | 9.00-10.30 |
| ಶುಕ್ರ | ಬೆ.10.42-12.16 | 3.00-4.30 | 7.30-9.00 |
| ಶನಿ | ಬೆ.9.07-10.41 | 1.30-3.00 | 6.00-7.30 |

# ಭಾರತೀಯ ರಾಜಕಾರಣದ ಧೀಮಂತ ನಾಯಕ ಸಿದ್ದರಾಮಯ್ಯ: ಡಿಕೆಶಿ ಪ್ರಶಂಸೆ

**ಬೆಂಗಳೂರು, ಮೇ 29:** ಕರ್ನಾಟಕ ರಾಜಕೀಯದ ಇತಿಹಾಸದಲ್ಲಿ ಒಂದು ಪ್ರಮುಖ ಅಧ್ಯಾಯ ಮುಕ್ತಾಯ ಗೊಂಡಿದೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ಅಧಿಕೃತವಾಗಿ ರಾಜೀನಾಮೆ ನೀಡಿದ ಬೆನ್ನಲ್ಲೇ, ಉಪಮುಖ್ಯ ಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಅತ್ಯಂತ ಭಾವುಕ ಮತ್ತು ಗೌರವಪೂರ್ವಕ ಪೋಸ್ಟ್ ಹಂಚಿಕೊಂಡಿದ್ದಾರೆ. ಸಿದ್ದರಾಮಯ್ಯ ಅವರ ಸುದೀರ್ಘ ರಾಜಕೀಯ ಪಯಣ, ಜನಪರ ಆಡಳಿತ ಹಾಗೂ ಇಬ್ಬರ ನಡುವಿನ ಒಡನಾಟವನ್ನು ಡಿ.ಕೆ.ಶಿವಕುಮಾರ್ ನೆನೆದಿದ್ದಾರೆ. ತಮ್ಮ ಪೋಸ್ಟ್‌ನ ಆರಂಭದಲ್ಲೇ ಅತ್ಯಂತ ಅರ್ಥಗರ್ಭಿತ ಸಾಲುಗಳನ್ನು ಬರೆದಿರುವ ಡಿ.ಕೆ.ಶಿವಕುಮಾರ್, "ದೇವರು ವರನೂ ಕೊಡಲ್ಲ, ಶಾಪನೂ ಕೊಡಲ್ಲ. ಅವಕಾಶ ಮಾತ್ರ ಕೊಡುತ್ತಾನೆ. ಆ ಕೊಟ್ಟಿರುವ ಅವಕಾಶದಲ್ಲಿ ನಾವು ಏನು ಸಾಧನೆ ಮಾಡುತ್ತೇವೆ ಎಂಬುದು ಮುಖ್ಯ. ಇದಕ್ಕೆ ಅತ್ಯುತ್ತಮ ಉದಾಹರಣೆಯೇ ನಮ್ಮ ಸಿದ್ದರಾಮಯ್ಯನವರು" ಎಂದು ಶ್ಲಾಘಿಸಿದ್ದಾರೆ.

ಮೈಸೂರು ಜಿಲ್ಲೆಯ ಸಿದ್ದರಾಮನ ಹುಂಡಿ ಎಂಬ ಸಣ್ಣ ಹಳ್ಳಿಯಲ್ಲಿ ಸಾಮಾನ್ಯ ರೈತ ಕುಟುಂಬದಲ್ಲಿ ಹುಟ್ಟಿ, ಬೆಳೆದು, ನಿರಂತರ ಹೋರಾಟಗಳ ಮೂಲಕವೇ ರಾಜಕೀಯಕ್ಕೆ ಬಂದು, ಇಂದು ರಾಜ್ಯದ ಅತ್ಯುನ್ನತ ಸ್ಥಾನಕ್ಕೇರಿದ ಸಿದ್ದರಾಮಯ್ಯ ಅವರ ಸಾಧನೆಯನ್ನು ಶಿವಕುಮಾರ್ ಶ್ಲಾಘಿಸಿದ್ದಾರೆ. ನನ್ನ ಆತ್ಮೀಯ ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅತ್ಯಂತ ಯಶಸ್ವಿ, ಪ್ರಭಾವಶಾಲಿ ಹಾಗೂ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಜನಮಾನಸದಲ್ಲಿ ನೆಲೆಸಿರುವ ಅವರು, ಭಾರತೀಯ ರಾಜಕಾರಣದ ಧೀಮಂತ ನಾಯಕ ಎಂದು ಬಣ್ಣಿಸಿದ್ದಾರೆ.

ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅತ್ಯಂತ ಯಶಸ್ವಿ, ಪ್ರಭಾವಶಾಲಿ ಹಾಗೂ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಕೀರ್ತಿ ಸಿದ್ದರಾಮಯ್ಯ ಅವರಿಗೆ ಸಲ್ಲುತ್ತದೆ. ಸುಮಾರು ಐವತ್ತು ವರ್ಷಗಳ (5 ದಶಕ) ಅಗಾಧ ರಾಜಕೀಯ ಅನುಭವ ಹೊಂದಿರುವ ಅವರು ಕೇವಲ ಕರ್ನಾಟಕಕ್ಕೆ ಮಾತ್ರವಲ್ಲ, ಇಡೀ ಭಾರತೀಯ ರಾಜಕಾರಣದ ಧೀಮಂತ ನಾಯಕ ಎಂದು ಡಿಕೆಶಿ ಹೇಳಿದ್ದಾರೆ.

ಅವರು ಜಾರಿಗೆ ತಂದ ಜನಪರ ಯೋಜನೆಗಳು ಹಾಗೂ ರಾಜ್ಯದ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ನೀಡಿದ ಕೊಡುಗೆಗಳು ಎಂದಿಗೂ ಅವಿಸ್ಮರಣೀಯ ಮತ್ತು ಸದಾ ಸ್ಮರಣೀಯ ಎಂದು ಕೃತಜ್ಞತೆ ಸಲ್ಲಿಸಿದ್ದಾರೆ.

### ಸಿದ್ದರಾಮಯ್ಯ ಮಾರ್ಗದರ್ಶನ ಮುಂದುವರಿಯಲಿ



2020ರಲ್ಲಿ ನಾನು ಕೆಪಿಸಿಸಿ ಅಧ್ಯಕ್ಷನಾಗಿ ಆಯ್ಕೆಯಾದ ದಿನದಿಂದಲೂ ಇಂದಿನವರೆಗೆ, ಸಿದ್ದರಾಮಯ್ಯನವರು ನನ್ನ ಹೆಗಲಿಗೆ ಹೆಗಲು ಕೊಟ್ಟು ಪಕ್ಷ ಸಂಘಟನೆಯಲ್ಲಿ ಜೊತೆಯಾಗಿ ನಿಂತಿದ್ದಾರೆ. ಅವರ ಆಡಳಿತದಲ್ಲಿ ನಾನು ಸಚಿವನಾಗಿ, ಉಪಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸಿ, ಅವರ ಮಾರ್ಗದರ್ಶನ ಪಡೆದುಕೊಂಡಿದ್ದು ನನ್ನ ಭಾಗ್ಯ ಎಂದಿದ್ದಾರೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದಿದ್ದರೂ, ಮುಂದಿನ ದಿನಗಳಲ್ಲೂ ರಾಜ್ಯದ ಹಿತದೃಷ್ಟಿಯಿಂದ ಹಾಗೂ ನಮ್ಮ ಪಕ್ಷದ ಬಲವರ್ಧನೆಗೆ ಅವರ ಮಾರ್ಗದರ್ಶನ, ಹಿರಿಯ ಅನುಭವ ನಮಗೆ ಹೀಗೆಯೇ ಮುಂದುವರಿಯಲಿ ಎಂದು ಆಶಿಸುತ್ತೇನೆ. ಕರ್ನಾಟಕದ ಪ್ರಗತಿಗಾಗಿ ನಾವೆಲ್ಲರೂ ಒಟ್ಟಾಗಿ ನಡೆಯೋಣ" ಎಂಬ ಕರೆ ನೀಡುವ ಮೂಲಕ ಒಗ್ಗಟ್ಟಿನ ಸಂದೇಶ ರವಾನಿಸಿದ್ದಾರೆ.

# ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ತನ್ನ ಹೆಸರು ಪರಿಗಣನೆ ಕೇವಲ ಊಹಾಪೋಹ




**ಬೆಂಗಳೂರು, ಮೇ 29:** ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ತಮ್ಮ ಹೆಸರನ್ನು ಪರಿಗಣಿಸಲಾಗುತ್ತಿದೆ ಎಂಬ ಊಹಾಪೋಹಗಳನ್ನು ಹಿರಿಯ ಕಾಂಗ್ರೆಸ್ ನಾಯಕ ಸತೀಶ್ ಜಾರಕಿಹೊಳಿ ಶುಕ್ರವಾರ ತಳ್ಳಿಹಾಕಿದರು. ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಅವರು ಪಕ್ಷದ ಹೈಕಮಾಂಡ್ ಜೊತೆಗಿನ ಚರ್ಚೆಗಳ ಬಳಿಕ ದೆಹಲಿಯಿಂದ ಮರಳಿದ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸತೀಶ್ ಜಾರಕಿಹೊಳಿ, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಸೇರಿದಂತೆ ಹಿರಿಯ ನಾಯಕರೊಂದಿಗೆ ಸಮಾಲೋಚನೆ ನಡೆಸಿದ ನಂತರ ಪಕ್ಷದ ನಾಯಕತ್ವ ಅಂತಿಮ ನಿರ್ಧಾರ ಕೈಗೊಳ್ಳಲಿದೆ. ನಾನು ಈಗಾಗಲೇ ಹೇಳಿದ್ದೇನೆ, ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ದೆಹಲಿಗೆ ಹೋಗಿದ್ದಾರೆ. ಅವರು ಪಕ್ಷದೊಂದಿಗೆ ಚರ್ಚೆ ನಡೆಸಲಿದ್ದಾರೆ. ಅಲ್ಲಿ ಯಾವ ತೀರ್ಮಾನ ಕೈಗೊಳ್ಳಲಾಗುತ್ತದೆಯೋ ಅದನ್ನು ಒಪ್ಪಿಕೊಳ್ಳುತ್ತೇವೆ. ನನಗೆ ಇನ್ನೂ ಮಾಹಿತಿ ಇಲ್ಲ ಎಂದು ಹೇಳಿದರು.

ತಾವು ಸಚಿವ ಸಚಿವ ಸ್ಥಾನ ಆಕಾಂಕ್ಷಿಯಲ್ಲವೆಂದು ಸ್ಪಷ್ಟಪಡಿಸಿದ ಅವರು, ಸಚಿವ ಸಂಪುಟ ರಚನೆ ಕುರಿತ ಚರ್ಚೆಗಳು ಇನ್ನೂ ಆರಂಭ ವಾಗಿಲ್ಲ. ನಾನು ಸ್ವತಃ ಯಾವುದೇ ಹುದ್ದೆಯ ಆಸೆಪಡುವವನಲ್ಲ. ಚರ್ಚೆಗಳು ಇನ್ನೂ ಆರಂಭವಾಗಿಲ್ಲ. ಚರ್ಚೆಗಳು ನಡೆದಾಗ ನಮ್ಮ ಅಭಿಪ್ರಾಯವನ್ನು ತಿಳಿಸುತ್ತೇವೆ. ಈಗ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಏನು ಚರ್ಚಿಸಿದ ಆಧಾರದ ಮೇಲೆ ತೀರ್ಮಾನ ಕೈಗೊಳ್ಳಲಾಗುತ್ತದೆ. ಎಷ್ಟು ಉಪಮುಖ್ಯ ಮಂತ್ರಿಗಳನ್ನು ನೇಮಿಸಲಾಗುತ್ತದೆ ಅಥವಾ ಇಲ್ಲ ಎಂಬುದರ ಬಗ್ಗೆ ನನಗೆ ಮಾಹಿತಿ ಇಲ್ಲ. ನಾವು ಕಾಯಬೇಕಾಗಿದೆ. ನಾಳೆ ಸಂಜೆ ವೇಳೆಗೆ ಎಲ್ಲವೂ ಸಂಪೂರ್ಣ ಸ್ಪಷ್ಟವಾಗುತ್ತದೆ. ಬಹುಶಃ ಸೋಮವಾರ ದೊಳಗೆ ಪ್ರಕ್ರಿಯೆ ಮುಗಿಯಬಹುದು. ಸೋಮವಾರ ದೊಳಗೆ ಅಥವಾ ಗರಿಷ್ಠ ಮಂಗಳವಾರದೊಳಗೆ ಅಂತಿಮ ಗೊಳ್ಳುತ್ತದೆ ಎಂದು ಕೇಳಿದ್ದೇವೆ ಎಂದರು.

# ರಾಜ್ಯದ ಪ್ರಗತಿಗೆ ಸಿದ್ದರಾಮಯ್ಯ ಕೊಡುಗೆ ಸದಾ ಸ್ಮರಣೀಯ: ಕೃಷ್ಣ ಬೈರೇಗೌಡ



**ಬೆಂಗಳೂರು, ಮೇ 29:** ರಾಜ್ಯದ ಪ್ರಗತಿಗಾಗಿ ನೀವು ನೀಡಿದ ನಾಯಕತ್ವ ಹಾಗೂ ಶ್ರಮ ಶ್ಲಾಘನೀಯ ಎಂದು ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮಾಜಿ ಸಚಿವ ಕೃಷ್ಣ ಬೈರೇಗೌಡ ಕೊಂಡಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬಡವರು, ದೀನದಲಿತರು ಮತ್ತು ಶೋಷಿತರ ಪರವಾಗಿ ನೀವು ರೂಪಿಸಿದ ಯೋಜನೆಗಳು ಸದಾ ಸ್ಮರಣೀಯ.ನಿಮ್ಮ ಆಡಳಿತ ವೈಖರಿ ಮತ್ತು ರಾಜಕೀಯ ಮುತ್ಸದ್ದಿತನ ಕರ್ನಾಟಕದ ಇತಿಹಾಸದಲ್ಲಿ ಉಳಿಯುವಂಥದ್ದು ಎಂದಿದ್ದಾರೆ. ಮುಖ್ಯಮಂತ್ರಿಯಾಗಿ ನೀವು ಸಲ್ಲಿಸಿದ ನಿಸ್ವಾರ್ಥ ಸೇವೆಗೆ ನಾಡಿನ ಜನತೆಯ ಪರವಾಗಿ ಹೃತ್ಪೂರ್ವಕ ಧನ್ಯವಾದಗಳು ಎಂದು ತಿಳಿಸಿದ್ದಾರೆ.

# ಸಿದ್ದರಾಮಯ್ಯ ರಾಜೀನಾಮೆ ಡಾ.ಎಂ.ಸಿ. ಸುಧಾಕರ್ ಭಾವುಕ

**ಬೆಂಗಳೂರು, ಮೇ 29:** ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯಅವರು ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ, ದಾವಣಗೆರೆಯಲ್ಲಿ ಮಾಜಿ ಸಚಿವ ಡಾ. ಎಂ.ಸಿ. ಸುಧಾಕರ್ ಅತ್ಯಂತ ಭಾವುಕರಾಗಿ ಕಣ್ಣೀರು ಹಾಕಿದ್ದಾರೆ. ಕಳೆದ ಎರಡು-ಮೂರು ದಿನಗಳಿಂದ ಸಿದ್ದರಾಮಯ್ಯ ಅವರನ್ನು ಆ ಸ್ಥಿತಿಯಲ್ಲಿ ನೋಡಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ಅವರು ಸಮಾಜದ ಎಲ್ಲಾ ವರ್ಗಗಳನ್ನು ಅತ್ಯಂತ ಸಮಾನವಾಗಿ ತೆಗೆದುಕೊಂಡು ಹೋದ ಅಪರೂಪದ ನಾಯಕರಾಗಿದ್ದಾರೆ. ಅವರು ಪ್ರತಿಯೊಂದು ಸಮುದಾಯಕ್ಕೂ ಸಮಾನತೆ ಮತ್ತು ನ್ಯಾಯ ಒದಗಿಸಿದ ಧೀಮಂತ ವ್ಯಕ್ತಿ ಎಂದು ಶ್ಲಾಘಿಸಿದ್ದಾರೆ.

ರಾಜ್ಯದ ಮುಂದಿನ ರಾಜಕೀಯ ಬದಲಾವಣೆಯ ಬಗ್ಗೆ ಮಾತನಾಡಿದ ಸುಧಾಕರ್, ಪ್ರಸ್ತುತ ಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್ ಅವರು ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಅಧಿಕೃತವಾಗಿ ತಿಳಿಸಿದ್ದಾರೆ.

# ಸೈದ್ಧಾಂತಿಕ ನಿಲುವು, ರಾಜಕೀಯ ಹೋರಾಟಗಳಿಂದ ಸಿದ್ದರಾಮಯ್ಯ ಜನಪ್ರಿಯ: ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಮೇ 29** ಕರ್ನಾಟಕದ ಮುಖ್ಯಮಂತ್ರಿಯಾಗಿ ಅತ್ಯಂತ ಸುದೀರ್ಘಾವಧಿ ಸೇವೆ ಸಲ್ಲಿಸಿದ ದಾಖಲೆಯೊಂದಿಗೆ, ಕಾಂಗ್ರೆಸ್ ಪಕ್ಷದ ಜನಪರ ಯೋಜನೆಗಳು, ಸೈದ್ಧಾಂತಿಕ ನಿಲುವುಗಳು, ರಾಜಕೀಯ ಹೋರಾಟಗಳಿಂದ ಸಿದ್ದರಾಮಯ್ಯ ರಾಜ್ಯದ ಜನತೆಯ ಪ್ರೀತಿಗೆ ಪಾತ್ರರಾಗಿದ್ದಾರೆ ಎಂದು ಮಾಜಿ ಸಚಿವ ಪ್ರಿಯಾಂಕ್ ಖರ್ಗೆ ಕೊಂಡಾಡಿದ್ದಾರೆ.

ತಮ್ಮ ರಾಜಕೀಯ ಜೀವನದ ಆರಂಭದಿಂದಲೂ ಸಂವಿಧಾನದ ಮೌಲ್ಯಗಳು, ಜಾತ್ಯತೀತ ಹಾಗೂ ಸಮಾಜವಾದಿ ತತ್ವಗಳಿಗೆ ಬದ್ಧರಾಗಿ, ಪ್ರಬುದ್ಧ ರಾಜಕಾರಣಕ್ಕೆ ಸಿದ್ದರಾಮಯ್ಯ ಮೇಲ್ಪಂಕ್ತಿ ಹಾಕಿದರು. ನಮ ತಲೆಮಾರಿನ ರಾಜಕಾರಣಿಗಳು, ಭವಿಷ್ಯದ ಯುವ ನಾಯಕರಿಗೆ ಸ್ಫೂರ್ತಿಯಾಗಿದ್ದಾರೆ ಎಂದಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಬರೆದುಕೊಂಡಿರುವ ಅವರು, ನನ್ನ ವೈಯಕ್ತಿಕ ರಾಜಕೀಯ ಬದುಕಿನಲ್ಲಿ, ಬೆಳವಣಿಗೆಯಲ್ಲಿ ಸಿದ್ದರಾಮಯ್ಯ ಅವರ ಮಾರ್ಗದರ್ಶನ ಬಹುಮುಖ್ಯ ಪಾತ್ರವಹಿಸಿದೆ. ಐಟಿ, ಬಿಟಿ ಮತ್ತು ಪ್ರವಾಸೋದ್ಯ ಮದಂತಹ ಮಹತ್ವದ ಖಾತೆಗಳ ಜವಾಬ್ದಾರಿ ವೇಳೆ, ಸಂಪುಟದಲ್ಲಿನ ಅತಿ ಕಿರಿಯ ಸಚಿವ ಎಂಬ ಹಿಂಜರಿಕೆ ಉಂಟಾಗ ದಂತೆ ನನ್ನಲ್ಲಿ ಆತವಿಶ್ವಾಸ ತುಂಬಿದ್ದರು.

ಜೊತೆಗೆ, ಜನಪರ ಯೋಜನೆಗಳನ್ನು ರೂಪಿಸಲು ಸ್ವಾತಂತ್ರ್ಯ ನೀಡಿದರು. ಪ್ರಸಕ್ತ ಅವಧಿಯಲ್ಲಿಯೂ ಎರಡು ಪ್ರಮುಖ ಖಾತೆಗಳ ಜವಾಬ್ದಾರಿಯುತ ಹೊಣೆಗಾರಿಕೆಯಲ್ಲಿ ಅವರ ಮಾರ್ಗದರ್ಶನ ಮೌಲ್ಯಯುತವಾಗಿತ್ತು ಎಂದಿದ್ದಾರೆ.

ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ಭ್ರಷ್ಟಾಚಾರಮುಕ್ತ ಆಡಳಿತ, ಅಭಿವೃದ್ಧಿಪರ ಕೆಲಸಗಳನ್ನು ಮಾಡಿದೆ. ಗ್ಯಾರಂಟಿ ಯೋಜನೆಗಳು ಜನರಿಗೆ ಆರ್ಥಿಕ ಶಕ್ತಿ ತುಂಬಿವೆ. ಇಂತಹ ಮುತ್ಸದ್ದಿ ನಾಯಕರ ಸಂಪುಟದಲ್ಲಿ ಸಚಿವ ಸ್ಥಾನ ನಿಭಾಯಿಸಿರುವುದು ನನಗೆ ಹೆಮ್ಮೆಯ ಸಂಗತಿ ಎಂದಿದ್ದಾರೆ.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನದಿಂದ ನಿರ್ಗಮಿಸಿರುವುದು ನಮೆಲ್ಲರಿಗೂ ಭಾವುಕ ಸಂಗತಿ. ತಮ್ಮ ಮೌಲ್ಯಗಳಿಗೆ ಬದ್ಧರಾಗಿ, ಸಮಾಜಮುಖಿ ಕಾರ್ಯಗಳಿಂದ ಜನರಿಗೆ ಹತ್ತಿರವಾಗಿದ್ದ ಸಿದ್ದರಾಮಯ್ಯ ಅವರ ಕೊಡುಗೆಗಳನ್ನು ನೆನಪಿಸಿಕೊಳ್ಳುವುದಾಗಿ ಹೇಳಿದ್ದಾರೆ.

ಸಿದ್ದರಾಮಯ್ಯ ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಮೂಲಕ, ಕೋಮುವಾದಿ ಶಕ್ತಿಗಳಿಂದ ರಾಜ್ಯವನ್ನು ರಕ್ಷಿಸುವ ಅಗತ್ಯ ಇದೆ. ಸಿದ್ದರಾಮನಹುಂಡಿಯಿಂದ ವಿಧಾನಸೌಧದವರೆಗೆ ಅವರ ರಾಜಕೀಯ ಜೀವನ ಮುಂಬರುವ ಪೀಳಿಗೆಗೂ ಪ್ರೇರಣೆಯ ಶಾಶ್ವತ ಚಿಲುಮೆಯಾಗಿರಲಿದೆ ಎಂದಿದ್ದಾರೆ.

# ಅಹಿಂದ ಧ್ವಜ ಮುಂದಕ್ಕೆ ಕೊಂಡೊಯ್ಯುವೆ: ಸತೀಶ್ ಜಾರಕಿಹೊಳಿ ಸಂಕಲ್ಪ

ಬೆಂಗಳೂರು, ಮೇ 29: ಹೈಕಮಾಂಡ್ ಜೊತೆಗಿನ ಮುಂಚಿನ ಒಪ್ಪಂದದಂತೆಯೇ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಅವರ ಮಾರ್ಗದರ್ಶನದಲ್ಲೇ ಅಹಿಂದ ಧ್ವಜವನ್ನು ಮುಂದಕ್ಕೆ ಕೊಂಡೊಯ್ಯಲಿದ್ದೇನೆ ಎಂದು ಕಾಂಗ್ರೆಸ್ ನಾಯಕ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯ ರಾಜಕೀಯದ ಇತ್ತೀಚಿನ ವಿದ್ಯಮಾನಗಳು ಹಾಗೂ ನಾಯಕತ್ವ ಬದಲಾವಣೆಯ ಕುರಿತು ಮುಕ್ತವಾಗಿ ಮಾತನಾಡಿ, ಅಹಿಂದ ವರ್ಗದಲ್ಲಿ ಸುಮಾರು 500 ಜಾತಿಗಳಿವೆ. ಯಾರಾದರೂ ಒಬ್ಬರು ಅಹಿಂದ ಧ್ವಜವನ್ನು ಮುಂದೆ ಕೊಂಡೊಯ್ಯಲೇ ಬೇಕು, ಆ ಜವಾಬ್ದಾರಿಯನ್ನು ನಾನು ತೆಗೆದುಕೊಳ್ಳುತ್ತೇನೆ. ರಾಜ್ಯದಲ್ಲಿ ಸದ್ಯ ಅಂತಹ ವ್ಯವಸ್ಥೆಯಿದ್ದು, ಹೊಸ ಅಹಿಂದ ನಾಯಕ ಉದಯವಾಗಲೇ ಬೇಕಿದೆ" ಎಂದು ಸತೀಶ್ ಜಾರಕಿಹೊಳಿ ಆಶಯ ವ್ಯಕ್ತಪಡಿಸಿದರು.

ನಾಯಕತ್ವ ಬದಲಾವಣೆಯ ಕುರಿತು ಎಲ್ಲಾ ಮಾತುಕತೆಗಳು ದೆಹಲಿ ಮಟ್ಟದಲ್ಲೇ ನಡೆದಿವೆ. ಬೆಂಗಳೂರಿನಲ್ಲಿ ಈ ಬಗ್ಗೆ ಏನೂ ಆಗಿಲ್ಲ. ಈ ಹಿಂದೆ ನಮ್ಮನ್ನು ಯಾರೂ ಕೇಳಿರಲಿಲ್ಲ. ಈಗ ಸಿದ್ದರಾಮಯ್ಯ ಅವರೇ ಒಪ್ಪಂದದ ಪ್ರಕಾರ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದಿದ್ದಾರೆ ಎಂದು ಸ್ಪಷ್ಟಪಡಿಸಿದರು.

# ಪಕ್ಷ ನೀಡುವ ಜವಾಬ್ದಾರಿ ನಿಭಾಯಿಸಲು ಸಿದ್ಧ: ಈಶ್ವರ ಖಂಡ್ರೆ

ಬೆಂಗಳೂರು, ಮೇ 29: ತಾವು ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ಪಕ್ಷ ನೀಡುವ ಯಾವುದೇ ಜವಾಬ್ದಾರಿ ನಿಭಾಯಿಸಲು ಸಿದ್ಧ ಎಂದು ಮಾಜಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಪೌರಾಡಳಿತ ಸಚಿವನಾಗಿ ಹಲವು ಸುಧಾರಣೆ ತಂದಿದ್ದು, ಸಮ್ಮಿಶ್ರ ಸರ್ಕಾರದ ಸಮಯದಲ್ಲಿ ಮತ್ತು ಬಿಜೆಪಿ ಆಡಳಿತ ಇದ್ದಾಗ 5 ವರ್ಷಗಳ ಕಾಲ ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಪಕ್ಷ ಸಂಘಟನೆಗಾಗಿ ಶ್ರಮಿಸಿದ್ದೇನೆ. ವರಿಷ್ಠರು ಕೈಗೊಳ್ಳುವ ನಿರ್ಧಾರಕ್ಕೆ ತಾವು ಬದ್ಧ ಎಂದರು. ಎಲ್ಲರೂ ದೆಹಲಿಗೆ ಹೋಗಿದ್ದಾರೆ ನೀವು ಇಲ್ಲೇ ಇದ್ದೀರಲ್ಲ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನಾಳೆ ಸಂಜೆ ಶಾಸಕಾಂಗ ಪಕ್ಷದ ಸಭೆ ಇದ್ದು, ಬೆಂಗಳೂರಿನಲ್ಲಿರುವಂತೆ ವರಿಷ್ಠರು ತಿಳಿಸಿದ್ದಾರೆ ಹೀಗಾಗಿ ತಾವು ಇಲ್ಲೇ ಇದ್ದು, ನಾಳೆ ಸಭೆಯ ಬಳಿಕ ಪಕ್ಷದ ವರಿಷ್ಠರನ್ನು ಭೇಟಿ ಮಾಡುವುದಾಗಿ ತಿಳಿಸಿದರು.

ಪಕ್ಷ ನಿಷ್ಠರು ಮತ್ತು ದಕ್ಷತೆಯಿಂದ ಕೆಲಸ ಮಾಡಿದವರನ್ನು ಕಾಂಗ್ರೆಸ್ ಪಕ್ಷ ಸದಾ ಗುರುತಿಸಿ, ಸ್ಥಾನಮಾನ ನೀಡಿದೆ. ನಾನು ಪ್ರಸ್ತುತ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷನೂ ಆಗಿದ್ದು, ತಮ್ಮ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ದೊರಕಬೇಕು. ಹೆಚ್ಚಿನ ಶಾಸಕರಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗಬೇಕು ಎಂಬುದು ತಮ್ಮ ಆಶಯ ಎಂದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ನಿಮಗೆ ದೊರಕಬಹುದೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ಪಕ್ಷ ಯಾವುದೇ ಜವಾಬ್ದಾರಿ ನೀಡಿದರೂ ಕಾಯ, ವಾಚ, ಮನಸಾ ಹಾಗೂ ಶ್ರದ್ಧೆಯಿಂದ ಕೆಲಸ ಮಾಡುತ್ತೇನೆ ಎಂದು ಹೇಳಿದರು. ನಿಮ್ಮ ಹೆಸರು ಉಪ ಮುಖ್ಯಮಂತ್ರಿ ಹುದ್ದೆಗೂ ಕೇಳಿ ಬರುತ್ತಿದೆ. ನೀವು ವರಿಷ್ಠರ ಮುಂದೆ ಈ ಬೇಡಿಕೆ ಇಟ್ಟಿದ್ದೀರಾ ಎಂಬ ವರದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಈಶ್ವರ ಖಂಡ್ರೆ, ವರಿಷ್ಠರು ಡಿಸಿಎಂ ಹುದ್ದೆ ಬಗ್ಗೆ ನಿರ್ಧರಿಸಿದ್ದಾರೋ ಇಲ್ಲವೋ ತಿಳಿದಿಲ್ಲ. ಆದರೆ ತಾವು ಕಳೆದ 3 ವರ್ಷಗಳ ಕಾಲ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವನಾಗಿ ಉತ್ತಮ ಕಾರ್ಯ ಮಾಡಿದ್ದೇನೆ, ಇಲಾಖೆಗೆ ಕಾಯಕಲ್ಪ ನೀಡಿದ್ದೇನೆ ಮತ್ತು ಈ ಹಿಂದೆ ಆಗದ ಹಲವು ಸುಧಾರಣೆ ತಂದ ತೃಪ್ತಿ ನನಗಿದೆ ಎಂದರು.

# ಮಾಜಿ ಸಚಿವ, ಪಾವಗಡದ ವೆಂಕಟರಮಣಪ್ಪ ನಿಧನ

**ಬೆಂಗಳೂರು, ಮೇ 29:** ಗಡಿನಾಡು ಪಾವಗಡ ತಾಲೂಕಿನ ರಾಜಕೀಯ ಮುತ್ಸದ್ದಿ ಹಾಗೂ ಮಾಜಿ ಸಚಿವ ವೆಂಕಟರಮಣಪ್ಪ(78) ಅವರು ಪಾವಗಡದಲ್ಲಿ ಶುಕ್ರವಾರ ವಿಧಿವಶರಾಗಿದ್ದಾರೆ.

ನಾಲ್ಕು ದಶಕಗಳ ಕಾಲ ತಾಲೂಕಿನ ಜನಮನ ಗೆದ್ದಿದ್ದ ಒಬ್ಬ ವರ್ಣರಂಜಿತ ರಾಜಕಾರಣಿಯ ಸುದೀರ್ಘ ಯಾನ ಅಂತ್ಯಗೊಂಡಂತಾಗಿದೆ. ಅವರ ಅಗಲಿಕೆಯಿಂದ ಇಡೀ ಗಡಿನಾಡಿ ನಲ್ಲಿ ಶೋಕದ ಅಲೆ ಎದ್ದಿದೆ. ಮೃತರು ತಮ್ಮ ಹಿರಿಯ ಪುತ್ರರಾದ ಎಚ್.ವಿ. ಕುಮಾರಸ್ವಾಮಿ, ಹಾಲಿ ಶಾಸಕ ಹಾಗೂ ತುಮುಲ್ ಅಧ್ಯಕ್ಷ ಎಚ್.ವಿ. ವೆಂಕಟೇಶ್, ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಸಂಖ್ಯೆಯ ಕಾಂಗ್ರೆಸ್ ಕಾರ್ಯಕರ್ತರು, ಬಂಧು-ಬಳಗ ಹಾಗೂ ಅಭಿಮಾನಿಗಳನ್ನು ಅಗಲಿದ್ದಾರೆ.

**ಎಲ್ಲರ ಮನೆಯ ಮನಸ್ಸಿನ ದೊಡ್ಡಪ್ಪ**

ನಾಲ್ಕು ದಶಕಗಳ ಕಾಲ ಪಾವಗಡದ ರಾಜಕಾರಣವನ್ನು ಮುನ್ನಡೆಸಿದ್ದ ವೆಂಕಟರಮಣಪ್ಪ ಅವರು ಕೇವಲ ರಾಜಕಾರಣಿಯಾಗಿರಲಿಲ್ಲ. ತಾಲೂಕಿನ ಪ್ರತಿಯೊಂದು ಹಳ್ಳಿಯ ಜನರ ಸುಖ-ದುಃಖಗಳಲ್ಲಿ ಭಾಗಿಯಾಗುತ್ತಾ, ಜನಸಾಮಾನ್ಯರ ಪ್ರೀತಿಯ ಎಲ್ಲರ ಮನೆಯ ಮನಸ್ಸಿನ ದೊಡ್ಡಪ್ಪ ಎಂದೇ ಜನಪ್ರಿಯರಾಗಿದ್ದರು.



**ಗಡಿನಾಡಿನ ರಾಜಕೀಯ ಇತಿಹಾಸ ಬದಲಿಸಿದ ನಾಯಕ!**

ಸಾಮಾನ್ಯವಾಗಿ ಗಡಿನಾಡಿ ನಂತಹ ಕ್ಷೇತ್ರಗಳಿಂದ ಬಂದವರು ರಾಜ್ಯ ರಾಜ ಕಾರಣ ದಲ್ಲಿ ಪ್ರಭಾವ ಬೀರುವುದು ಮತ್ತು ಸಚಿವ ಸಂಪುಟದಲ್ಲಿ ಸ್ಥಾನ ಪಡೆಯುವುದು ಅತ್ಯಂತ ಕಷ್ಟದ ಮಾತು. ಆದರೆ ವೆಂಕಟರಮಣಪ್ಪ ಅವರು ತಮ್ಮ ಅಪ್ರತಿಮ ಜನಪ್ರಿಯತೆ ಹಾಗೂ ರಾಜಕೀಯ ಚಾಣಾಕ್ಷತ ನದಿಂದ ಅಂತಹ ಅಸಾಧ್ಯಭಿವಾದ ಇತಿಹಾಸವನ್ನು ಸೃಷ್ಟಿಸಿ ತೋರಿಸಿದರು. ಪಾವಗಡ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಎರಡು ಬಾರಿ ಸಚಿವರಾಗಿ ಸೇವೆ ಸಲ್ಲಿಸಿದ ಅಪರೂಪದ ಗೌರವ ಇವರದ್ದಾಗಿದೆ.

2008ರಲ್ಲಿ ಕಾಂಗ್ರೆಸ್ ಟಿಕೆಟ್ ಕೈತಪ್ಪಿದಾಗ ಅಂದಿನ ಬಿಜೆಪಿ ಸರ್ಕಾರದಲ್ಲಿ ಸಣ್ಣ ಕೈಗಾರಿಕೆ ಮತ್ತು ರೇಷ್ಮೆ ಸಚಿವರಾಗಿದ್ದರು. 2018ರಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಕಾರ್ಮಿಕ ಸಚಿವರಾಗಿ ಕಾರ್ಯನಿರ್ವಹಿಸಿದರು. ಬರಪೀಡಿತ ಮತ್ತು ಹಿಂದುಳಿದ ಕ್ಷೇತ್ರವಾದ ಪಾವಗಡದ ಅಭಿವೃದ್ಧಿಗೆ ವೆಂಕಟರಮಣಪ್ಪ ಅವರು ಇತಿಹಾಸದ ಪುಟಗಳಲ್ಲಿ ಉಳಿಯು ವಂತಹ ಕೆಲಸ ಮಾಡಿದ್ದಾರೆ. ಇವರು 1989, 1999, 2008 ಹಾಗೂ 2018ರಲ್ಲಿ ಶಾಸಕರಾಗಿ ಆಯ್ಕೆ ಯಾಗಿದ್ದರು. 1994 ಮತ್ತು 2004ರ ಚುನಾವಣೆಗಳಲ್ಲಿ ಪರಾಜಯ ಅನುಭವಿಸಿದ್ದರು.

ವೆಂಕಟರಮಣಪ್ಪ ಅವರ ನಿಧನಕ್ಕೆ ನಾಡಿನ ಗಣ್ಯರು, ರೈತ ನಾಯಕರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಭಗವಂತನು ಮೃತರ ಆತ್ಮಕ್ಕೆ ಸದ್ಗತಿ ನೀಡಲಿ ಹಾಗೂ ಅವರ ಕುಟುಂಬ ಮತ್ತು ಅಪಾರ ಅಭಿಮಾನಿ ಬಳಗಕ್ಕೆ ಈ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ಕುಮಾರಪಟ್ಟಣದ ಗುರುಭವನ ಆಟದ ಮೈದಾನದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಶುಕ್ರವಾರ ಹನುಮಂತನ ತೋಟದ ಮನೆಯಲ್ಲಿ ಅಂತ್ಯಕ್ರಿಯೆ ನೆರವೇರಿತು.

### ಸಿದ್ದರಾಮಯ್ಯ ಕಂಬನಿ

ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಮಾಜಿ ಸಚಿವ ಪಾವಗಡದ ವೆಂಕಟರಮಣಪ್ಪ ಅವರ ನಿಧನದಿಂದ ದುಃಖಿತನಾಗಿದ್ದೇನೆ. ಅವರೊಬ್ಬ ಸರಳ, ಸಜ್ಜನಿಕೆ, ಜನಾನುರಾಗಿ ನಾಯಕರಾಗಿದ್ದರು. ಅವರ ಅಗಲಿಕೆಯಿಂದ ರಾಜಕೀಯ ರಂಗ ಮಾತ್ರವಲ್ಲ, ಇಡೀ ಸಮಾಜ ಬಡವಾಗಿದೆ. ಸಮಾಜದ ಶ್ರಮಿಕರು, ದುಡಿಯುವ ವರ್ಗದ ಜನರ ಬಗ್ಗೆ ವೆಂಕಟರಮಣಪ್ಪ ಅವರಿಗಿದ್ದ ವಿಶೇಷ ಕಾಳಜಿಯನ್ನು ಗುರುತಿಸಿ, 2013-18ರ ವರೆಗಿನ ನನ್ನ ಸರ್ಕಾರದಲ್ಲಿ ಕಾರ್ಮಿಕ ಸಚಿವರಾಗಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡಲಾಗಿತ್ತು. ಪ್ರಾಮಾಣಿಕ ಸೇವೆಯ ಮೂಲಕ ತಮಗೆ ದೊರೆತ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು, ಕಾರ್ಮಿಕ ವರ್ಗದ ಹಿತ ಕಾಯುವಲ್ಲಿ ಯಶಸ್ವಿಯಾಗಿದ್ದರು. ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಕಂಬನಿ ಮಿಡಿದಿದ್ದಾರೆ.

# ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರಿಂದ ಬೆಳ್ತಂಗಡಿಯಲ್ಲಿ ಸುಸಜ್ಜಿತ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್ ಉದ್ಘಾಟನೆ ನಾಳೆ

**ಮೇ.31; ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಬೆಳ್ತಂಗಡಿಯ ಸುಸಜ್ಜಿತ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್ ಉದ್ಘಾಟನಾ ಸಮಾರಂಭದಲ್ಲಿ ಭಾಗಿ**



ಮುಂಬಯಿ, ಮೇ. 29: ಕರ್ನಾಟಕ ಕರಾವಳಿಯ ಬೆಳ್ತಂಗಡಿಯಲ್ಲಿ ನಿರ್ಮಾಣ ಗೊಂಡಿರುವ ಸುಸಜ್ಜಿತ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್ ಉದ್ಘಾಟನಾ ಸಮಾರಂಭ ಭಾನುವಾರ (ಮೇ.31) ಅಮೃತವರ್ಷಿಣಿ ಸಭಾಭವನ, ಧರ್ಮಸ್ಥಳ ಇಲ್ಲಿ ಭಾರತದ ಗೌರವಾನ್ವಿತ ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಉದ್ಘಾಟಿಸಲಿದ್ದಾರೆ.

ಅಂದು ಬೆಳಗ್ಗೆ 11:00 ಗಂಟೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಮತ್ತು ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಹಾಗೂ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ ಅಧ್ಯಕ್ಷ ಡಾ। ಡಿ.ವೀರೇಂದ್ರ ಹೆಗ್ಗಡೆ ಉಪಸ್ಥಿತಿಯಲ್ಲಿ ಉದ್ಘಾಟನಾ ಸಮಾರಂಭವು ನೆರವೇರಲಿದೆ.

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾಗಿದ್ದ ದಿನೇಶ್ ಗುಂಡೂರಾವ್, ದಕ್ಷಿಣ ಕನ್ನಡ ಜಿಲ್ಲಾ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ವಿಧಾನ ಪರಿಷತ್ ಸದಸ್ಯ ಕೆ. ಪ್ರತಾಪಸಿಂಹ ನಾಯಕ್, ರಾಜ್ಯಸಭೆ (ದೆಹಲಿ) ಇದರ ಕಾರ್ಯದರ್ಶಿ ಡಾ। ಕೆ.ಎಸ್ ಸೋಮಶೇಖರ್, ಬೆಳ್ತಂಗಡಿ ವಿಧಾನಸಭಾ ಸದಸ್ಯ ಹರೀಶ್ ಪೂಂಜ, ಸಿರಿ (ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ) ಸಂಸ್ಥಾಪಕಿ ಹಾಗೂ ಜ್ಞಾನವಿಕಾಸ ಕಾರ್ಯಕ್ರಮ, ಧರ್ಮಸ್ಥಳ ಇದರ ಅಧ್ಯಕ್ಷೆ ಹೇಮಾವತಿ ವೀ.ಹೆಗ್ಗಡೆ, ಎಸ್.ಡಿ.ಎಂ. ಶಿಕ್ಷಣ ಸಂಸ್ಥೆ ಉಜಿರೆ ಇದರ ಉಪಾಧ್ಯಕ್ಷ ಡಿ.ಸುರೇಂದ್ರ ಕುಮಾರ್ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಆ ನಿಮಿತ್ತ ಬೆಳ್ತಂಗಡಿ ಇಲ್ಲಿನ ರೆಂಕೆದಗುತ್ತು ಇಲ್ಲಿನ ಸಿರಿ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್ ಜನಾರ್ದನ ಮತ್ತು ಆಡಳಿತ ಮಂಡಳಿಯ ನಿರ್ದೇಶಕರು ಮತ್ತು ಸದಸ್ಯರು ಹಾಗೂ ಸಿರಿ ಸಿಬ್ಬಂದಿಗಳು ಈ ಕಾರ್ಯಕ್ರಮಕ್ಕೆ ಹೃತ್ಪೂರ್ವಕವಾಗಿ ಆಹ್ವಾನಿಸಿದ್ದಾರೆ. ಮುಂಬಯಿ, ಮೇ. 29: ಕರ್ನಾಟಕ ಕರಾವಳಿಯ ಬೆಳ್ತಂಗಡಿಯಲ್ಲಿ ನಿರ್ಮಾಣ ಗೊಂಡಿರುವ ಸುಸಜ್ಜಿತ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್ ಉದ್ಘಾಟನಾ ಸಮಾರಂಭವು ನಾಳೆ ಭಾನುವಾರ (ಮೇ.31) ಅಮೃತವರ್ಷಿಣಿ ಸಭಾಭವನ, ಧರ್ಮಸ್ಥಳ ಇಲ್ಲಿ ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಉದ್ಘಾಟಿಸಲಿದ್ದಾರೆ.



ಅಂದು ಬೆಳಗ್ಗೆ 11:00 ಗಂಟೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಮತ್ತು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಹಾಗೂ ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ ಅಧ್ಯಕ್ಷ ಡಾ। ಡಿ.ವೀರೇಂದ್ರ ಹೆಗ್ಗಡೆ ಗೌರವ ಉಪಸ್ಥಿತಿಯಲ್ಲಿ ಉದ್ಘಾಟನಾ ಸಮಾರಂಭವು ನೆರವೇರಲಿದೆ.

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ದಕ್ಷಿಣ ಕನ್ನಡ ಜಿಲ್ಲಾ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ವಿಧಾನ ಪರಿಷತ್ ಸದಸ್ಯ ಕೆ.ಪ್ರತಾಪಸಿಂಹ ನಾಯಕ್, ರಾಜ್ಯಸಭೆ (ದೆಹಲಿ) ಇದರ ಕಾರ್ಯದರ್ಶಿ ಡಾ। ಕೆ.ಎಸ್ ಸೋಮಶೇಖರ್, ಬೆಳ್ತಂಗಡಿ ವಿಧಾನಸಭಾ ಸದಸ್ಯ ಹರೀಶ್ ಪೂಂಜ, ಸಿರಿ ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ) ಸಂಸ್ಥಾಪಕಿ ಹಾಗೂ ಜ್ಞಾನವಿಕಾಸ ಕಾರ್ಯಕ್ರಮ, ಧರ್ಮಸ್ಥಳ ಇದರ ಅಧ್ಯಕ್ಷೆ ಹೇಮಾವತಿ ವೀ.ಹೆಗ್ಗಡೆ, ಎಸ್.ಡಿ.ಎಂ. ಶಿಕ್ಷಣ ಸಂಸ್ಥೆ ಉಜಿರೆ ಇದರ ಉಪಾಧ್ಯಕ್ಷ ಡಿ.ಸುರೇಂದ್ರ ಕುಮಾರ್ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಆ ನಿಮಿತ್ತ ಬೆಳ್ತಂಗಡಿ ಇಲ್ಲಿನ ರೆಂಕೆದಗುತ್ತು ಇಲ್ಲಿನ ಸಿರಿ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್ ಜನಾರ್ದನ ಮತ್ತು ಆಡಳಿತ ಮಂಡಳಿಯ ನಿರ್ದೇಶಕರು ಮತ್ತು ಸದಸ್ಯರು ಹಾಗೂ ಸಿರಿ ಸಿಬ್ಬಂದಿಗಳು ಈ ಕಾರ್ಯಕ್ರಮಕ್ಕೆ ಹೃತ್ಪೂರ್ವಕವಾಗಿ ಆಹ್ವಾನಿಸಿದ್ದಾರೆ

# ಏಷ್ಯನ್ ಗೇಮ್ಸ್ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ವಿನೇಶ್ ಪೋಗಟ್‌ಗೆ ಸುಪ್ರೀಂ ಅಸ್ತು





ನವದೆಹಲಿ, ಮೇ 29: 2026ರ ಏಷ್ಯನ್ ಕ್ರೀಡಾಕೂಟ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಕುಸ್ತಿಪಟು ವಿನೇಶ್ ಪೋಗಟ್ ಅವರಿಗೆ ಅನುಮತಿ ನೀಡಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಭಾರತೀಯ ಕುಸ್ತಿ ಫೆಡರೇಶನ್ (ಡಬ್ಲ್ಯೂಎಫ್‌ಐ) ಸಲ್ಲಿಸಿದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ವಿನೇಶ್ ಪೋಗಟ್‌ಗೆ ಏಷ್ಯನ್ ಗೇಮ್ಸ್ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುಮತಿ ನೀಡಿದೆ.

ನ್ಯಾಯಮೂರ್ತಿಗಳು ಪಿಎಸ್ ನರಸಿಂಹ ಮತ್ತು ನ್ಯಾಯಮೂರ್ತಿ ಅಲೋಕ್ ಆರಾಧೆ ಅವರನ್ನೊಳಗೊಂಡ ಪೀಠವು ಈ ಅರ್ಜಿ ವಿಚಾರಣೆ ನಡೆಸಿದೆ. ಪೀಠವು ವಿನೇಶ್ ಪೋಗಟ್‌ಗೆ ಸುಪ್ರೀಂ ಕೋರ್ಟ್ ಅನುಮತಿ ನೀಡಿದ್ದರೂ ಅರ್ಜಿ ವಜಾಗೊಳಿಸಿಲ್ಲ. ಪೋಗಟ್ ಅವರಿಗೆ ಡಬ್ಲ್ಯೂಎಫ್ ಐ ಸಲ್ಲಿಸಿದ ಅರ್ಜಿ ಸಂಬಂಧ ನೋಟಿಸ್ ಜಾರಿ ಮಾಡಿದೆ. ಮೇ 22ರಂದು ದೆಹಲಿ ಹೈಕೋರ್ಟ್ ಪೋಗಟ್ ಅವರಿಗೆ ಮೇ 30 ಮತ್ತು 31ರಂದು ನಿಗದಿಯಾಗಿರುವ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ನೀಡಬೇಕೆಂದು ಆದೇಶಿಸಿತ್ತು. ಭಾರತೀಯ ಕುಸ್ತಿ ಒಕ್ಕೂಟ ವಿನೇಶ್ ಅವರನ್ನು 'ಅನರ್ಹ' ಎಂದು ಘೋಷಿಸಿದ್ದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿ ಈ ಆದೇಶವನ್ನು ನೀಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಡಬ್ಲ್ಯೂಎಫ್ ಐ ಸಲ್ಲಿಸಿದ ಅರ್ಜಿ ವಿಚಾರಣೆ ನಡೆಸಿದ ಪೀಠವು ನಾವು ತಡೆಯುವುದಿಲ್ಲ, ನೀವು ಹೋಗಿ ಭಾಗವಹಿಸಿ ಎಂದು ನ್ಯಾಯಮೂರ್ತಿ ನರಸಿಂಹ ಹೇಳಿದ್ದಾರೆ. ಆದರೆ ದೆಹಲಿ ಹೈಕೋರ್ಟ್ ಆದೇಶ ನೀಡುವ ವೇಳೆ ಅಳವಡಿಸಿಕೊಂಡ ವಿಧಾನವನ್ನು ಪ್ರಶ್ನಿಸಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ದೆಹಲಿಯಲ್ಲಿ ವರಿಷ್ಠರ ಭೇಟಿ, ಮಾತುಕತೆ; ಧನ್ಯವಾದ ಹೇಳಿದ ಸಿದ್ದರಾಮಯ್ಯ



**ಬೆಂಗಳೂರು, ಮೇ 29:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಯಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿಮಾಡಿ ಈವರೆಗಿನ ಎಲ್ಲಾ ಅವಕಾಶಗಳಿಗಾಗಿ ಧನ್ಯವಾದ ಹೇಳಿದ್ದಾರೆ. ಗುರುವಾರ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿ ದೆಹಲಿಗೆ ತೆರಳಿದ ಅವರು, ಶುಕ್ರವಾರ ಬೆಳಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದರು.

ಖರ್ಗೆ ಅವರು ಸಿದ್ದರಾಮಯ್ಯ ಅವರ ಭುಜ ತಟ್ಟಿ, ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಕ್ಕಾಗಿ ಶ್ಲಾಘಿಸಿದರು. ಸಿದ್ದರಾಮಯ್ಯ ಅವರು ಭಾವೋದ್ವೇಗದಿಂದಲೇ ಖರ್ಗೆ ಅವರೊಂದಿಗೆ ಮಾತುಕತೆ ನಡೆಸಿದರು ಎನ್ನಲಾಗಿದೆ.

ಮಾಜಿ ಸಚಿವರಾದ ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ವಿಧಾನ ಪರಿಷತ್ತಿನ ಸದಸ್ಯ ಡಾ.ಯತೀಂದ್ರ ಈ ವೇಳೆ ಉಪಸ್ಥಿತರಿದ್ದರು. ನಂತರ 10 ಜನಪಥ್ ರಸ್ತೆಯಲ್ಲಿರುವ ಸೋನಿಯಾ ಗಾಂಧಿ ನಿವಾಸಕ್ಕೂ ಭೇಟಿ ನೀಡಿದ ಸಿದ್ದರಾಮಯ್ಯ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸೋನಿಯಾ ಗಾಂಧಿಯವರೊಂದಿಗೆ ಮಾತುಕತೆ ನಡೆಸಿದರು.

ಮಾತುಕತೆ ಮುಗಿಸಿ ಹೊರ ಬಂದ ಸಿದ್ದರಾಮಯ್ಯ ಅವರನ್ನು ರಾಹುಲ್ ಗಾಂಧಿಯವರು ಕಾರಿನವರೆಗೂ ಬಂದು ಬೀಳ್ಕೊಟ್ಟರು. ಸಿದ್ದರಾಮಯ್ಯ ಅವರನ್ನು ಅಪ್ಪಿ ಅಭಿನಂದನೆ ಸಲ್ಲಿಸಿದ್ದಾರೆ. ಇದು ಮತ್ತಷ್ಟು ಭಾವನಾತಕ ಸನ್ನಿವೇಶ ಸೃಷ್ಟಿಸಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿ ಮಾಡಿ, ಸಿದ್ದರಾಮಯ್ಯ ಚರ್ಚೆ ನಡೆಸಿದ್ದಾರೆ. ನಿನ್ನೆ ಬೆಂಗಳೂರಿನಲ್ಲೇ ಇದ್ದ ಮತ್ತೊಬ್ಬ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ಅವರು ಖುದ್ದಾಗಿ ಸಿದ್ದರಾಮಯ್ಯ ಅವರನ್ನು ವಿಶೇಷ ವಿಮಾನದಲ್ಲಿ ದೆಹಲಿಗೆ ಕರೆದುಕೊಂಡು ಹೋಗಿದ್ದರು.

ದೆಹಲಿಯಲ್ಲೇ ಇರುವ ಡಿ.ಕೆ.ಶಿವಕುಮಾರ್ ಅವರೊಂದಿಗೆ ಸಿದ್ದರಾಮಯ್ಯ ಇಂದು ಚರ್ಚೆ ನಡೆಸಿದ್ದು, ನಾಳೆ ಶಾಸಕಾಂಗ ಸಭೆ ನಡೆಸಲು ನಿರ್ಧರಿಸಿದ್ದಾರೆ. ಈ ವೇಳೆ ಮಾಜಿ ಸಚಿವ ಕೆ.ಜೆ.ಜಾರ್ಜ್ ಉಪಸ್ಥಿತರಿದ್ದರು.

## ವರಿಷ್ಠರಿಗೆ ಬೇಡಿಕೆಗಳ ಪಟ್ಟಿ ಸಲ್ಲಿಸಿದ್ದ ಸಿದ್ದರಾಮಯ್ಯ

ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿದ ಮರುದಿನವೇ ದೆಹಲಿಗೆ ತೆರಳಿದ ಸಿದ್ದರಾಮಯ್ಯ ಅವರು ಪಕ್ಷದ ವರಿಷ್ಠರನ್ನು ಭೇಟಿ ಮಾಡಿದ್ದಾರೆ. ಶುಕ್ರವಾರ ದಿಲ್ಲಿಯಲ್ಲಿ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ್ದು, ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸರಕಾರದಲ್ಲಿ ತಮ್ಮ ಪುತ್ರ ಯತೀಂದ್ರ ಅವರಿಗೆ ಪ್ರಮುಖ ಖಾತೆ ಸೇರಿದಂತೆ ಪಕ್ಷದ ಹೈಕಮಾಂಡ್ ಮುಂದೆ ತಮ್ಮ ಬೇಡಿಕೆಗಳ ಪಟ್ಟಿಯನ್ನು ಸಲ್ಲಿಸಿದ್ದಾರೆ ಎನ್ನಲಾಗಿದೆ. ಮೂಲಗಳ ಪ್ರಕಾರ, ಸಿದ್ದರಾಮಯ್ಯ ಅವರು ರಾಜ್ಯಸಭೆ ಮತ್ತು ಎಂಎಲ್‌ಸಿ ಚುನಾವಣೆಗೆ ಅಭ್ಯರ್ಥಿಗಳ ಪಟ್ಟಿ ಮತ್ತು ಸಂಪುಟ ಸ್ಥಾನಗಳಿಗೆ ಸಂಬಂಧಿಸಿದ ಪಟ್ಟಿಯನ್ನು ಸಲ್ಲಿಸಿದ್ದಾರೆ. ಪುತ್ರ ಯತೀಂದ್ರ ಅವರಿಗೆ ವೈದ್ಯಕೀಯ ಶಿಕ್ಷಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ಡಿಕೆ ಶಿವಕುಮಾರ್ ಹೊಂದಿದ್ದ ಕೈಗಾರಿಕೆ ಅಥವಾ ಜಲಸಂಪನ್ಮೂಲ ಖಾತೆಯನ್ನು ನೀಡುವಂತೆ ಹೈಕಮಾಂಡ್ ಬಳಿ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ನಿಮಗೆ ನಾವು ಕೃತಜ್ಞರು: ಸಿದ್ದರಾಮಯ್ಯ ರಾಜಕೀಯ ಸೇವೆ ಕೊಂಡಾಡಿದ ಖರ್ಗೆ

ಸಿದ್ದರಾಮಯ್ಯ ಅವರ ರಾಜಕೀಯ ಸೇವೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಕೊಂಡಾಡಿ ನಿಮಗೆ ನಾವು ಕೃತಜ್ಞರು ಎಂದು ಹೇಳಿದ್ದಾರೆ. ಸಾರ್ವಜನಿಕ ಜೀವನಕ್ಕೆ ಅವರು ನೀಡಿದ ಕೊಡುಗೆಗಾಗಿ ಕರ್ನಾಟಕ ಮತ್ತು ಕಾಂಗ್ರೆಸ್ ಪಕ್ಷ ಕೃತಜ್ಞರಾಗಿವೆ. ಅವರಿಗೆ ಉತ್ತಮ ಆರೋಗ್ಯ ಸಿಗಲಿ ಮತ್ತು ನಿರಂತರ ಜನಸೇವೆಯಲ್ಲಿ ತೊಡಗಿಕೊಳ್ಳಲಿ ಎಂದು ಖರ್ಗೆ ಆಶಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸಿದ್ದರಾಮಯ್ಯ ಅವರ ಸಾರ್ವಜನಿಕ ಜೀವನ ಸದಾ ಗೌರವ, ಕರುಣೆ ಮತ್ತು ಸಾಮಾಜಿಕ ನ್ಯಾಯದ ಬದ್ಧತೆಯನ್ನು ಪ್ರತಿಬಿಂಬಿಸಿದೆ. ತಮ್ಮ ಜೀವನದ ಆರಂಭದಿಂದಲೇ ಸಮಾನತೆ ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಡಿದ್ದಾರೆ. ಸರಳ ಹಿನ್ನೆಲೆಯಿಂದ ಬಂದ ಸಿದ್ದರಾಮಯ್ಯ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಎರಡು ಬಾರಿ ಸೇವೆ ಸಲ್ಲಿಸಿದ್ದು, ತಮ್ಮ ಆಡಳಿತಾವಧಿಯಲ್ಲಿ ಸಮಾನತೆ, ಸೌಹಾರ್ದತೆ ಹಾಗೂ ಹಿಂದುಳಿದವರ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು ಎಂದು ತಿಳಿಸಿದ್ದಾರೆ. ಕರ್ನಾಟಕ ಹಾಗೂ ಕಾಂಗ್ರೆಸ್ ಪಕ್ಷವು ಅವರ ಸಾರ್ವಜನಿಕ ಸೇವೆಗೆ ಸದಾ ಕೃತಜ್ಞವಾಗಿದೆ. ಸಿದ್ದರಾಮಯ್ಯ ಅವರಿಗೆ ಉತ್ತಮ ಆರೋಗ್ಯ ಹಾಗೂ ಜನಸೇವೆಯಲ್ಲಿ ಮುಂದುವರಿದ ಯಶಸ್ಸು ದೊರೆಯಲಿ ಎಂದು ಹಾರೈಸಿದ್ದಾರೆ.

ಸಿದ್ದರಾಮಯ್ಯ ಜತೆಗಿನ ಛಾಯಾಚಿತ್ರಗಳನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.



ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಶುಕ್ರವಾರ ನವದೆಹಲಿಯಲ್ಲಿ ಸೈನಿಕರ ವೈಯಕ್ತಿಕ ಸಾಕ್ಷ್ಯಗಳನ್ನು ದಾಖಲಿಸುವ ಆಪರೇಷನ್ ಸಿಂಧೂರ್ ಕುರಿತ ಸ್ಮರಣಾರ್ಥ ಪುಸ್ತಕವನ್ನು ಬಿಡುಗಡೆ ಮಾಡಿದರು.

# ರಾಜೀನಾಮೆ ನಿರ್ಧಾರದ ಸಿದ್ದರಾಮಯ್ಯ ನಡೆ ಮಾದರಿ: ದಿನೇಶ್ ಗುಂಡೂರಾವ್



**ಬೆಂಗಳೂರು, ಮೇ. 29:** ಹೈಕಮಾಂಡ್ ತೀರ್ಮಾನದಂತೆ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರ ನಡೆ ನಿಜಕ್ಕೂ ಮಾದರಿ, ಅವರು ನಮ್ಮ ಪ್ರಶ್ನಾತೀತ ನಾಯಕರು ಎಂದು ಮಾಜಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಮಾಧ್ಯಮದವರ ಜೊತೆ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಬದಲಾವಣೆ ಇದೊಂದು ಪ್ರಕ್ರಿಯೆ. ಹೈಕಮಾಂಡ್ ತೀರ್ಮಾನದಂತೆ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದಾರೆ. ಈ ಹಿಂದೆಯೂ ಅವರು ನಾನು ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಹೇಳಿದ್ದರು. ಅದರಂತೆ ನಡೆದುಕೊಂಡಿದ್ದಾರೆ. ಅವರ ನಡೆ ನಿಜಕ್ಕೂ ಮಾದರಿ ಎಂದಿದ್ದಾರೆ.

ಹೊಸ ಸಚಿವ ಸಂಪುಟದ ವಿಚಾರವಾಗಿ ಪ್ರತಿಕ್ರಿಯಿಸಿದ ದಿನೇಶ್ ಗುಂಡೂರಾವ್, ರಾಜಕೀಯದಲ್ಲಿ ಯಾವುದೂ ಪರ್ಮನೆಂಟ್ ಅಲ್ಲ, ಸದ್ಯಕ್ಕೆ ಆ ಚರ್ಚೆ ಅನಗತ್ಯ, ಮೊದಲು ಶಾಸಕಾಂಗ ಪಕ್ಷದ ಸಭೆ ಬಳಿಕ ಮುಖ್ಯಮಂತ್ರಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಆನಂತರ ಬೇರೆ ವಿಚಾರ. ಡಿ.ಕೆ. ಶಿವಕುಮಾರ್ ಮುಂದಿನ ಮುಖ್ಯಮಂತ್ರಿಯಾಗುವ ಸಾಧ್ಯತೆಗಳಿವೆ ಎಂದು ಹೇಳಿದ್ದಾರೆ. ಡಿಸಿಎಂ ಹುದ್ದೆ ಬಗ್ಗೆ ಇದುವರೆಗೆ ಯಾವುದೇ ಚರ್ಚೆ ನಡೆದಿಲ್ಲ. ಇವೆಲ್ಲ ಏನಿದ್ದರೂ ಸಿಎಂ ಹಾಗೂ ವರಿಷ್ಠರು ತೀರ್ಮಾನ ಮಾಡುತ್ತಾರೆ ಎಂದಿದ್ದಾರೆ. ಏನೇನು ಆಗಬೇಕೋ ಅದು ಆಗುತ್ತದೆ. ಮುಖ್ಯವಾಗಿ ನಾವು ಜನರ ಪರವಾಗಿ ಕೆಲಸ ಮಾಡಬೇಕು. ಅವರ ಏಳಿಗೆಗೋಸ್ಕರ ಎಲ್ಲ ರೀತಿಯ ಕಾರ್ಯಕ್ರಮ ಕೊಟ್ಟಿರುವುದೇ ಕಾಂಗ್ರೆಸ್. ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷರೇ ಮಲ್ಲಿಕಾರ್ಜುನ ಖರ್ಗೆ ಸಾಹೇಬರು ಎಂದು ಹೇಳಿದ್ದಾರೆ.

# ಜೂ.5ರಂದು ಸಿಎಂ ಆಗಿ ಡಿಕೆಶಿ ಪ್ರಮಾಣವಚನ ಜ್ಯೋತಿಷಿಗಳ ಸಲಹೆ ಮೇರೆಗೆ ದಿನ ನಿಗದಿ

ಬೆಂಗಳೂರು, ಮೇ 29: ಕರ್ನಾಟಕ ರಾಜಕೀಯ ಇತಿಹಾಸದಲ್ಲಿ ಮತ್ತೊಂದು ಮಹತ್ವದ ಅಧ್ಯಾಯ ಆರಂಭವಾಗಲು ಕ್ಷಣಗಣನೆ ಆರಂಭವಾಗಿದೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ, ರಾಜ್ಯದ ಮುಂದಿನ ಸಾರಥಿಯಾಗಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರ ವಹಿಸಿಕೊಳ್ಳುವುದು ಬಹುತೇಕ ನಿಶ್ಚಿತವಾಗಿದೆ.

ಜ್ಯೋತಿಷಿಗಳ ಸಲಹೆಯ ಮೇರೆಗೆ ಡಿ.ಕೆ. ಶಿವಕುಮಾರ್ ಅವರು ಮುಂದಿನ ತಿಂಗಳು ಅಂದರೆ ಜೂನ್ 5ರಂದು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ನಂಬಲರ್ಹ ಮೂಲಗಳು ತಿಳಿಸಿವೆ.

ಪ್ರಮಾಣವಚನ ಹಾಗೂ ಮುಹೂರ್ತದ ಕುರಿತಾದ ಸಂಪೂರ್ಣ ವಿವರಗಳು ಹೀಗಿವೆ:

ಭಾವಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಜೂನ್ 5ನೇ ತಾರೀಖಿನ ಶುಕ್ರವಾರದಂದು ಸಿಎಂ ಆಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಈ ಹಿಂದೆ ಅವರು ಸೋಮವಾರ ಅಥವಾ ಬುಧವಾರದಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂಬ ಚರ್ಚೆಗಳು ನಡೆದಿದ್ದವು. ಆದರೆ, ಡಿಕೆಶಿ ಅವರ ಆಪ್ತ ಜ್ಯೋತಿಷಿ ಡಾ. ಬಿ.ಪಿ. ಆರಾಧ್ಯ ಅವರ ಸಲಹೆಯಂತೆ, ಶುಕ್ರವಾರ ಮಧ್ಯಾಹ್ನ 12.30ಕ್ಕೆ ಬರಲಿರುವ ಶುಭ 'ಅಭಿಜಿನ್ ಲಗ್ನ'ದಲ್ಲಿ ಪ್ರಮಾಣ ವಚನ ಸ್ವೀಕರಿಸಲು ದಿನ ನಿಗದಿಪಡಿಸಲಾಗಿದೆ

**ಕುಮಾರಕೃಪಾ ಗೆಸ್ಟ್‌ಹೌಸ್ ನವೀಕರಣ**

ಮುಖ್ಯಮಂತ್ರಿಯಾದ ಬಳಿಕ ಡಿ.ಕೆ. ಶಿವಕುಮಾರ್ ಅವರ ಅಧಿಕೃತ ಸರ್ಕಾರಿ ವಸತಿಗೃಹವಾಗಲಿರುವ 'ಕುಮಾರಕೃಪಾ ಗೆಸ್ಟ್‌ಹೌಸ್'ನ ಕಟ್ಟಡದಲ್ಲಿ ನವೀಕರಣ ಕಾರ್ಯ ಭರದಿಂದ ಸಾಗುತ್ತಿದೆ. ಆರಾಧ್ಯ ಅವರ ಸಲಹೆಯಂತೆ, ದೇವಮೂಲೆಯಿಂದಲೇ ವಸತಿ ಗೃಹಕ್ಕೆ ಪ್ರವೇಶ ಮಾಡಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಈ ಹಿಂದಿನ ಕುಮಾರಕೃಪಾದ 'ಎಕ್ಸಿಟ್ ಪಾಯಿಂಟ್' (ಹೊರಹೋಗುವ ದಾರಿ) ಅನ್ನು ಇನ್ಮುಂದೆ 'ಎಂಟ್ರಿ ಗೇಟ್' (ಪ್ರವೇಶದ್ವಾರ) ಆಗಿ ಬದಲಾಯಿಸಲು ಡಿಕೆಶಿ ಸೂಚಿಸಿದ್ದಾರೆ.. ಈಗಾಗಲೇ ಅವರ ಆಪ್ತ ಕಾರ್ಯದರ್ಶಿ ರಾಜೇಂದ್ರ ಪ್ರಸಾದ್ ಅವರು ಜ್ಯೋತಿಷಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**3 ಸ್ಥಳಗಳಲ್ಲಿ ಒಂದರಲ್ಲಿ ಕಾರ್ಯಕ್ರಮ**

ಡಿ.ಕೆ. ಶಿವಕುಮಾರ್ ಅವರು ಕಂಠೀರವ ಕ್ರೀಡಾಂಗಣ ಅಥವಾ ರಾಜ್‌ಭವನದಲ್ಲಿ ಅಲ್ಲದೆ, ವಿಧಾನಸೌಧದ ಭವ್ಯ ಮುಂಭಾಗದ ಮೆಟ್ಟಿಲುಗಳ ಮೇಲೆ ಪ್ರಮಾಣವಚನ ಸ್ವೀಕರಿಸಲು ತೀರ್ಮಾನಿಸಿದ್ದಾರೆ. ಕಾರ್ಯಕ್ರಮದ ಸಿದ್ಧತೆಗಳ ಕುರಿತು ಸ್ವತಃ ಡಿಕೆಶಿ ಅವರೇ ರಾಜ್ಯ ಮುಖ್ಯ ಕಾರ್ಯದರ್ಶಿಗೆ ದೂರವಾಣಿ ಕರೆ ಮಾಡಿ ಅಗತ್ಯ ಸೂಚನೆಗಳನ್ನು ನೀಡಿದ್ದಾರೆ ಎಂದು ತಿಳಿದುಬಂದಿದೆ. ಮೂಲಗಳ ಪ್ರಕಾರ ಡಿಕೆಶಿ ಜೊತೆಗೆ 7 ಮಂದಿ ಹಿರಿಯ ಮತ್ತು ಅನುಭವಿ ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದ್ದರೆ, ಮತ್ತೊಂದು ಮೂಲಗಳ ಪ್ರಕಾರ 12 ರಿಂದ 13 ಮಂದಿ ನೂತನ ಸಚಿವರು ಮೊದಲ ಹಂತದಲ್ಲೇ ಕ್ಯಾಬಿನೆಟ್ ಸೇರಲಿದ್ದಾರೆ ಎಂದು ವರದಿಯಾಗಿದೆ.

# ದೆಹಲಿಗೆ ದೌಡಾಯಿಸಿದ ಸಚಿವ ಸ್ಥಾನದ ಆಕಾಂಕ್ಷಿ ಶಾಸಕರು

**ಬೆಂಗಳೂರು, ಮೇ 29:** ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯನವರು ರಾಜೀನಾಮೆ ನೀಡಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನೂತನ ಸಚಿವ ಸಂಪುಟ ರಚನೆಯಾಗುತ್ತಿರುವ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಸಚಿವ ಸ್ಥಾನಕ್ಕಾಗಿ ಲಾಬಿ ಶುರುವಾಗಿದ್ದು, ಸಚಿವಾಕಾಂಕ್ಷಿ ಶಾಸಕರ ದಂಡು ದೆಹಲಿಗೆ ದೌಡಾಯಿಸಿದೆ.

ದೆಹಲಿಯಲ್ಲಿರುವ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ವರಿಷ್ಠರೊಡನೆ ಮುಂದಿನ ಸಚಿವ ಸಂಪುಟದ ಸ್ವರೂಪ, ಯಾರನ್ನೆಲ್ಲಾ ಸಚಿವರನ್ನಾಗಿ ಮಾಡಬೇಕು ಎಂಬ ಬಗ್ಗೆ ಚರ್ಚೆ ನಡೆಸಲಿದ್ದು, ಸಚಿವ ಸ್ಥಾನ ಗಿಟ್ಟಿಸಿಕೊಳ್ಳಲು ಆಕಾಂಕ್ಷಿಗಳು ದೆಹಲಿಯಲ್ಲಿ ಬಿಟ್ಟಿದ್ದಾರೆ.

ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ತಮ್ಮದೇ ಆದ ಸಚಿವಸ್ಥಾನದ ಆಕಾಂಕ್ಷಿಗಳ ಪಟ್ಟಿಯನ್ನು ಕೊಂಡೊಯ್ದಿದ್ದು, ಯಾರನ್ನೆಲ್ಲಾ ಸಚಿವರನ್ನಾಗಿಸಬೇಕು ಎಂಬ ಬಗ್ಗೆ ಚರ್ಚಿಸಲಿದ್ದಾರೆ. ಹೊಸ ಸರ್ಕಾರದಲ್ಲಿ ಎಷ್ಟು ಜನ ಉಪಮುಖ್ಯಮಂತ್ರಿಗಳಿರಬೇಕು, ಯಾವ ಯಾವ ಸಮುದಾಯಕ್ಕೆ ಉಪಮುಖ್ಯಮಂತ್ರಿ ಸ್ಥಾನ ಕೊಡಬೇಕು, ನೂತನ ಸಂಪುಟದಲ್ಲಿ ಸಮುದಾಯವಾರು, ಪ್ರಾದೇಶಿಕವಾರು ಪ್ರಾತಿನಿಧ್ಯ ಎಲ್ಲದರ ಬಗ್ಗೆಯೂ ಹೈಕಮಾಂಡ್ ಜತೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಿದ್ದಾರೆ ಎನ್ನಲಾಗಿದೆ.

**ಹಿರಿಯರಿಗೆ ಕೊಕ್**

ಲಭ್ಯ ಮಾಹಿತಿ ಪ್ರಕಾರ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿದ್ದ 10–12 ಹಿರಿಯ ಸಚಿವರಿಗೆ ಕೊಕ್ ನೀಡಿ ಹೊಸ ಮುಖಗಳಿಗೆ ನೂತನ ಸಂಪುಟದಲ್ಲಿ ಅವಕಾಶ ನೀಡುವ ಬಗ್ಗೆಯೂ ಚರ್ಚೆಗಳು ನಡೆದಿವೆ. ಎರಡು–ಮೂರು ದಿನಗಳಲ್ಲಿ ಸಚಿವರಾಗಲಿರುವವರ ಹೆಸರುಗಳು ಅಂತಿಮವಾಗಲಿವೆ ಎನ್ನಲಾಗಿದೆ.

**ನೂತನ ಸಿಎಂ ಜತೆ ಸಚಿವರ ಪ್ರಮಾಣ**

ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಪ್ರಮಾಣ ವಚನ ಸ್ವೀಕರಿಸುವ ದಿನದಂದೇ ನೂತನ ಸಚಿವರ ಪ್ರಮಾಣ ವಚನವೂ ನಡೆಯಲಿದೆ. ಒಂದೇ ಬಾರಿಗೆ ಸಚಿವ ಸಂಪುಟವನ್ನು ಪೂರ್ಣ ಭರ್ತಿ ಮಾಡಿ ಎಲ್ಲ ಸಚಿವರ ಪ್ರಮಾಣ ವಚನವನ್ನು ನಡೆಸಲು ಹೈಕಮಾಂಡ್ ನಿರ್ಧರಿಸಿದೆ ಎಂದು ಹೇಳಲಾಗಿದೆ.

## ಮೊದಲನೇ ಪುಟದಿಂದ

### ಸಂಪುಟ ರಚನೆ ಬಗ್ಗೆ ತೀರ್ಮಾನ ಆಗಿಲ್ಲ: ಡಿಕೆಶಿ

ಶಿವಕುಮಾರ್ ಇಂದು ಮುಂಜಾನೆ ರಾಷ್ಟ್ರ ರಾಜಧಾನಿಯ ಹೋಟೆಲ್‌ನಲ್ಲಿ ಕಾಂಗ್ರೆಸ್‌ನ ಇತರ ನಾಯಕರನ್ನು ಭೇಟಿಯಾದರು. ಕರ್ನಾಟಕ ಸಚಿವ ಸಂಪುಟ ಪುನರ್‌ರಚನೆ, ರಾಜ್ಯಸಭಾ ಚುನಾವಣೆ ಮತ್ತು ಇತರ ವಿಷಯಗಳ ಕುರಿತು ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್ ಅವರೊಂದಿಗೆ ಚರ್ಚೆ ನಡೆಸಿದರು.

### ಇಂದು ಸಂಜೆ 4ಕ್ಕೆ ಕಾಂಗ್ರೆಸ್ ಶಾಸಕಾಂಗ ಸಭೆ

ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ದೆಹಲಿ ಕಾಂಗ್ರೆಸ್ ಮುಖಂಡರು, ವಿಧಾನಪರಿಷತ್ತಿನ ಸಭಾ ನಾಯಕ ಎನ್.ಎಸ್. ಬೋಸರಾಜ್ ಸೇರಿದಂತೆ ಹಲವು ಪ್ರಮುಖರ ಸಮ್ಮುಖದಲ್ಲಿ ಡಿ.ಕೆ. ಶಿವಕುಮಾರ್ ಅವರನ್ನು ನೂತನ ನಾಯಕರನ್ನಾಗಿ ನೇಮಿಸಲಾಗುತ್ತಿದೆ. ಹಾಲಿ ನಾಯಕ ಸಿದ್ದರಾಮಯ್ಯ ಅವರು ಡಿ.ಕೆ. ಶಿವಅಕುಮಾರ್ ಅವರ ಹೆಸರನ್ನು ಸೂಚಿಸಲಿದ್ದು, ಇದಕ್ಕೆ ಸಭೆ ಅನುಮೋದನೆ ನೀಡಲಿದೆ. ಕಾಂಗ್ರೆಸ್ ಹೈಕಮಾಂಡ್‌ನಿಂದ ಸಿದ್ದರಾಮಯ್ಯ ಮೂಲಕ ಡಿ.ಕೆ.ಶಿವಕುಮಾರ್ ಹೆಸರು ಪ್ರಸ್ತಾಪಿಸಿ ಅನುಮೋದನೆ ಮಾಡಿಸಲು ತೀರ್ಮಾನಿಸಲಾಗಿದೆ. ಶಾಸಕಾಂಗ ಪಕ್ಷದ ನೂತನ ನಾಯಕ ಆಯ್ಕೆಯಾದ ಬಳಿಕ ಲೋಕಭವನಕ್ಕೆ ಮಾಹಿತಿ ರವಾನಿಸಲಾಗುತ್ತದೆ. ಸಭೆಯಲ್ಲಿ ವಿದಾಯ ಭಾಷಣದ ಬಳಿಕ ಸಿದ್ದರಾಮಯ್ಯ ಡಿ.ಕೆ. ಶಿವಕುಮಾರ್ ಹೆಸರು ಸೂಚಿಸಲಿದ್ದಾರೆ. ನಂತರ ಶಿಷ್ಟಾಚಾರದಂತೆ ನೂತನ ನಾಯಕನನ್ನು ಆಯ್ಕೆ ಮಾಡಿ ರಾಜಭವನಕ್ಕೆ ಮಾಹಿತಿ ನೀಡಲಾಗುತ್ತದೆ.

# ಯಶವಂತಪುರ-ವಿಜಯಪುರ ದ್ವೈಸಾಪ್ತಾಹಿಕ ವಿಶೇಷ ರೈಲು ಸಂಚಾರಕ್ಕೆ ಕೇಂದ್ರ ಅಸ್ತು

* **ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪ್ರಸ್ತಾವನೆಗೆ ಮನ್ನಣೆ; ಇನ್ನೆರಡೇ ದಿನದಲ್ಲಿ ಸಂಚಾರ ಶುರು**
* **ಎರಡು ಎಕ್ಸ್ ಪ್ರೆಸ್ ರೈಲು ಸಂಚಾರಕ್ಕೆ ರೈಲ್ವೆ ಇಲಾಖೆ ಅನುಮೋದನೆ**



**ನವದೆಹಲಿ, ಮೇ 29:** ಕರ್ನಾಟಕದ ಶಕ್ತಿ ಕೇಂದ್ರ, ರಾಜಧಾನಿ ಬೆಂಗಳೂರು ಮತ್ತು ಉತ್ತರ ಕರ್ನಾಟಕದ ಸಂಪರ್ಕ ಸೇತುವಾಗಿರುವ ವಿಜಯಪುರ ಮಧ್ಯೆ ಹೊಸ ದ್ವೈಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಕೇಂದ್ರ ಸರ್ಕಾರ ಅಸ್ತು ಎಂದಿದೆ.

ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರ ಒತ್ತಾಸೆ, ಪ್ರಸ್ತಾವನೆ ಮೇರೆಗೆ "ಯಶವಂತಪುರ–ವಿಜಯಪುರ" ನಡುವೆ ಇದೇ ಜೂನ್ 1 ರಿಂದಲೇ ದ್ವಿಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ರೈಲ್ವೆ ಇಲಾಖೆ ಅನುಮೋದಿಸಿದೆ.

ವಿಜಯಪುರ ಭಾಗದ ಜನರ ಬಹು ದಿನದ ಬೇಡಿಕೆ ಮನಗಂಡು ಸಚಿವ ಪ್ರಲ್ಹಾದ ಜೋಶಿ ಅವರು ಕೆಲ ದಿನಗಳಿಂದ ರೈಲ್ವೆ ಇಲಾಖೆ, ಸಚಿವ ಅಶ್ವಿನಿ ವೈಷ್ಣವ್‌ಅವರ ಗಮನ ಸೆಳೆದು ಅಂತೂ ಬೆಂಗಳೂರಿನ ಯಶವಂತಪುರದಿಂದ ವಿಜಯಪುರಕ್ಕೆ ಹೊಸ ದ್ವಿಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಸುಗಮಗೊಳಿಸಿದ್ದಾರೆ.

ಈ ವಿಶೇಷ ಹೈಸ್ಪೀಡ್ ರೈಲು ಯಶವಂತಪುರ–ವಿಜಯಪುರ ಮಧ್ಯೆ ನೇರ ಸಂಪರ್ಕ ಕಲ್ಪಿಸಲಿದೆ. ಪ್ರತಿ ಶನಿವಾರ ಮತ್ತು ಸೋಮವಾರ 06577 ಸಂಖ್ಯೆಯ ರೈಲು ಯಶವಂತಪುರದಿಂದ ವಿಜಯಪುರಕ್ಕೆ ಹಾಗೂ ಪ್ರತಿ ಭಾನುವಾರ ಮತ್ತು ಮಂಗಳವಾರ 06578 ಸಂಖ್ಯೆಯ ವಿಶೇಷ ರೈಲು ವಿಜಯಪುರದಿಂದ ಯಶವಂತಪುರಕ್ಕೆ ಸಂಚರಿಸಲಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ.

**ರಾಜ್ಯದ ರೈಲ್ವೆ ಸೌಲಭ್ಯಕ್ಕೆ ಕೇಂದ್ರ ಬದ್ಧ**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರ ಸಹಕಾರದಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ರೈಲ್ವೆ ಸೌಲಭ್ಯ ಕಲ್ಪಿಸಲು ಯಾವತ್ತೂ ಬದ್ಧವಾಗಿದೆ ಎಂದಿದ್ದಾರೆ.

**ಪ್ರಧಾನಿಗೆ ಸಚಿವ ಜೋಶಿ ಧನ್ಯವಾದ:**

ಕರ್ನಾಟಕದ ರೈಲ್ವೆ ಮೂಲಸೌಕರ್ಯವನ್ನು ಬಲಪಡಿಸಲು ಕೇಂದ್ರ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದ್ದು, ರಾಜ್ಯದ ಪ್ರತಿಯೊಂದು ಯೋಜನೆಗೂ ಸಕಾರಾತ್ಮಕವಾಗಿ ಸ್ಪಂದಿಸುತ್ತಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದಿದ್ದಾರೆ ಸಚಿವ ಪ್ರಲ್ಹಾದ ಜೋಶಿ.

# ಎಲ್ಲ ರಾಜ್ಯಗಳ ರಾಜ್ಯಸಭೆ ಅಭ್ಯರ್ಥಿಗಳ ಪಟ್ಟಿ ಒಟ್ಟಿಗೆ ಬಿಡುಗಡೆ: ಡಿ.ಕೆ. ಶಿವಕುಮಾರ್



**ನವದೆಹಲಿ, ಮೇ 29:** ನನಗೆ ಬಂದಿರುವ ಮಾಹಿತಿ ಪ್ರಕಾರ ಎಲ್ಲಾ ರಾಜ್ಯಗಳ ರಾಜ್ಯಸಭೆ ಅಭ್ಯರ್ಥಿಗಳ ಪಟ್ಟಿಯನ್ನು ಒಟ್ಟಿಗೆ ಬಿಡುಗಡೆ ಮಾಡಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ನವದೆಹಲಿಯಲ್ಲಿ ಮಾಧ್ಯಮಗಳ ಜತೆ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಕೇಳಿದಾಗ, "ವೇಣುಗೋಪಾಲ್ ಅವರು ರಾಜ್ಯಸಭೆ ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ಚರ್ಚೆ ಮಾಡಿರುವುದನ್ನು ಈಗಾಗಲೇ ತಿಳಿಸಿದ್ದಾರೆ. ನಮ್ಮ ನಾಯಕರು ನಮ್ಮ ಅಭಿಪ್ರಾಯಗಳನ್ನು ಸಂಗ್ರಹಿಸಿದ್ದಾರೆ. ಎಲ್ಲಾ ತೀರ್ಮಾನ ಆದ ಬಳಿಕ ನಮ್ಮ ನಾಯಕರು ಮಾಹಿತಿ ನೀಡುತ್ತಾರೆ. ಇದು ನನ್ನ ವ್ಯಾಪ್ತಿಗೆ ಬರುವುದಿಲ್ಲ" ಎಂದು ತಿಳಿಸಿದರು.

ನೀವು ಸಿಎಂ ಆಗಿ ಯಾವಾಗ ಪ್ರಮಾಣ ವಚನ ಸ್ವೀಕರಿಸುವಿರಿ ಎಂದು ಕೇಳಿದಾಗ, "ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಆಗಬೇಕಿದೆ. ನಂತರ ತೀರ್ಮಾನ ಆಗಲಿದೆ" ಎಂದು ತಿಳಿಸಿದರು.

# ಚಿಕ್ಕಬಳ್ಳಾಪುರದಲ್ಲಿ ನಾಳೆ ಕಾರ್ಯಕ್ರಮ- ರಾಜ್ಯಮಟ್ಟದ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಸಜ್ಜುಗೊಂಡ ಪುಷ್ಪ-ಗಿರಿಧಾಮಗಳ ನಗರಿ




**ಚಿಕ್ಕಬಳ್ಳಾಪುರ, ಮೇ 29:** ರಾಜ್ಯದ ಫಲಪುಷ್ಪಗಳ ಗಿರಿಧಾಮ ನಾಡು ಎಂದೇ ಖ್ಯಾತಿ ಪಡೆದಿರುವ ಚಿಕ್ಕಬಳ್ಳಾಪುರದ ಕನ್ನಡ ಭವನದಲ್ಲಿ ಮೇ.31 ರಂದು ಭಾನುವಾರ ರಾಜ್ಯ ಮಟ್ಟದ ಕೆಯುಡಬ್ಲ್ಯೂಜೆ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಈ ಕುರಿತು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅತಿಥ್ಯವನ್ನು ಮೊದಲ ಬಾರಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ವಹಿಸಿಕೊಂಡಿದ್ದು ರಾಜ್ಯದ 200ಕ್ಕೂ ಹೆಚ್ಚು ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದೆಂದರು.

ಭಾರತರತ್ನ ಸರ್‌ಎಂವಿ, ಖ್ಯಾತ ವಿಜ್ಞಾನಿ ಸಿಎನ್‌ಆರ್ ರಾವ್ ಹುಟ್ಟಿ ಬೆಳೆದ ಚಿಕ್ಕಬಳ್ಳಾಪುರ ಜಿಲ್ಲೆಯು ನಾಡಿಗೆ ಅನೇಕ ದಿಗ್ಗಜರನ್ನು ಕೊಡುಗೆಯಾಗಿ ನೀಡಿದ್ದು, ಅನೇಕ ಐತಿಹ್ಯಗಳನ್ನು ಜಿಲ್ಲೆಯು ಹೊಂದಿದೆ. ವಿಶೇಷವಾಗಿ ಫಲಪುಷ್ಪಗಳ ಗಿರಿಧಾಮ ನಾಡಾಗಿ ಗಮನ ಸೆಳೆದಿದೆ. ಈ ಹಿನ್ನಲೆಯಲ್ಲಿ ಪ್ರತಿಭಾ ಪುರಸ್ಕಾರ ಪ್ರದಾನವನ್ನು ಈ ಬಾರಿಗೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವೂ ಅರ್ಥಪೂರ್ಣವಾಗಿ ಕಾರ್ಯಕ್ರಮದ ಯಶಸ್ವಿಗೆ ಸಿದ್ದತೆ ಮಾಡಿಕೊಂಡಿದೆ ಎಂದರು.

ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ರಾಜ್ಯದ ಎಲ್ಲಾ ಜಿಲ್ಲೆಗಳ ಪತ್ರಕರ್ತರ ಮಕ್ಕಳಿಗೆ ರಾಜ್ಯ ಸಂಘದಿಂದ ಪ್ರತಿಭಾ ಪುರಸ್ಕಾರ ವಿತರಣೆ ಮಾಡಲಾಗುತ್ತಿದ್ದು, ಇದೇ ಮೊದಲ ಬಾರಿಗೆ 3000 ಸಾವಿರ ರೂ, ನಗದು, ಸ್ಮರಣಿಕೆ, ಅಭಿನಂದನಾ ಪತ್ರ ವಿತರಿಸಲಾಗುತ್ತಿದೆ ಎಂದರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿ ಹಲವು ಗಣ್ಯರು ಭಾಗಿ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮಕ್ಕೆ ಸಂಸದ ಬಸವರಾಜ ಬೊಮ್ಮಾಯಿಯವರು ಭಾಗವಹಿಸಿ ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲೆಯ ನಿಕಪೂಟ ಜಿಲ್ಲಾ ಉಸ್ತುವಾರಿಗಳಾದ ರಾಜ್ಯದ ಮಾಜಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ನೆರವೇರಿಸಲಿದ್ದಾರೆ. ಅಭಿನಂದನಾ ನುಡಿಯನ್ನು ಕ್ಷೇತ್ರದ ಸಂಸದರಾದ ಡಾ.ಕೆ.ಸುಧಾಕರ್ ಮಾಡಲಿದ್ದು, ಪ್ರತಿಭಾ ಪುರಸ್ಕಾರವನ್ನು ಸಿದ್ದರಾಮಯ್ಯ ಅವರಿಗೆ ಮಾಧ್ಯಮ ಸಲಹೆಗಾರರು ಆಗಿದ್ದ ಕೆ.ವಿ.ಪ್ರಭಾಕರ್ ನೆರವೇರಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಶಿವಾನಂದ ತಗಡೂರು ಹೇಳಿದರು.

ಸಂಘದ ಜಿಲ್ಲಾಧ್ಯಕ್ಷರಾದ ವಿ.ರವಿಕುಮಾರ್ ಮಾತನಾಡಿ, ಇಡೀ ರಾಜ್ಯಕ್ಕೆ ಮಾದರಿ ಆಗುವ ರೀತಿಯಲ್ಲಿ ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜಿಲ್ಲಾ ಸಂಘ ಅತಿಥ್ಯ ವಹಿಸಿ ಹಲವು ಸಿದ್ದತೆಗಳನ್ನು ಮಾಡಿಕೊಂಡಿದ್ದು, ಕಾರ್ಯಕ್ರಮದಲ್ಲಿ ಮಾಧ್ಯಮ ಹಾಗೂ ಸ್ತ್ರೀಶಕ್ತಿ ಸಂಘಗಳು ತಯಾರಿಸಿ ಉತ್ಪನ್ನಗಳ ಮಾರಾಟ ಹಾಗೂ ವಸ್ತು ಪ್ರದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ರಾಜ್ಯ ಸಮಿತಿ ಸದಸ್ಯರಾದ ಎನ್. ಚಂದ್ರಶೇಖರ್ ಸೇರಿದಂತೆ ಮತ್ತಿತರರು ಇದ್ದರು.

# ಜಗತ್ತೇ ಒಂದು ಕುಟುಂಬ ಎಂಬ ಭಾರತೀಯ ಚಿಂತನೆ ವಿಶ್ವಕ್ಕೇ ದಾರಿದೀಪ: ಸಿ.ಪಿ.ರಾಧಾಕೃಷ್ಣನ್

**ಬೆಂಗಳೂರು, ಮೇ 29:** ಭಾರತದ ಆಧ್ಯಾತ್ಮಿಕ ಪರಂಪರೆ ಮತ್ತು ನಾಗರಿಕತೆಯ ಜ್ಞಾನವು ಹೆಚ್ಚು ಕರುಣೆಯುತ ಹಾಗೂ ಜಾಗೃತ ವಿಶ್ವ ನಿರ್ಮಾಣಕ್ಕೆ ಪ್ರೇರಣೆ ನೀಡುತ್ತಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಬಣ್ಣಿಸಿದ್ದಾರೆ.

ಆರ್ಟ್ ಆಫ್ ಲಿವಿಂಗ್ ಫೌಂಡೇಷನ್ ಸಂಸ್ಥೆಯ 45ನೇ ವರ್ಷದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಶ್ವದಾದ್ಯಂತ ಶಾಂತಿ, ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಹರಡುತ್ತಿರುವ ರವಿಶಂಕರ್ ಗುರೂಜಿ ಅವರ ಸೇವೆ ಶ್ಲಾಘನೀಯ. ಸಂಘರ್ಷ ಮತ್ತು ಅನಿಶ್ಚಿತತೆಯಿಂದ ಕೂಡಿದ ಜಗತ್ತಿನಲ್ಲಿ ಬದುಕನ್ನೇ ಒಂದು ಕಲೆಯಾಗಿ ರೂಪಿಸಬೇಕು.

ಭಾರತದ ವಸುಧೈವ ಕುಟುಂಬಕಂ ತತ್ವವನ್ನು ಉಲ್ಲೇಖಿಸಿದ ರಾಧಾಕೃಷ್ಣನ್, ಇಡೀ ಜಗತ್ತನ್ನೇ ಒಂದು ಕುಟುಂಬವಾಗಿ ನೋಡುವ ಭಾರತೀಯ ಚಿಂತನೆ ಇಂದು ವಿಶ್ವಕ್ಕೆ ದಾರಿ ತೋರಿಸುತ್ತಿದೆ. ಧ್ಯಾನ, ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಪರಿಸರ ಸಂರಕ್ಷಣೆ ಮತ್ತು ಮಾನವೀಯ ಸೇವೆಗಳ ಮೂಲಕ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಸಮಾಜದ ಉನ್ನತಿಗೆ ಮಹತ್ವದ ಕೊಡುಗೆ ನೀಡಿದೆ ಎಂದು ಅಭಿಪ್ರಾಯಪಟ್ಟರು.

ಆರ್ಟ್ ಆಫ್ ಲಿವಿಂಗ್ ಚಳವಳಿ ಇಂದು ಜಾಗತಿಕ ಮಾನವೀಯ ಹಾಗೂ ಆಧ್ಯಾತ್ಮಿಕ ಶಕ್ತಿಯಾಗಿ ಬೆಳೆದಿದ್ದು, ಕರುಣೆ, ಸಹಿಷ್ಣುತೆ, ಸ್ಪಷ್ಟತೆ ಮತ್ತು ಸಂತೋಷವನ್ನು ಉತ್ತೇಜಿಸುತ್ತಿದೆ. ಯುವಕರು ಮಾದಕವಸ್ತುಗಳಿಂದ ದೂರವಿರಬೇಕು ಎಂದು ಕರೆ ನೀಡಿದ ಉಪರಾಷ್ಟ್ರಪತಿ, ನಿಮ್ಮ ಮನಸ್ಸನ್ನು ನೀವು ನಿಯಂತ್ರಿಸಬೇಕು, ಬೇರೆ ಯಾವುದೂ ನಿಮ್ಮ ಮನಸ್ಸನ್ನು ನಿಯಂತ್ರಿಸಬಾರದು ಎಂದರು.




ಸಂಸ್ಥೆಯ 45 ವರ್ಷಗಳ ಸೇವೆಯನ್ನು ಸ್ಮರಿಸುವ ವಿಶೇಷ ಅಂಚೆಚೀಟಿಯನ್ನು ಉಪರಾಷ್ಟ್ರಪತಿಯವರು ಅನಾವರಣಗೊಳಿಸಿದರು. ಅಲ್ಲದೆ ವ್ಯಕ್ತಿಗತ ಕಲ್ಯಾಣ, ಸಾಮಾಜಿಕ ಪರಿವರ್ತನೆ ಮತ್ತು ಜಾಗತಿಕ ಶಾಂತಿಗೆ ಸಂಸ್ಥೆ ನೀಡಿದ ಕೊಡುಗೆಯನ್ನು ಪ್ರಶಂಸಿಸಿದರು.

ಬದುಕು ಒಂದು ಕಲೆಯಾಗಬೇಕು. ಸಂಘರ್ಷ ಮತ್ತು ಅನಿಶ್ಚಿತತೆಯಿಂದ ಕೂಡಿದ ಈ ಜಗತ್ತಿನಲ್ಲಿ ಪ್ರತಿದಿನ ಬದುಕನ್ನು ಆನಂದಿಸಬೇಕು. ರವಿಶಂಕರ್ ಗುರೂಜಿ ಜ್ಞಾನ, ಜಾಗೃತಿ, ಶಾಂತಿ ಮತ್ತು ಸೌಹಾರ್ದತೆಯ ಮೌಲ್ಯಗಳ ಮೂಲಕ ಮಾನವಕುಲಕ್ಕೆ ನಿರಂತರ ಪ್ರೇರಣೆ ನೀಡುತ್ತಿದ್ದಾರೆ ಹಾಗೂ ವಿಭಿನ್ನ ಸಂದರ್ಭಗಳಲ್ಲಿ ಜನರಿಗೆ ಮನಶಾಂತಿ ನೀಡುತ್ತಿದ್ದಾರೆ ಎಂದರು.

181 ದೇಶಗಳಲ್ಲಿ ಆರ್ಟ್ ಆಫ್ ಲಿವಿಂಗ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವುದನ್ನು ತಿಳಿದು ತಮಗೆ ಆಶ್ಚರ್ಯವಾಯಿತು. ಈ ಚಳವಳಿ ಖಂಡಗಳು, ಸಂಸ್ಕೃತಿಗಳು, ಭಾಷೆಗಳು ಮತ್ತು ಪೀಳಿಗೆಗಳನ್ನು ಮೀರಿ ಲಕ್ಷಾಂತರ ಜನರ ಬದುಕಿಗೆ ಸ್ಫೂರ್ತಿ ನೀಡಿದೆ. 45 ವರ್ಷಗಳ ಹಿಂದೆ ಒಳಗಿನ ಶಾಂತಿಯೇ ಹೊರಗಿನ ಸೌಹಾರ್ದತೆಯ ಮೂಲ ಎಂಬ ಸರಳ ಆದರೆ ಆಳವಾದ ಕಲ್ಪನೆಯೊಂದಿಗೆ ಈ ಚಳವಳಿ ಆರಂಭವಾಯಿತು ಎಂದು ನೆನಪಿಸಿಕೊಂಡರು.

ಭಾರತ ಇಂದು ಆತ್ಮವಿಶ್ವಾಸಭರಿತ ಆಶಯಗಳೊಂದಿಗೆ ಜಾಗತಿಕ ವೇದಿಕೆಯಲ್ಲಿ ಪ್ರಮುಖ ಸ್ಥಾನ ಪಡೆಯುತ್ತಿರುವ ಐತಿಹಾಸಿಕ ಘಟ್ಟದಲ್ಲಿದೆ. ನರೇಂದ್ರ ಮೋದಿ ಅವರ ನಾಗರಿಕತೆಯ ಜ್ಞಾನ, ಯೋಗ, ಆರೋಗ್ಯ ಮತ್ತು ಸ್ಥಿರತೆಯ ಮೇಲಿನ ಒತ್ತು ಇದೇ ದಿಕ್ಕನ್ನು ಪ್ರತಿಬಿಂಬಿಸುತ್ತದೆ ಎಂದರು.

### ಸಾಮಾಜಿಕ ಕಾರ್ಯಕ್ಕೆ ಶ್ಲಾಘನೆ

ಅಭಿವೃದ್ಧಿ ಬೇಕೆಂದರೆ ಸಾಂಪ್ರದಾಯಿಕ ಮೌಲ್ಯಗಳನ್ನು ತ್ಯಜಿಸಬೇಕು ಎಂದಲ್ಲ. ಬದಲಾವಣೆ ಮಾತ್ರ ಶಾಶ್ವತ. ಆದರೆ ಉತ್ತಮ ಬದಲಾವಣೆಗಳನ್ನು ಸ್ವೀಕರಿಸಬೇಕು. ಜೊತೆಗೆ ಒಳ್ಳೆಯ ಸಾಂಪ್ರದಾಯಿಕ ಮೌಲ್ಯಗಳನ್ನು ಬಿಡಬಾರದು. ಆಯುರ್ವೇದ, ನೈಸರ್ಗಿಕ ಕೃಷಿ, ನದಿ ಪುನಶ್ಚೇತನ, ವೃಕ್ಷಾರೋಪಣ ಹಾಗೂ ಮಾದಕವಸ್ತು ಮುಕ್ತ ಭಾರತ ಅಭಿಯಾನಗಳಲ್ಲಿ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಕೈಗೊಂಡಿರುವ ಕಾರ್ಯಗಳನ್ನು ಉಪರಾಷ್ಟ್ರಪತಿ ಶ್ಲಾಘಿಸಿದರು.

# ಕಾಕ್ರೋಚ್ ಪಾರ್ಟಿ ಎಕ್ಸ್ ಖಾತೆ ಮರುಸ್ಥಾಪನೆಗೆ ಕೋರ್ಟ್ ನಕಾರ

**ನವದೆಹಲಿ, ಮೇ 29:** ಕಾಕ್ರೋಚ್ ಜನತಾ ಪಾರ್ಟಿಯ ಎಕ್ಸ್ ಖಾತೆಯನ್ನು ನಿರ್ಬಂಧಿಸಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಗೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್ ಶುಕ್ರವಾರ (ಮೇ.29) ಕೇಂದ್ರ ಸರ್ಕಾರ ಮತ್ತು ಎಕ್ಸ್ (ಟ್ವಿಟರ್) ಸಂಸ್ಥೆಗೆ ನೋಟಿಸ್ ಜಾರಿ ಮಾಡಿದೆ. ಸಿಜೆಪಿ ಸಂಸ್ಥಾಪಕ ಅಭಿಜೀತ್ ದೀಪ್ಕೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ ಈ ಆದೇಶ ನೀಡಿದೆ.




ಆದಾಗ್ಯೂ, ನ್ಯಾ. ಪುರುಷೇಂದ್ರ ಕುಮಾರ್ ಕೌರವ್ ಅವರಿದ್ದ ಏಕಸದಸ್ಯ ಪೀಠವು, ಬ್ಲಾಕ್ ಆಗಿರುವ ಖಾತೆಯನ್ನು ತಕ್ಷಣವೇ ಮರುಸ್ಥಾಪಿಸಲು ನಿರಾಕರಿಸಿದೆ. ಈ ವಿಷಯವು ದೂರಗಾಮಿ ಪರಿಣಾಮಗಳನ್ನು ಹೊಂದಿರುವುದರಿಂದ, ಸರ್ಕಾರದ ವಾದವನ್ನು ಆಲಿಸಿದ ನಂತರವೇ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ನ್ಯಾಯಾಧೀಶರು ಸ್ಪಷ್ಟಪಡಿಸಿದ್ದಾರೆ.


ಕೇಂದ್ರ ಸರ್ಕಾರವು ತನ್ನ ಸಮಗ್ರ ಪ್ರತಿಕ್ರಿಯೆಯನ್ನು ಸಲ್ಲಿಸಿದ ನಂತರ, ಖಾತೆಯನ್ನು ನಿರ್ಬಂಧಿಸಿದ ಆದೇಶದ ಪ್ರತಿಯನ್ನು ಕೋರ್ಟ್ ಮುಂದೆ ಮಂಡಿಸುವಂತೆ ಎಕ್ಸ್ ಸಂಸ್ಥೆಗೆ ನಿರ್ದೇಶನ ನೀಡಬೇಕೇ ಎಂಬುದನ್ನು ಪರಿಶೀಲಿಸುವುದಾಗಿ ಕೋರ್ಟ್ ಹೇಳಿದ್ದು, 4 ವಾರಗಳ ಒಳಗಾಗಿ ಉತ್ತರಿಸುವಂತೆ ಕೇಂದ್ರಕ್ಕೆ ಗಡುವು ನೀಡಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಜುಲೈ 6 ಕ್ಕೆ ನಿಗದಿಪಡಿಸಲಾಗಿದೆ.

ಇದೇ ವೇಳೆ, ಐಟಿ ನಿಯಮಗಳ ಪ್ರಕಾರ ಪ್ರತಿ ಎರಡು ತಿಂಗಳಿಗೊಮ್ಮೆ ಸಭೆ ಸೇರಬೇಕಾದ ಪರಿಶೀಲನಾ ಸಮಿತಿಯು ಈ ಬ್ಲಾಕಿಂಗ್ ಆದೇಶದ ಎಲ್ಲಾ ಆಯಾಮಗಳನ್ನು ಪರಿಶೀಲಿಸಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ಅರ್ಜಿದಾರ ಅಭಿಜೀತ್ ದೀಪ್ಕೆ ಸದ್ಯ ಭಾರತದಲ್ಲಿ ಇಲ್ಲದಿರುವುದರಿಂದ, ಅವರು ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಸಮಿತಿಯ ಮುಂದೆ ಹಾಜರಾಗಲು ವಿನಂತಿಸಬಹುದು ಎಂದು ನ್ಯಾಯಾಲಯ ತಿಳಿಸಿದೆ.

ಇಂಟೆಲಿಜೆನ್ಸ್ ಬ್ಯೂರೋ ನೀಡಿದ ಇನ್‌ಪುಟ್‌ಗಳ ಆಧಾರದ ಮೇಲೆ ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಐಟಿ ಕಾಯ್ದೆ 2000ರ ಸೆಕ್ಷನ್ 69ರ ವಿಧಿ ಅಡಿಯಲ್ಲಿ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಸಿಜೆಪಿ ಖಾತೆಯನ್ನು ನಿರ್ಬಂಧಿಸಲು ಎಕ್ಸ್ ಸಂಸ್ಥೆಗೆ ಸೂಚಿಸಿತ್ತು.

# ಕೋಸ್ಟಲ್ ಫಿಲ್ಮ್ ಅವಾರ್ಡ್ಸ್ ಮಾ|ಅಕ್ಷರ್ ಜೆ.ಶೆಟ್ಟಿಗೆ ಬಾಲನಟ ಪ್ರಶಸ್ತಿ

**ಮುಂಬಯಿ, ಮೇ.29:** ಮಂಗಳೂರು ಅಲ್ಲಿನ ಮುಲ್ಕಿ ಸುಂದರ್‌ರಾಮ ಶೆಟ್ಟಿ ಕನ್ವೆನ್ಷನ್ ಸೆಂಟರ್‌ನಲ್ಲಿ ಕಳೆದ ಭಾನುವಾರ ಸ್ಯಾಂಡಿಸ್ ಕಂಪನಿಯ ಆಶ್ರಯದಲ್ಲಿ ನಡೆದ ಕೋಸ್ಟಲ್ ಫಿಲಂ ಅವಾರ್ಡ್ಸ್



ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ರಾಕ್‌ಸ್ಟಾರ್ ರೂಪೇಶ್ ಶೆಟ್ಟಿ ನಿರ್ದೇಶನ "ಜೈ" ತುಳು ಸಿನಿಮಾದಲ್ಲಿ ಅಭಿನಯಿಸಿದ ಮಾ| ಅಕ್ಷರ್ ಜೆ.ಶೆಟ್ಟಿಗೆ ಬಾಲನಟ ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಯಿತು.

# ಈ ವರ್ಷ ಮಳೆ ಕಡಿಮೆ ಹವಾಮಾನ ಇಲಾಖೆ



**ನವದೆಹಲಿ, ಮೇ 29:** ಈ ವರ್ಷದ ಮುಂಗಾರು ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ಪರಿಷ್ಕರಿಸಿದೆ. ಈ ಹಿಂದೆ ಅಂದಾಜು ಮಾಡಿದ್ದಕ್ಕಿಂತಲೂ ಈ ಬಾರಿ ಮಳೆಯ ಪ್ರಮಾಣ ಇನ್ನಷ್ಟೂ ಕಡಿಮೆಯಾಗಲಿದೆ ಎಂದು ಶುಕ್ರವಾರ ಮುನ್ಸೂಚನೆಯಲ್ಲಿ ತಿಳಿಸಿದೆ.

ಈ ಹಿಂದೆ ಏಪ್ರಿಲ್ 13ರಂದು ಹೊರಡಿಸಲಾದ ಮುಂಗಾರು ಮುನ್ಸೂಚನೆಯಲ್ಲಿ ದೀರ್ಘಾವಧಿಯ ಸರಾಸರಿ ಮಳೆಯ ಶೇ.92ರಷ್ಟು ಮುಂಗಾರು ಮಳೆಯಾಗುವ ಸಾಧ್ಯತೆಯಿದೆ ಎಂದು ಹೇಳಿತ್ತು. ಆದರೆ ಈಗ ಈ ಶೇಕಡವಾರು ಪ್ರಮಾಣವನ್ನು ಹವಾಮಾನ ಇಲಾಖೆ ಇನ್ನಷ್ಟು ಕಡಿಮೆ ಮಾಡಿದೆ. ಈ ಮುಂಗಾರಿನಲ್ಲಿ ದೀರ್ಘಾವಧಿಯ ಸರಾಸರಿ ಮಳೆ ಪ್ರಮಾಣದ ಶೇ.90ರಷ್ಟು ಮಾತ್ರ ಮಳೆಯಾಗಲಿದೆ ಎಂದು ಹೇಳಿದೆ.

ಇನ್ನು ಐಎಂಡಿ ಪ್ರಕಾರ ಈಶಾನ್ಯ ಭಾರತದಲ್ಲಿ ಈ ಮುಂಗಾರಿನಲ್ಲಿ ಸಾಮಾನ್ಯ ಮಳೆಯಾಗುವ ನಿರೀಕ್ಷೆಯಿದೆ. ಆದರೆ ದೇಶದ ಇತರ ಪ್ರದೇಶಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಲಿದೆ.

ದೇಶದಲ್ಲಿ ಕೃಷಿ ಮತ್ತು ಜಲ ಸಂಪನ್ಮೂಲಗಳಿಗೆ ನಿರ್ಣಾಯಕವಾದ ಮುಂಗಾರು ಸಾಮಾನ್ಯವಾಗಿ ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ಇರುತ್ತದೆ. 2025ರ ಮುಂಗಾರು ಅವಧಿಯು ಅಧಿಕೃತವಾಗಿ ನಾಲ್ಕು ತಿಂಗಳುಗಳ ಕಾಲ (ಜೂನ್ನಿಂದ ಸೆಪ್ಟೆಂಬರ್) ಇತ್ತು. ಆದರೆ ಮುಂಗಾರು ಮಾರುತಗಳ ಆರಂಭ ಮತ್ತು ನಿರ್ಗಮನದ ಪ್ರಕ್ರಿಯೆಯನ್ನು ಪರಿಗಣಿಸಿದರೆ ಕಳೆದ ವರ್ಷ ಸುಮಾರು ಐದು ತಿಂಗಳಿಗೂ ಹೆಚ್ಚು ಕಾಲ ಮುಂಗಾರು ಸಕ್ರಿಯವಾಗಿತ್ತು. ಸಾಮಾನ್ಯವಾಗಿ ಜೂನ್ 1ಕ್ಕೆ ಆರಂಭವಾಗಬೇಕಿದ್ದ ಮುಂಗಾರು, 2025ರಲ್ಲಿ ಎಂಟು ದಿನ ಮುಂಚಿತವಾಗಿ ಅಂದರೆ ಮೇ 24ಕ್ಕೆ ಕೇರಳ ಕರಾವಳಿಯನ್ನು ಪ್ರವೇಶಿಸಿತ್ತು. ಜೂನ್ 29ರ ವೇಳೆಗೆ ಇಡೀ ದೇಶವನ್ನು ಆವರಿಸಿಕೊಂಡಿತ್ತು. ವಾಯುವ್ಯ ಭಾರತದಿಂದ ಸೆಪ್ಟೆಂಬರ್ 14ರಂದು ಮುಂಗಾರು ಮಾರುತಗಳು ನಿರ್ಗಮಿಸಲು ಆರಂಭಿಸಿದ್ದು ಅಕ್ಟೋಬರ್ 16ರ ವೇಳೆಗೆ ಸಂಪೂರ್ಣವಾಗಿ ನಿರ್ಗಮಿಸಿದವು.

ಆದರೆ ಈ ಬಾರಿ ಮುಂಗಾರು ಜೂನ್ 2 ರಿಂದ ಜೂನ್ 4ರ ನಡುವೆ ಕೇರಳ ಕರಾವಳಿಯನ್ನು ಪ್ರವೇಶಿಸುವ ಸಾಧ್ಯತೆಯಿದೆ. ಆರಂಭದಲ್ಲಿ ಮೇ 26ರಂದೇ ಮುಂಗಾರು ಪ್ರವೇಶಿಸಲಿದೆ ಎಂದು ಅಂದಾಜಿಸಲಾಗಿತ್ತು. ಆದರೆ ಬಂಗಾಳ ಕೊಲ್ಲಿಯಲ್ಲಿ ಉಂಟಾದ ಹವಾಮಾನ ವೈಪರೀತ್ಯ ಮತ್ತು ಗಾಳಿಯ ದಿಕ್ಕಿನ ಬದಲಾವಣೆಯಿಂದಾಗಿ ಮುಂಗಾರು ಪ್ರವೇಶ ಕೊಂಚ ವಿಳಂಬವಾಗಿದೆ.



ಗುಜರಾತ್‌ನ ಭಾರತ–ಪಾಕಿಸ್ತಾನ ಗಡಿಯಲ್ಲಿರುವ ಸೂಕ್ಷ್ಮ ಹರಮಿ ನಾಲಾ ವಲಯಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ ನೀಡಿ, ಭದ್ರತಾ ಮೂಲಸೌಕರ್ಯಗಳನ್ನು ಪರಿಶೀಲಿಸಿದರು ಮತ್ತು ಸವಾಲಿನ ಭೂಪ್ರದೇಶದಲ್ಲಿ ಬೀಡುಬಿಟ್ಟಿರುವ ಬಿಎಸ್‌ಎಫ್ ಸಿಬ್ಬಂದಿಯೊಂದಿಗೆ ಮಾತನಾಡಿದರು.

# ದಕ್ಷಿಣ ಕನ್ನಡ ಜಿಲ್ಲಾ ಎನ್‌ಎಸ್‌ಯುಐ ಪ್ರಧಾನ ಕಾರ್ಯದರ್ಶಿಯಾಗಿ ಈಥನ್ ರಫಾಯೆಲ್ ತೌರೊ ನೇಮಕ

**ಮುಂಬಯಿ, ಮೇ.29:** ಎನ್‌ಎಸ್‌ಯುಐ (ಭಾರತ ರಾಷ್ಟ್ರೀಯ ವಿದ್ಯಾರ್ಥಿ ಸಂಘ) ದಕ್ಷಿಣ ಕನ್ನಡ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆಗಿ ಈಥನ್ ರಫಾಯೆಲ್ ತೌರೊ ಅವರನ್ನು ನೇಮಕ ಮಾಡಲಾಗಿದೆ.



ಎನ್‌ಎಸ್‌ಯುಐ ದಕ್ಷಿಣ ಕನ್ನಡ ಜಿಲ್ಲಾ ಅಧ್ಯಕ್ಷ ಸುಹಾನ್ ಆಳ್ವ ಅವರು ಅಧಿಕೃತ ನೇಮಕಾತಿ ಆದೇಶವನ್ನು ಹೊರಡಿಸಿ ಈಥನ್ ತೌರೊ ಅವರನ್ನು ನೇಮಕಾತಿಯನ್ನು ತಿಳಿಸಿದ್ದಾರೆ.

ಗಲ್ಫ್ ರಾಷ್ಟ್ರ, ವಿದೇಶ, ಕರ್ನಾಟಕದ ಕರಾವಳಿಯಲ್ಲಿ ಜನಪ್ರಸಿದ್ಧ ಮಾಧ್ಯಮಮಿತ್ರ ದಾಯ್ಜಿ ಪ್ರವೀಣ್ ನಾಮಾಂಕಿತ ಪ್ರವೀಣ್ ತಾವ್ರೊ ಮತ್ತು ಹೆಸರಾಂತ ಕಾರ್ಯಕ್ರಮ ನಿರೂಪಕಿ ರೆನಿಟಾ ಪಿ.ತಾವ್ರೋ ದಂಪತಿಯ ಪುತ್ರ, ಬಹುಮುಖಿ ಪ್ರತಿಭೆಯ ಈಥನ್ ಅವರ ಸಮರ್ಪಣೆ, ಯುವ ನಾಯಕತ್ವ ಮತ್ತು ಬದ್ಧತೆಯು ಸಂಘಟನೆಯನ್ನು ಬಲಪಡಿಸಲು ಮತ್ತು ವಿದ್ಯಾರ್ಥಿ ಸಮುದಾಯದ ಅಭ್ಯುದಯಕ್ಕೆ ಸೇವೆ ಸಲ್ಲಿಸಲು ವರದಾನವಾಗಲಿದೆ ಎಂಬುದಾಗಿ ಸಂಘಟನೆಯ ಧುರೀಣರು ವಿಶ್ವಾಸ ವ್ಯಕ್ತಪಡಿಸಿದೆ.

# ಮಹಾರಾಷ್ಟ್ರದ ಪುಣೆ, ಪಿಂಪ್ರಿ–ಚಿಂಚ್ವಾಡ್ ಜಿಲ್ಲೆಯಲ್ಲಿ ವಿಷಪೂರಿತ ಮದ್ಯ ಸೇವಿಸಿ 17 ಜನರ ಬಲಿ

**ನವದೆಹಲಿ, ಮೇ 29:** ವಿಷಪೂರಿತ ಮದ್ಯ ಸೇವಿಸಿ ಒಂದೇ ದಿನ 17 ಮಂದಿ ಸಾವನ್ನಪ್ಪಿರುವ ದುರಂತ ಘಟನೆ ಮಹಾರಾಷ್ಟ್ರದ ಪುಣೆ ಮತ್ತು ಪಿಂಪ್ರಿ–ಚಿಂಚ್ವಾಡ್ ಜಿಲ್ಲೆಗಳಲ್ಲಿ ನಡೆದಿದೆ. ಈ ಎರಡೂ ಜಿಲ್ಲೆಗಳ ಹಡಪ್ಸರ್, ದಪೋಡಿ ಹಾಗೂ ಫುಗೆವಾಡಿ ಪ್ರದೇಶಗಳಲ್ಲಿ ಸಾವುಗಳ ಸಂಭವಿಸಿವೆ. ಮದ್ಯ ಸೇವಿಸಿದ್ದ ಇನ್ನೂ ಹಲವರು ಗಂಭೀರ ಸ್ಥಿತಿಯಲ್ಲಿದ್ದು, ಹತ್ತಿರದ ಬೇರೆ ಬೇರೆ ಆಸ್ಪತ್ರೆಗಳಲ್ಲಿ ದಾಖಲಿಸಲಾಗಿದ್ದು, ತುರ್ತು ಚಿಕಿತ್ಸೆ ನೀಡಲಾಗುತ್ತಿದೆ. ಈ ಘಟನೆಯು ಸ್ಥಳೀಯವಾಗಿ ತೀವ್ರ ಆತಂಕ ಮತ್ತು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.



ಭೀಕರ ಸರಣಿ ಸಾವುಗಳ ಬೆನ್ನಲ್ಲೇ ಪ್ರಕರಣದ ಪ್ರಮುಖ ಆರೋಪಿ ಯೋಗೇಶ್ ವಾಂಖೆಡೆ ಎಂಬಾತನನ್ನು ರಾಜ್ಯ ಅಬಕಾರಿ ಇಲಾಖೆಯ ಅಧಿಕಾರಿಗಳು ಬಂಧಿಸಿದ್ದಾರೆ. ಸರಣಿ ಸಾವುಗಳ ಸುದ್ದಿ ಹರಡುತ್ತಿದ್ದಂತೆ ಆತಂಕಗೊಂಡ ಯೋಗೇಶ್, ಸ್ವಯಂಪ್ರೇರಣೆಯಿಂದ ಅಧಿಕಾರಿಗಳ ಮುಂದೆ ಶರಣಾಗಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಪಿಂಪ್ರಿ–ಚಿಂಚ್ವಾಡ್ ಮತ್ತು ಪುಣೆಯ ಬೇರೆ ಬೇರೆ ಪ್ರದೇಶಗಳಲ್ಲಿ ಈತನೇ ವಿಷಪೂರಿತ ಮದ್ಯವನ್ನು ಸರಬರಾಜು ಮಾಡಿದ್ದ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಈತ, ಅಪಾಯಕಾರಿ ಸ್ಪಿರಿಟ್ನಿಂದ ತಯಾರಿಸಿದ ಮದ್ಯವನ್ನು ಸರಬರಾಜು ಮಾಡಿದ್ದಾನೆ. ಅದನ್ನು ಸೇವಿಸಿಯೇ ಇವರೆಲ್ಲರೂ ಮೃತಪಟ್ಟಿದ್ದಾರೆ ಎಂಬ ಶಂಕೆ ವ್ಯಕ್ತವಾಗಿದ್ದು, ಆರೋಪಿಯನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗಿದೆ.

ಹಡಪ್ಸರ್, ದಪೋಡಿ ಮತ್ತು ಫುಗೆವಾಡಿಯಲ್ಲಿ ವ್ಯಾಪಕವಾಗಿ ಅಕ್ರಮ ದೇಶಿ ಮದ್ಯ ಮಾರಾಟ ಜಾಲ ಸಕ್ರಿಯವಾಗಿದೆ ಎಂದು ಸ್ಥಳೀಯರು ಗಂಭೀರ ಆರೋಪ ಮಾಡಿದ್ದಾರೆ. ಒಂದೇ ದಿನ 17 ಜೀವಗಳು ಬಲಿಯಾಗಿರುವುದು ಈ ಭಾಗದಲ್ಲಿ ಭಯದ ವಾತಾವರಣ ನಿರ್ಮಿಸಿದೆ. ಅಕ್ರಮ, ವಿಷಕಾರಿ ದೇಶಿ ಮದ್ಯವೇ ಈ ಸಾವುಗಳಿಗೆ ನೇರ ಕಾರಣ. ಈ ಬಗ್ಗೆ ಯಾವುದೇ ಪ್ರಭಾವಕ್ಕೆ ಒಳಗಾಗದೆ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಇನ್ನೊಂದೆಡೆ, ಪಿಂಪ್ರಿ–ಚಿಂಚ್ವಾಡದಲ್ಲಿ ಮೃತಪಟ್ಟ ಎಂಟು ಜನರಲ್ಲಿ ಐವರು ಬೇರೆ ಬೇರೆ ಆರೋಗ್ಯ ಸಮಸ್ಯೆಗಳಿಂದ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ಹೇಳಿಕೆ ನೀಡಿದ್ದಾರೆ. ಮೃತರು ಸಾವಿಗೂ ಮುನ್ನವೇ ದೀರ್ಘಕಾಲದ ಕಾಯಿಲೆಗಳಿಂದ ಬಳಲುತ್ತಿದ್ದರು ಎಂಬುದನ್ನು ವೈದ್ಯರು ದೃಢಪಡಿಸಿದ್ದಾರೆ ಎನ್ನಲಾಗಿದೆ.

ಪ್ರಸ್ತುತ ಈ ಎಲ್ಲ ಸಾವುಗಳಿಗೆ ನಿಖರ ಕಾರಣ ಏನೆಂಬುದು ತನಿಖೆಯಿಂದಷ್ಟೇ ತಿಳಿಯಬೇಕಿದೆ. ಮೃತಪಟ್ಟವರೆಲ್ಲರೂ ಒಂದೇ ಭಾಗದವರಾಗಿರುವುದರಿಂದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಇವರೆಲ್ಲರೂ ವಿಷಕಾರಿ ಮದ್ಯ ಸೇವಿಸಿದ್ದರೇ ಇಲ್ಲವೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಆಸ್ಪತ್ರೆಯ ಅಂತಿಮ ವೈದ್ಯಕೀಯ ಮತ್ತು ಮರಣೋತ್ತರ ಪರೀಕ್ಷೆಯ ವರದಿಗಳಿಗಾಗಿ ಅಧಿಕಾರಿಗಳು ಕಾಯುತ್ತಿದ್ದಾರೆ.

ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಉನ್ನತ ಮಟ್ಟದ ತನಿಖೆಗೆ ಆದೇಶ ಹೊರಡಿಸಿದ್ದಾರೆ. ಈ ಕಳ್ಳದಂಧೆಯ ಜಾಲದಲ್ಲಿ ಭಾಗಿಯಾಗಿರುವ ಎಲ್ಲರನ್ನೂ ಬಂಧಿಸುವಂತೆ ಸೂಚಿಸಿದ್ದಾರೆ. ತನಿಖಾ ಸಂಸ್ಥೆಗಳು ಪ್ರಕರಣದ ಆಳ–ಅಗಲವನ್ನು ಕೆದಕುತ್ತಿದ್ದು, ಎಲ್ಲ ಆಯಾಮಗಳಿಂದಲೂ ತನಿಖೆ ಚುರುಕುಗೊಳಿಸಿವೆ.

ದುರಂತದ ಬೆನ್ನಲ್ಲೇ ಕಾನೂನು ಸುವ್ಯವಸ್ಥೆ ಕುರಿತು ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಶಾಸಕ ರೋಹಿತ್ ಪವಾರ್, ಸ್ಥಳೀಯ ಪೊಲೀಸರು ಕೇವಲ ರಬ್ಬರ್–ಸ್ಟಾಂಪ್ ಅಧಿಕಾರಿಗಳಾಗಿದ್ದಾರೆ. ಅವರು ಕೇವಲ ಮೇಲಧಿಕಾರಿಗಳ ಆದೇಶ ಪಾಲನೆಗಷ್ಟೇ ಸೀಮಿತವಾಗಿದ್ದಾರೆ.

ಕಳೆದ ಕೆಲವು ದಿನಗಳಿಂದ ಸಾರ್ವಜನಿಕ ಬೀದಿಗಳಲ್ಲಿ ಹಗಲು ಹೊತ್ತಿನಲ್ಲೇ ಜನರ ಮೇಲೆ ಹಲ್ಲೆಗಳು ನಡೆಯುತ್ತಿವೆ. ಪುಣೆಯಾದ್ಯಂತ ಕಳಪೆ ಮತ್ತು ನಕಲಿ ಮದ್ಯ ಅತ್ಯಂತ ಸುಲಭವಾಗಿ ಲಭ್ಯವಾಗುತ್ತಿದೆ. ಈ ಅಕ್ರಮದ ಬಗ್ಗೆ ಧ್ವನಿ ಎತ್ತಿದರೆ ನಮ್ಮದೇ ಜನರನ್ನು ಜೈಲಿಗೆ ಹಾಕುವ ಪ್ರಯತ್ನಗಳು ನಡೆಯುತ್ತಿವೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

# 30 ದಿನಗಳ ಬೇಡಿಕೆ ಪೂರೈಸುವಷ್ಟು ಎಲ್‌ಪಿಜಿ ಸಂಗ್ರಹಿಸಿಟ್ಟುಕೊಳ್ಳಿ ಸರ್ಕಾರಿ ಸ್ವಾಮ್ಯದ ಇಂಧನ ಚಿಲ್ಲರೆ ಮಾರಾಟಗಾರರಿಗೆ ಕೇಂದ್ರ ಸೂಚನೆ

**ನವದೆಹಲಿ, ಮೇ 29:** ಪಶ್ಚಿಮ ಏಷ್ಯಾ ಸಂಘರ್ಷದಿಂದ ಆಯಕಟ್ಟಿನ ಸಮುದ್ರ ಮಾರ್ಗವಾಗಿರುವ ಹಾರ್ಮುಜ್ ಜಲಸಂಧಿಯಲ್ಲಿ ಸಂಚಾರ ಬಂದ್ ಆಗಿದ್ದು, ಗ್ಯಾಸ್ ಪೂರೈಕೆಯಲ್ಲಿನ ಕಳವಳಗಳ ನಡುವೆ, ಕನಿಷ್ಠ 30 ದಿನಗಳ ಬೇಡಿಕೆಗೆ ಸಾಕಾಗುವಷ್ಟು ದ್ರವೀಕೃತ ಪೆಟ್ರೋಲಿಯಂ ಅನಿಲ (ಎಲ್‌ಪಿಜಿ) ಸಂಗ್ರಹ ಸಾಮರ್ಥ್ಯ ಹೊಂದುವಂತೆ ಕೇಂದ್ರ ಸರ್ಕಾರ, ಸರ್ಕಾರಿ ಸ್ವಾಮ್ಯದ ಇಂಧನ ಚಿಲ್ಲರೆ ವ್ಯಾಪಾರಿಗಳಿಗೆ ಸೂಚಿಸಿದೆ. ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳಾದ ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ – ತಮ್ಮ ನಿಯಮಿತ ವಾಣಿಜ್ಯ ದಾಸ್ತಾನುಗಳನ್ನು ಮೀರಿ ಹೆಚ್ಚುವರಿ ಸಂಗ್ರಹ ಸಾಮರ್ಥ್ಯವನ್ನು ಸೃಷ್ಟಿಸುವ ಯೋಜನೆಗಳನ್ನು ಸಿದ್ಧಪಡಿಸಲು ನಿರ್ದೇಶನ ನೀಡಲಾಗಿದೆ.

ನಾವು ಕಾರ್ಯತಂತ್ರದ ನಿಕ್ಷೇಪಗಳ ಮೇಲೆ ಕೆಲಸ ಮಾಡುತ್ತಿದ್ದೇವೆ. ತೈಲ ಮಾರುಕಟ್ಟೆ ಕಂಪನಿಗಳು ತಮ್ಮೊಂದಿಗೆ ಕನಿಷ್ಠ 30 ದಿನಗಳಿಗೆ ಆಗುವಷ್ಟು ಎಲ್‌ಪಿಜಿ ಸಂಗ್ರಹ ಹೊಂದುವಂತೆ ಯೋಜನೆ ರೂಪಿಸುವಂತೆ ಸೂಚಿಸಲಾಗಿದೆ ಮತ್ತು ಆ ನಿಟ್ಟಿನಲ್ಲಿ ಕಾರ್ಯವಾಗುತ್ತಿದೆಅವರು ಅದರ ಮೇಲೆ ಕೆಲಸ ಮಾಡುತ್ತಿದ್ದಾರೆ" ಎಂದು ಪೆಟ್ರೋಲಿಯಂ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಅವರು ಶುಕ್ರವಾರ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿನ ಯುದ್ಧವು ಭಾರತ ಸೇರಿದಂತೆ ಜಾಗತಿಕ ಇಂಧನ ಪೂರೈಕೆಗೆ ತೀವ್ರ ಅಡ್ಡಿಪಡಿಸಿದೆ. ಗಲ್ಫ್ ಪ್ರದೇಶದ ದೇಶಗಳಿಂದ ಬರುವ ಭಾರತದ ಶೇ. 40 ರಷ್ಟು ಕಚ್ಚಾ ಆಮದು, ಶೇ. 65 ರಷ್ಟು ನೈಸರ್ಗಿಕ ಅನಿಲ ಮತ್ತು ಶೇ. 90 ರಷ್ಟು ಐಕಲು ಸರಬರಾಜುಗೆ ಮೂರು ತಿಂಗಳ ಸುದೀರ್ಘ ಸಂಘರ್ಷದಿಂದಾಗಿ ತೀವ್ರ ಅಡ್ಡಿಯಾಗಿದೆ ಎಂದಿದ್ದಾರೆ.

ಭಾರತವು ಕಚ್ಚಾ ತೈಲ ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸಲು ಸಹ ಕೆಲಸ ಮಾಡುತ್ತಿದೆ ಎಂದು ಸುಜಾತಾ ಶರ್ಮಾ ಅವರು ತಿಳಿಸಿದ್ದಾರೆ.

ಅದಾಗ್ಯೂ, ದೇಶದಲ್ಲಿ ಯಾವುದೇ ಇಂಧನ ಕೊರತೆ ಇಲ್ಲ, ಪೆಟ್ರೋಲ್, ಡೀಸೆಲ್, ಎಲ್‌ಪಿಜಿ, ಕಚ್ಚಾ ತೈಲ ಹಾಗೂ ನೈಸರ್ಗಿಕ ಅನಿಲದ ಸಾಕಷ್ಟು ದಾಸ್ತಾನು ಇದೆ ಎಂದು ಸರ್ಕಾರ ಹೇಳಿದ್ದು, ಸಂಸ್ಕರಣಾಗಾರಗಳು ಅತ್ಯುತ್ತಮ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಎಲ್‌ಪಿಜಿ ಉತ್ಪಾದನೆಯು ದಿನಕ್ಕೆ ಸುಮಾರು 52,000 ಟನ್‌ಗಳಷ್ಟು ಸಾರ್ವಕಾಲಿಕ ಗರಿಷ್ಠ ಮಟ್ಟದಲ್ಲಿದೆ ಎಂದು ಅವರು ಹೇಳಿದ್ದಾರೆ.

# ಬಿರುಗಾಳಿಗೆ ನಿರ್ಮಾಣ ಹಂತದ ಸೇತುವೆ ಕುಸಿತ: 6 ಸಾವು

**ಲಖನೌ, ಮೇ 29:** ಭೀಕರ ಬಿರುಗಾಳಿಯಿಂದಾಗಿ ನಿರ್ಮಾಣ ಹಂತದಲ್ಲಿದ್ದ ಸೇತುವೆಯೊಂದು ಕುಸಿದು ಬಿದ್ದಿದ್ದು, ಕನಿಷ್ಠ ಆರು ಮಂದಿ ಕಾರ್ಮಿಕರು ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಹಮಿರ್ಪುರ ಜಿಲ್ಲೆಯಲ್ಲಿ ನಡೆದಿದೆ. ಸಾವಿನ ಸಂಖ್ಯೆ ಎಂಟಕ್ಕೆ ಏರಿಕೆಯಾಗುವ ಆತಂಕವಿದೆ.



ಬೆತ್ವಾ ನದಿಗೆ ಅಡ್ಡಲಾಗಿ ಮೊರಾಕಾಂದರ್‌ನಿಂದ ಕಂದೌರ್ ಗ್ರಾಮದವರೆಗೆ ಈ ಸೇತುವೆಯನ್ನು ನಿರ್ಮಿಸಲಾಗುತ್ತಿತ್ತು. ತಡರಾತ್ರಿ 2 ಗಂಟೆಯ ಸುಮಾರಿಗೆ ಸೇತುವೆಯ ಕೆಲಸ ನಡೆಯುತ್ತಿತ್ತು, ಮಳೆಯಿಂದಾಗಿ ಕೆಲ ಕಾರ್ಮಿಕರು ಹೈಡ್ರಾ ಯಂತ್ರದ ಅಡಿಯಲ್ಲಿ ನಿಂತಿದ್ದರು. ಈ ವೇಳೆ, ಸೇತುವೆ ಕುಸಿದು ಬಿದ್ದಿದ್ದು, ದುರಂತ ಘಟನೆ ನಡೆದಿದೆ ಎಂದು ವರದಿಯಾಗಿದೆ. ನಿರ್ಮಾಣ ಸ್ಥಳದಲ್ಲಿ ಕೈಗೊಳ್ಳಲಾಗಿದ್ದ ಸುರಕ್ಷತಾ ಕ್ರಮಗಳ ಬಗ್ಗೆ ಗಂಭೀರ ಪ್ರಶ್ನೆಗಳೆದ್ದಿದ್ದು, ಆಕ್ರೋಶ ವ್ಯಕ್ತವಾಗಿದೆ. ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿರುವ ಹಮಿರ್ಪುರದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅರವಿಂದ್ ಕುಮಾರ್ ವರ್ಮಾ, ?ಸದ್ಯ ಎಸ್ಡಿಆರ್‌ಎಫ್ ತಂಡ ಸ್ಥಳಕ್ಕೆ ಆಗಮಿಸಿದ್ದು, ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗುತ್ತಿದೆ. ಬಿರುಗಾಳಿಯ ನಡುವೆಯೂ ಸೇತುವೆಯ ಕೆಲಸ ನಡೆಯುತ್ತಿತ್ತು. ಮೊದಲು ಸೇತುವೆಯ ಮೇಲ್ಭಾಗದ ಭಾಗಗಳು ಮುರಿದು ಬಿದ್ದಿವೆ. ಬಳಿಕ, ಅದಕ್ಕೆ ಆಸರೆಯಾಗಿದ್ದ ಪಿಲ್ಲರ್‌ಗಳು ಕುಸಿದು ಬಿದ್ದಿವೆ? ಎಂದು ತಿಳಿಸಿದ್ದಾರೆ.

ಸೇತುವೆಯ ಕಾವಲು ಕಾಯುತ್ತಿದ್ದ ಸಮೀಪದ ಹಳ್ಳಿಯ ಇಬ್ಬರು ಭದ್ರತಾ ಸಿಬ್ಬಂದಿಗಳು ಅವಶೇಷಗಳಡಿ ಸಿಲುಕಿ ಸಾವನ್ನಪ್ಪಿದ್ದಾರೆ. ನಾಲ್ವರು ಕಾರ್ಮಿಕರು ಕೂಡ ಮೃತಪಟ್ಟಿದ್ದಾರೆ. ಇನ್ನೂ ಮೂವರು ಅವಶೇಷಗಳಡಿ ಸಿಲುಕಿರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದುರಂತದಲ್ಲಿ ಮೃತಪಟ್ಟವರಲ್ಲಿ ಅತ್ಯಂತ ಕಿರಿಯ ವಯಸ್ಸಿನ ಯುವಕನನ್ನು ಉತ್ತರ ಪ್ರದೇಶದ ಬಂದಾ ಜಿಲ್ಲೆಯ ಚಿಲ್ಲಾ ಗ್ರಾಮದ ಕುಲದೀಪ್ ನಿಶಾದ್ (19) ಎಂದು ಗುರುತಿಸಲಾಗಿದೆ. ಸಾವನ್ನಪ್ಪಿದರನ್ನು ಚಿಲ್ಲಾ ನಿವಾಸಿ ಲೋಕೇಂದ್ರ, ಕುಲದೀಪ್ ನಿಶಾದ್, ಭೂರಾಗಢದ ಸಾವಂತ್ ಯಾದವ್ ಮತ್ತು ಸಭಾಜಿತ್, ಸ್ವಾಸಾ ಖುರ್ದ್ ನಿವಾಸಿ ಪುಷ್ಪೇಂದ್ರ ಸಿಂಗ್ ಚೌಹಾಣ್ ಹಾಗೂ ಅಚ್ಚುರ ನಿವಾಸಿ ರಾಜೇಶ್ ಪಾಲ್ ಎಂದು ಗುರುತಿಸಲಾಗಿದೆ.

# ರಾಜ್ಯದ 25ನೇ, ಒಕ್ಕಲಿಗ ಸಮುದಾಯದ 8ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್

**ಬೆಂಗಳೂರು, ಮೇ 29:** ಸ್ವಾತಂತ್ರ್ಯ ಬಂದ 1947ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ 23 ಮುಖ್ಯಮಂತ್ರಿಗಳು ಅಧಿಕಾರ ನಡೆಸಿದ್ದಾರೆ. ಮೊದಲ ಮುಖ್ಯಮಂತ್ರಿ ಕೆ.ಚೆಂಗಲರಾಯರೆಡ್ಡಿ ಅವರಿಂದ ಸಿದ್ದರಾಮಯ್ಯವರೆಗೆ ರಾಜ್ಯದಲ್ಲಿ 23 ಮುಖ್ಯಮಂತ್ರಿಗಳು ಆಳ್ವಿಕೆ ನಡೆಸಿದ್ದು, ಸದ್ಯದಲ್ಲೇ ಮುಖ್ಯಮಂತ್ರಿಯಾಗಲಿರುವ ಡಿ.ಕೆ.ಶಿವಕುಮಾರ್ 24ನೇ ಮುಖ್ಯಮಂತ್ರಿಯಾಗಲಿದ್ದಾರೆ.

ಇದುವರೆಗೂ 9 ಲಿಂಗಾಯತ, 7 ಒಕ್ಕಲಿಗ, ಇಬ್ಬರು ಬ್ರಾಹ್ಮಣರು, ಐವರು ಹಿಂದುಳಿದ ವರ್ಗಕ್ಕೆ ಸೇರಿದವರು ಮುಖ್ಯಮಂತ್ರಿಗಳಾಗಿದ್ದಾರೆ. ಸಿದ್ದರಾಮಯ್ಯ ಮತ್ತು ದೇವರಾಜ ಅರಸುರವರು ಹೆಚ್ಚು ಅವಧಿಗೆ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದಾರೆ.

**ಒಕ್ಕಲಿಗರು:** ಒಕ್ಕಲಿಗ ಸಮುದಾಯಕ್ಕೆ ಸೇರಿದ ಕೆ.ಸಿ.ರೆಡ್ಡಿ, ಕೆಂಗಲ್ ಹನುಮಂತಯ್ಯ, ಕಡಿದಾಳ್ ಮಂಜಪ್ಪ, ಎಚ್.ಡಿ.ದೇವೇಗೌಡ, ಎಸ್.ಎಂ.ಕೃಷ್ಣ, ಎಚ್.ಡಿ.ಕುಮಾರಸ್ವಾಮಿ (2 ಅವಧಿಗೆ), ಡಿ.ವಿ.ಸದಾನಂದಗೌಡ ಅವರು ಮುಖ್ಯಮಂತ್ರಿ ಯಾಗಿ ಸೇವೆ ಸಲ್ಲಿಸಿದ್ದಾರೆ. ಈಗ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದರೆ, ಈ ಸಮುದಾಯದ 8ನೇ ಮುಖ್ಯಮಂತ್ರಿಯಾಗಲಿದ್ದಾರೆ.

**ಲಿಂಗಾಯತರು:** ಲಿಂಗಾಯತ ಸಮುದಾಯಕ್ಕೆ ಸೇರಿದ ಎಸ್.ನಿಜಲಿಂಗಪ್ಪ (2 ಬಾರಿ), ಬಿ.ಡಿ.ಜತ್ತಿ, ಎಸ್.ಆರ್.ಕಂಠಿ, ವೀರೇಂದ್ರ ಪಾಟೀಲ್(2 ಬಾರಿ), ಎಸ್.ಆರ್.ಬೊಮ್ಮಾ, ಜೆ.ಎಚ್.ಪಟೇಲ್, ಬಿ.ಎಸ್.ಯಡಿಯೂರಪ್ಪ(4), ಜಗದೀಶ್‌ಶೆಟ್ಟರ್, ಬಸವರಾಜ ಬೊಮಾಯಿ ಅವರು ಮುಖ್ಯಮಂತ್ರಿಯಾಗಿ ರಾಜ್ಯದ ಆಡಳಿತ ನಡೆಸಿದ್ದರು.

**ಬ್ರಾಹ್ಮಣರು:** ಬ್ರಾಹಣ ಸಮುದಾಯಕ್ಕೆ ಸೇರಿದ ಆರ್.ಗುಂಡೂರಾವ್ ಹಾಗೂ ರಾಮಕೃಷ್ಣ ಹೆಗಡೆ (3 ಬಾರಿ) ರಾಜ್ಯದ ಮುಖ್ಯಮಂತ್ರಿಗಳಾಗಿದ್ದರು.

**ಹಿಂದುಳಿದವರು:**

ಹಿಂದುಳಿದ ವರ್ಗಕ್ಕೆ ಸೇರಿದ ಡಿ.ದೇವರಾಜ ಅರಸು(2 ಬಾರಿ), ಎಸ್.ಬಂಗಾರಪ್ಪ, ವೀರಪ್ಪ ಮೊಯ್ಲಿ, ಧರ್ಮಸಿಂಗ್ ಹಾಗೂ ಸಿದ್ದರಾಮಯ್ಯ (2 ಬಾರಿ) ಮುಖ್ಯಮಂತ್ರಿಗಳಾಗಿ ಕರ್ನಾಟಕದಲ್ಲಿ ಸೇವೆ ಸಲ್ಲಿಸಿದ್ದಾರೆ.

ಮುಖ್ಯಮಂತ್ರಿಯಾಗಿರುವವರ ಜಾತಿವಾರು ಪ್ರಾತಿನಿಧ್ಯವನ್ನು ನೋಡಿದರೆ ಲಿಂಗಾಯತ ಸಮುದಾಯಕ್ಕೆ ಸಿಂಹಪಾಲು ದೊರೆತಿದೆ. ಒಂಬತ್ತು ಮಂದಿ ಲಿಂಗಾಯತ ಸಮುದಾಯದವರು ಮುಖ್ಯಮಂತ್ರಿಯಾಗಿದ್ದಾರೆ. ಒಕ್ಕಲಿಗ ಸಮುದಾಯಕ್ಕೆ ಸೇರಿದ 7 ಮಂದಿಗೆ ಮುಖ್ಯಮಂತ್ರಿಯಾಗುವ ಅವಕಾಶ ದೊರೆತಿದ್ದು ಎರಡನೇ ಸ್ಥಾನದಲ್ಲಿದೆ.



ಹಿಂದುಳಿದ ವರ್ಗಕ್ಕೆ ಮೂರನೇ ಸ್ಥಾನ ದೊರೆತಿದ್ದು 5 ಮಂದಿ ಮುಖ್ಯಮಂತ್ರಿಗಳಾಗಿದ್ದಾರೆ. ನಾಲ್ಕನೇ ಸ್ಥಾನ ಬ್ರಾಹಣ ಸಮುದಾಯಕ್ಕೆ ದೊರೆತಿದ್ದು, ಇಬ್ಬರು ಮುಖ್ಯಮಂತ್ರಿಗಳಾಗಿದ್ದಾರೆ.

ಆದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಇದುವರೆಗೂ ಮುಖ್ಯಮಂತ್ರಿಯಾಗುವ ಅವಕಾಶ ಕೂಡಿಬಂದಿಲ್ಲ.

# ಮುಂದಿನ 8 ವರ್ಷ ಡಿಕೆಶಿ ಅಲ್ಲಾಡಿಸಲು ಯಾರಿಂದಲೂ ಸಾಧ್ಯವಿಲ್ಲ: ರಾಜಗುರು ದ್ವಾರಕಾನಾಥ್ ಗುರೂಜಿ ಭವಿಷ್ಯ

**ಬೆಂಗಳೂರು, ಮೇ 29:** ಸೋಮವಾರದ ಒಳಗೆ ಡಿ.ಕೆ. ಶಿವಕುಮಾರ್ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಲಿದ್ದಾರೆ. ಮುಂದಿನ 8 ವರ್ಷಗಳ ಕಾಲ ಅವರ ಅಧಿಕಾರವನ್ನು ಯಾರಿಂದಲೂ ಅಲ್ಲಾಡಿಸಲು ಸಾಧ್ಯವಿಲ್ಲ ಎಂದು ಶಿವಕುಮಾರ್ ಅವರ ಪರಮಾಪ್ತ ಗುರುಗಳಾದ ರಾಜಗುರು ದ್ವಾರಕನಾಥ್ ಗುರೂಜಿ ಭರ್ಜರಿ ಭವಿಷ್ಯ ನುಡಿದಿದ್ದಾರೆ.

ಖಾಸಗಿ ಸುದ್ದಿವಾಹಿನಿಯೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರೊಂದಿಗಿನ ತಮ್ಮ 35 ವರ್ಷಗಳ ಸುದೀರ್ಘ ಒಡನಾಟವನ್ನು ನೆನಪಿಸಿಕೊಂಡಿದ್ದಾರೆ. ಅವನು (ಡಿಕೆಶಿ) ನನಗೆ ಕಳೆದ 35 ವರ್ಷಗಳಿಂದ ಪರಿಚಯ. ಹಿಂದೆ ಮಾಜಿ ಸಿಎಂ ಬಂಗಾರಪ್ಪ ಅವರ ಸಂಪುಟದಲ್ಲಿ ಅತ್ಯಂತ ಸಣ್ಣ ವಯಸ್ಸಿಗೆ ಜೈಲು ಮಂತ್ರಿಯಾಗಿದ್ದಾಗಲೇ, ನೀನು ಮುಂದೊಂದು ದಿನ ಈ ರಾಜ್ಯಕ್ಕೆ ಮುಖ್ಯಮಂತ್ರಿ ಆಗ್ತೀಯಾ ಎಂದು ಭವಿಷ್ಯ ಹೇಳಿದ್ದೆ. ಅವನು ಸದಾ ನನ್ನ ಸಂಪರ್ಕದಲ್ಲೇ ಇದ್ದಾನೆ. ಅವನು ನಮ್ಮ ಮನೆಯ ಮಗನಿದ್ದಂತೆ ಎಂದಿದ್ದಾರೆ.

ಸಿದ್ದರಾಮಯ್ಯಗೆ ರಾಜಯೋಗ ಮುಗಿದಿದೆ. ಅವರ ಜಾತಕದ ಬಗ್ಗೆ ವಿಶ್ಲೇಷಿಸಿದ ಗುರೂಜಿ, ಸಿದ್ದರಾಮಯ್ಯ ವೃಶ್ಚಿಕ ರಾಶಿ. ಸದ್ಯ ಅವರಿಗೆ ಗುರು ಬಲ ಮತ್ತು ಶನಿ ಬಲ ಇಲ್ಲ. ರಾಜ್ಯಕ್ಕೆ ಅವರ ಮಾರ್ಗದರ್ಶನ ಇನ್ನೂ ಅಗತ್ಯ ಎಂದರು. ಡಿ.ಕೆ. ಶಿವಕುಮಾರ್ ಅವರಿಗೆ ಈಗ ಸುವರ್ಣ ಸಮಯ ಆರಂಭವಾಗಿದೆ. ಗುರು ಮಿಥುನ ರಾಶಿಯಲ್ಲಿರುವುದು ಡಿ.ಕೆ.ಶಿ.ಗೆ ರಾಜಯೋಗ ತರುತ್ತದೆ ಎಂದು ಭವಿಷ್ಯ ನುಡಿದರು.

ಡಿ.ಕೆ. ಶಿವಕುಮಾರ್ ಅನ್ನೋದೇ ಒಂದು



ಬ್ರ್ಯಾಂಡ್. ಡಿ.ಕೆ. ಶಿವಕುಮಾರ್ ಕೇವಲ ಮುಖ್ಯಮಂತ್ರಿ ಮಾತ್ರವಲ್ಲ. ಅವರು ಬುದ್ಧಿವಂತ, ಜಾಣ ಮತ್ತು ಸಹನೆಯುಳ್ಳವರು ಎಂದು ಗುರೂಜಿ ಬಣ್ಣಿಸಿದರು. ಅವನಿಗೆ ಸಿಎಂ ಆಗೋದು ನ್ಯಾಯವಾಗಿ ಇನ್ನೂ ಬೇಗ, ಅಂದರೆ ಹೊಸ ವರ್ಷದ ಒಳಗೇ ಆಗಬೇಕಿತ್ತು. ಆದರೆ ನಿಧಾನವಾಗುತ್ತಿತ್ತು.

ಅದಕ್ಕಾಗಿಯೇ ನಾನು ಅವನ ಪರವಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲು ಶೃಂಗೇರಿ ಶಾರದಾಂಬೆ ಸನ್ನಿಧಿಗೆ ಹೋಗಿದ್ದೆ. ನಿಧಾನವಾದ ಕಾರಣ ಆ ದೇವರಿಗೇ ಗೊತ್ತು. ಆದರೆ, ನಾನು ಶೃಂಗೇರಿಯಲ್ಲಿ ದೇವರಿಗೆ ಪ್ರಾರ್ಥನೆ ಸಲ್ಲಿಸುತ್ತಿದ್ದಾಗಲೇ ಖುದ್ದು ಡಿ.ಕೆ. ಶಿವಕುಮಾರ್ ನನಗೆ ಕರೆ ಮಾಡಿ 'ಗುರೂಜಿ, ಕೆಲಸ ಆಗಿದೆ' ಎಂದು ಸಿಹಿ ಸುದ್ದಿ ನೀಡಿದ. ನಾನು ಈಗ ಬೆಂಗಳೂರಿಗೆ ಹೋಗಿ ಆತನ ಜೊತೆ ಕುಳಿತು ಮಾತನಾಡುತ್ತೇನೆ. ಸೋಮವಾರದ ಒಳಗೆ ಆತ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾನೆ' ಎಂದರು.

# ಅಕ್ರಮ ಖಾತೆ: ಎಆರ್‌ಒ ವಿರುದ್ಧ ಜಿಬಿಎ ಮುಖ್ಯ ಆಯುಕ್ತರಿಗೆ ಎನ್.ಆರ್. ರಮೇಶ್ ದೂರು

**ಬೆಂಗಳೂರು, ಮೇ. 29:** ಅಕ್ರಮವಾಗಿ 50 ನಿವೇಶನಗಳಿಗೆ ಎ ಖಾತಾ ಮಾಡಿಕೊಟ್ಟಿರುವ ಆರೋಪ ಎದುರಿಸುತ್ತಿರುವ ಎಆರ್‌ಒ ಮಂಜುಳಾ ಅವರು ಮತ್ತೆ 30 ನಿವೇಶನಗಳಿಗೆ ಖಾತಾ ಮಾಡಿಕೊಟ್ಟಿರುವುದನ್ನು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಪತ್ತೆ ಹಚ್ಚಿದ್ದು ಕೂಡಲೇ ಅವರನ್ನು ಸೇವೆಯಿಂದ ಅಮಾನತು ಗೊಳಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಹಾಗೂ ಪಶ್ಚಿಮ ನಗರ ಪಾಲಿಕೆ ಆಯುಕ್ತರಿಗೆ ದೂರು ನೀಡಿದ್ದಾರೆ.

ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಹೇರೋಹಳ್ಳಿ ಗ್ರಾಮದ ಸರ್ವೆ ನಂ.56/1ರಲ್ಲಿರುವ 4.20 ಎಕರೆ ಜಮೀನು ಮೂಲತಃ ದಿವಂಗತ ಗಂಗಯ್ಯ ಅವರ ಹೆಸರಿನಲ್ಲಿದ್ದು, ಬಳಿಕ ಅನುಮಾನಾಸ್ಪದವಾಗಿ ಗಿರಿಜಾ ಬಾಯಿ ಮತ್ತು ತೇಜಸ್ವಿನಿ ಹೆಸರಿಗೆ ಪಹಣಿ ಬದಲಾಗಿರುವ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಸದ್ಯ ಅದು ವಿಚಾರಣೆಯಲ್ಲಿದೆ ಎಂದು ರಮೇಶ್ ತಿಳಿಸಿದ್ದಾರೆ.ಇದೇ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ



ಪ್ರಾಧಿಕಾರದ ಅನುಮೋದಿತ ನಕ್ಷೆ ಇಲ್ಲದೇ ವಿಕಾಸ್ ಇನ್ಫೋ ಬಿಲ್ಡರ್ಸ್ ಹೆಸರಿನಲ್ಲಿ ಅಶ್ವಥ್ ಎಂಬವರು ಅನಧಿಕೃತ ಬಡಾವಣೆ ನಿರ್ಮಾಣ ಮಾಡುತ್ತಿದ್ದಾರೆ ಎನ್ನಲಾಗಿದೆ. ಈ ಬಡಾವಣೆಯಲ್ಲಿನ 50ಕ್ಕೂ ಹೆಚ್ಚು ನಿವೇಶನಗಳಿಗೆ ನಿಯಮ ಉಲ್ಲಂಘಿಸಿ ಎ ಖಾತಾ ಹಾಗೂ ಇ ಖಾತಾಗಳನ್ನು ಮಾಡಿಕೊಡಲಾಗಿದೆ ಎಂದು ಈ ಹಿಂದೆ ಮಂಜುಳಾ ಅವರ ವಿರುದ್ಧ ರಮೇಶ್ ಆರೋಪಿಸಿ ದ್ದರು.

ಪಹಣಿಯಲ್ಲಿ ಎಕರೆಗಳ ಲೆಕ್ಕದಲ್ಲಿ ಇರುವ ಜಮೀನಿಗೆ ಪ್ರತ್ಯೇಕ ನಿವೇಶನಗಳ ಖಾತೆ ಮಾಡಬಾರದು ಎಂಬ ನಿಯಮವಿದ್ದರೂ, ಇಪಿಐಡಿ ಸೃಷ್ಟಿಸಿ ಖಾತೆಗಳನ್ನು ನೀಡಲಾಗಿದೆ. ಇದಕ್ಕಾಗಿ ಸುಮಾರು 2 ಕೋಟಿಗೂ ಅಧಿಕ ಲಂಚ ಸ್ವೀಕರಿಸಲಾಗಿದೆ ಎಂಬ ಗಂಭೀರ ಆರೋಪವೂ ಕೇಳಿಬಂದಿದೆ.

ಇದಲ್ಲದೆ, ಖಾತೆ ಮಂಜೂರಿಗೆ ಅಗತ್ಯವಿರುವ ಶುದ್ಧ ಕ್ರಯಪತ್ರಗಳಿಲ್ಲದೇ, ಅಭಿವೃದ್ಧಿ ಶುಲ್ಕ ಹಾಗೂ ಸುಧಾರಣಾ ಶುಲ್ಕ ಪಾವತಿಸದೇ ಖಾತೆಗಳನ್ನು ಮಾಡಿಕೊಟ್ಟ ಪರಿಣಾಮ ಪಾಲಿಕೆಗೆ 4 ಕೋಟಿಗೂ ಹೆಚ್ಚು ನಷ್ಟ ಉಂಟಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.ಈ ಸಂಬಂಧ ಈಗಾಗಲೇ ಅಧಿಕಾರಿಗಳು ವಿವರಣೆ ಕೋರಿರುವ ನಡುವೆಯೇ, ಅದೇ ಬಡಾವಣೆಯ ಮತ್ತಷ್ಟು 30ಕ್ಕೂ ಹೆಚ್ಚು ನಿವೇಶನಗಳಿಗೆ ಮತ್ತೆ ಎ ಖಾತೆಗಳನ್ನು ಮಂಜೂರು ಮಾಡಿರುವುದು ಬೆಳಕಿಗೆ ಬಂದಿದೆ ಎಂದು ರಮೇಶ್ ಆರೋಪಿಸಿದ್ದಾರೆ.

ನಿರಂತರವಾಗಿ ಕಾನೂನು ಬಾಹಿರ ಚಟುವಟಿಕೆಯಲ್ಲಿ ತೊಡಗಿರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳದಿದ್ದರೆ, ಕೆಂಗೇರಿ, ರಾಜರಾಜೇಶ್ವರಿ ನಗರ, ಬೊಮ್ಮನಹಳ್ಳಿ ಹಾಗೂ ಬೆಂಗಳೂರು ದಕ್ಷಿಣ ಭಾಗಗಳಲ್ಲಿ ಕಳೆದ ಕೆಲವು ವರ್ಷಗಳಿಂದ ನಡೆದಿರುವ ಇಂತಹ ಅಕ್ರಮಗಳ ವಿರುದ್ಧ ರಾಜ್ಯ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

# ಆರ್.ಬಿ. ತಿಮ್ಮಾಪುರಗೆ ಡಿಸಿಎಂ ಸ್ಥಾನ, ಕೆ.ಎಚ್.ಮುನಿಯಪ್ಪ ಜತೆಗೆ ಎಚ್. ಆಂಜನೇಯಗೂ ಸಚಿವ ಸ್ಥಾನ ನೀಡಲು ಅಗ್ರಹ



**ಬೆಂಗಳೂರು, ಮೇ 29:** ರಾಜ್ಯದ ಅತಿ ದೊಡ್ಡ ಮಾದಿಗ ಸಮಾಜಕ್ಕೆ ಸಚಿವ ಸಂಪುಟದಲ್ಲಿ ಇನ್ನಷ್ಟು ಬಲಿಷ್ಠ ಹಾಗೂ ನ್ಯಾಯಯುತ ರಾಜಕೀಯ ಪ್ರಾತಿನಿಧ್ಯ ಒದಗಿಸಬೇಕು. ಆರ್.ಬಿ.ತಿಮ್ಮಾಪುರಗೆ ಉಪ ಮುಖ್ಯಮಂತ್ರಿ, ಕೆ.ಎಚ್. ಮುನಿಯಪ್ಪ ರವರ ಜೊತೆಗೆ ಎಚ್. ಆಂಜನೇಯ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷ ಡಾ. ಎಸ್. ಸಂಗಮೇಶ್ ಆಗ್ರಹಿಸಿದ್ದಾರೆ. ರಾಜ್ಯದ ಎಲ್ಲಾ ಮಾದಿಗ ಸಂಘಟನೆಗಳು, ಮಠಾಧೀಶರು, ಬುದ್ಧಿಜೀವಿಗಳು, ಯುವ ಸಂಘಟನೆ ಗಳು, ನಿವೃತ್ತ ಅಧಿಕಾರಿಗಳು ಹಾಗೂ ಪ್ರಗತಿಪರ ಶಕ್ತಿಗಳು ಒಂದೇ ವೇದಿಕೆಯಲ್ಲಿ ನಿಂತು ಈ ನ್ಯಾಯಯುತ ಪ್ರಾತಿನಿಧ್ಯದ ಬೇಡಿಕೆಗೆ ಬೆಂಬಲ ನೀಡಬೇಕೆಂದು ಹೇಳಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾದಿಗ ಜನಾಂಗ ರಾಜ್ಯದಲ್ಲಿ ಅತಿದೊಡ್ಡ ದಲಿತ ಸಮುದಾಯ ವಾಗಿದ್ದು, ಸಾಮಾಜಿಕ ನ್ಯಾಯ, ಕಾಂಗ್ರೆಸ್ ಪಕ್ಷದ ಬಲವರ್ಧನೆ ಹಾಗೂ ಜನಪರ ಹೋರಾಟಗಳಲ್ಲಿ ನಿರಂತರವಾಗಿ ಪ್ರಮುಖ ಪಾತ್ರ ವಹಿಸಿದೆ. ಆದಾಗ್ಯೂ, ಸಮುದಾಯಕ್ಕೆ ಸರ್ಕಾರ'ದಲ್ಲಿ ತಕ್ಕ ಮಟ್ಟಿನ ರಾಜಕೀಯ ಸ್ಥಾನಮಾನ ಸಿಗದಿ ರುವುದು ಬೇಸರದ ಸಂಗತಿಯಾಗಿದೆ ಎಂದು ತಿಳಿಸಿದ್ದಾರೆ.

## ಕಾಲಮಿತಿಯೊಳಗೆ ಮತದಾರ ಪಟ್ಟಿ ಪರಿಷ್ಕರಣೆ ಪೂರ್ಣಗೊಳಿಸಲು ನಿರ್ದೇಶನ

# ಸಮರ್ಪಕ ಎಸ್‌ಐಆರ್‌ಗೆ ಸಿದ್ಧತೆ ಮಾಡಿಕೊಳ್ಳಿ: ಅಧಿಕಾರಿಗಳಿಗೆ ಮಹೇಶ್ವರರಾವ್ ಸೂಚನೆ

**ಬೆಂಗಳೂರು, ಮೇ 29:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಯನ್ನು ಸಮರ್ಪಕವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಶುಕ್ರವಾರ ನಡೆದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ, ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಕೇಂದ್ರ, ಉತ್ತರ, ದಕ್ಷಿಣ ಹಾಗೂ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಎಸ್.ಐ.ಆರ್ ಕುರಿತಂತೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಸಮರ್ಪಕವಾಗಿ ಮಾಡಿಕೊಂಡು ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಮ್ಮ ವ್ಯಾಪ್ತಿಯಲ್ಲಿ ಬೂತ್‌ಮಟ್ಟದ ಅಧಿಕಾರಿಗಳ ಕೊರತೆಯಿದ್ದರೆ ಕೂಡಲೇ



ನಿಯೋಜನೆ ಮಾಡಿಕೊಳ್ಳಬೇಕು. ಈವರೆಗೆ ಕರ್ತವ್ಯಕ್ಕೆ ಹಾಜರಾಗದ ಬಿ.ಎಲ್.ಓ ಗಳಿಗೆ ಕೂಡಲೇ ನೋಟೀಸ್ ಜಾರಿ ಮಾಡಬೇಕು. ನೋಟೀಸ್‌ಗೆ ಪ್ರತಿಕ್ರಿಯೆ ನೀಡದ ಬಿ.ಎಲ್.ಓಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಲ್ಲದೆ ಎಲ್ಲ ಬಿಎಲ್‌ಓಗಳು ಕರ್ತವ್ಯ ನಿರ್ವಹಣೆಯನ್ನು ಕಡ್ಡಾಯವಾಗಿ ಮಾಡುವ ಸಲುವಾಗಿ ಬಿಎಲ್‌ಓಗಳಾಗಿ ನಿಯೋಜನೆಗೊಂಡಿರುವ ವಿವಿಧ ಇಲಾಖಾ ಲೋಪಗಳಿಗೆ ಆಸ್ಪದ ಬೇಡ

ಮುಖ್ಯಸ್ಥರಿಗೆ ಪತ್ರ ಕಳುಹಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಕುರಿತಂತೆ ಪ್ರತಿದಿನ ಪ್ರಗತಿ ಪರಿಶೀಲನಾ ಸಭೆ ನಡೆಸಬೇಕು. ಎಲ್ಲಿಯೂ ಯಾವುದೇ ರೀತಿಯ ಲೋಪದೋಷಗಳಾಗದಂತೆ ಎಸ್.ಐ.ಆರ್ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಡೆಸಬೇಕೆಂದು ಮಹೇಶ್ವರರಾವ್ ಸೂಚನೆ ನೀಡಿದರು. ಎಲ್ಲ ಬೂತ್‌ಮಟ್ಟದ ಅಧಿಕಾರಿಗಳು ಜೂನ್ 16ರ ಒಳಗಾಗಿ ಮತದಾರರ ಪೂರ್ವ ಮ್ಯಾಪಿಂಗ್‌ಗೆ ಸಂಬಂಧಿಸಿದಂತೆ ಶೇ. 100 ರಷ್ಟು ಪ್ರಗತಿ ಸಾಧಿಸಬೇಕೆಂದು ಸೂಚಿಸಿದರು. ನಗರದಲ್ಲಿ ಜೂನ್ 20 ರಿಂದ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಈ ಕುರಿತು ನಾಗರಿಕರಲ್ಲಿ ಹೆಚ್ಚಿನ ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದು ಮುಖ್ಯ ಆಯುಕ್ತರು ಹೇಳಿದ್ದಾರೆ.

ಸಭೆಯಲ್ಲಿ ಚುನಾವಣಾ ವಿಭಾಗದ ವಿಶೇಷ ಆಯುಕ್ತರಾದ ಸುಷ್ಮಾ ಗೋಡಬೋಲೆ, ಅಪರ ಜಿಲ್ಲಾ ಚುನಾವಣಾಧಿಕಾರಿಗಳಾದ ಪೊಮ್ಮಲ ಸುನೀಲ್‌ಕುಮಾರ್, ರಮೇಶ್, ಜಗದೀಶ್, ಕಂದಾಯ ಹೆಚ್ಚುವರಿ ಆಯುಕ್ತರಾದ ಕವಿತಾ, ರಂಗನಾಥ್, ಪಲ್ಲವಿ, ಸಹಾಯಕ ಆಯುಕ್ತ ಎಂ. ಶ್ರೀನಿವಾಸ, ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು ಸೇರಿದಂತೆ ಹಲವರು ಇದ್ದರು.

### ಎಸ್‌ಐಆರ್ ವೇಳಾಪಟ್ಟಿ

* **ಜೂನ್ 20–29: ಎಸ್.ಐ.ಆರ್‌ಗೆ ಸಿದ್ಧತೆ, ತರಬೇತಿ ಹಾಗೂ ಮುದ್ರಣ**
* **ಜೂನ್ 30–ಜುಲೈ 29: ಮತದಾರರ ಮನೆಗಳಿಗೆ ಬಿ.ಎಲ್.ಓಗಳ ಭೇಟಿ**
* **ಜುಲೈ 29: ಮತದಾನ ಕೇಂದ್ರಗಳಲ್ಲಿ ಎಸ್.ಐ.ಆರ್ ಪ್ರಕ್ರಿಯೆ**
* **ಆಗಸ್ಟ್ 5: ಎಸ್.ಐ.ಆರ್ ಭಾಗವಾಗಿ ಮತದಾರರ ಕರಡು ಪಟ್ಟಿ ಪ್ರಕಟ**
* **ಆಗಸ್ಟ್ 5–ಸೆಪ್ಟೆಂಬರ್ 4: ಆಕ್ಷೇಪಣೆ ಸಲ್ಲಿಸಲು ಅವಕಾಶ**
* **ಆಗಸ್ಟ್ 5–ಅಕ್ಟೋಬರ್ 3: ನೋಟೀಸ್ / ವಿಲೇವಾರಿ / ಆಕ್ಷೇಪಣೆ**
* **ಅಕ್ಟೋಬರ್ 7: ಅಂತಿಮ ಮತದಾರರ ಪಟ್ಟಿ ಪ್ರಕಟ**




ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಶುಕ್ರವಾರ ಆಮ್ ಆದ್ಮಿ ಪಕ್ಷದ (ಎಎಪಿ) ಕಾರ್ಯಕರ್ತರು ನಿರಂತರವಾಗಿ ಏರುತ್ತಿರುವ ಇಂಧನ ಬೆಲೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

## ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ, ನ್ಯಾಯಮೂರ್ತಿ ಟಿ.ಜಿ. ಶಿವಶಂಕರೇಗೌಡ

# ಆರೋಗ್ಯ ವಿಮೆ ಎಚ್ಚರಿಕೆ ಅಗತ್ಯ ದಾರಿತಪ್ಪಿಸುವ ವಿಮಾ ಕಂಪನಿಗಳು

**ಬೆಂಗಳೂರು, ಮೇ 29:** ಆರೋಗ್ಯ ವಿಮೆ ಮಾಡಿಸುವಾಗ ವ್ಯಾಪಕ ಮುಂಜಾಗ್ರತೆ ವಹಿಸುವುದು ಅಗತ್ಯವಾಗಿದ್ದು, ಜನ ಸಾಮಾನ್ಯರು ಮೋಸ ಹೋಗಬಾರದು ಎಂದು ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾ.ಟಿ.ಜಿ. ಶಿವಶಂಕರೇಗೌಡ ಹೇಳಿದ್ದಾರೆ.



ದೇವಾಂಗ ಸಂಘ ಕಾಲೇಜ್ ಆಫ್ ಲಾ ಹಾಗೂ ಯುವ ವಕೀಲರ ಸ್ನೇಹ ಬಳಗದಿಂದ ದೇವಾಂಗ ಸಂಘದ ವಿದ್ಯಾ ಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಮೂರು ದಿನಗಳ ಫೋಕ್ಸೊ ಕಾಯ್ದೆ ಕುರಿತು ಶ್ರೀ ಪತಿಯಪ್ಪ ಸ್ಮರಣಾರ್ಥ ಅಖಿಲ ಕರ್ನಾಟಕ ಪ್ರಥಮ ಕನ್ನಡ ಅಣಕು ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಹಕರು ವಿಮೆ ಕ್ಲೈಮ್ ಮಾಡುವಾಗ ಆರೋಗ್ಯ ವಿಮಾ ಕಂಪನಿಗಳು ಅನಗತ್ಯವಾಗಿ ಖ್ಯಾತೆ ತೆಗೆಯುತ್ತಿವೆ. ರೋಗಿಗೆ ಅಧಿಕ ರಕ್ತದೊತ್ತಡವಿತ್ತು. ಮಧುಮೇಹವಿದೆ. ಹೀಗಾಗಿ ವಿಮಾ ಮೊತ್ತ ಪಾವತಿಸಲು ಸಾಧ್ಯವಿಲ್ಲ ಎಂದು ಹೇಳುತ್ತಿವೆ.

ಸಹಸ್ರಾರು ರೂಪಾಯಿ ಪಾವತಿಸಿ ವಿಮೆ ಪಡೆಯುವವರಿಗೆ ವಂಚನೆ ಯಾಗುತ್ತಿದೆ. ಇಂತಹ ಹಲವು ಪ್ರಕರಣಗಳಲ್ಲಿ ಗ್ರಾಹಕರ ಪರವಾಗಿ ತೀರ್ಪುಗಳು ಬಂದಿವೆ. ವಿಮಾ ಕಂಪನಿಗಳನ್ನು ಪ್ರತಿಬಾರಿ ತರಾಟೆಗೆ ತೆಗೆದುಕೊಳ್ಳಲಾಗುತ್ತಿದೆ.

ಯುವ ವಕೀಲರು ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಮೊದಲು ವೃತ್ತಿ ಆರಂಭಿಸಬೇಕು. ಏಕೆಂದರೆ ಪ್ರಕರಣಗಳು ಕೇವಲ ಮೂರು, ನಾಲ್ಕು ತಿಂಗಳಲ್ಲಿ ಇತ್ಯರ್ಥವಾಗಿ ತೀರ್ಪುಗಳು ಬರುತ್ತಿವೆ. ಪ್ರತಿಯೊಂದು ಪ್ರಕರಣವೂ ವಿಭಿನ್ನವಾಗಿದ್ದು, ಕಲಿಯಲು ವಿಪುಲ ಅವಕಾಶಗಳಿವೆ ಎಂದರು.

ಫೋಕ್ಸೋ ಕಾಯ್ದೆ ಬಗ್ಗೆ ಇಂದು ಚಿಂತನೆ ನಡೆಯುತ್ತಿದ್ದು, ಯುವ ವಕೀಲರು ವಿಷಯದ ಬಗ್ಗೆ ಬೆಳಕು ಚೆಲ್ಲಬೇಕು. 45 ಕಾಲೇಜುಗಳು ಸ್ಪರ್ಧೆಯಲ್ಲಿ ಭಾಗವಹಿಸಿರುವುದು ವಿಶೇಷವಾಗಿದೆ. ಕೇಂದ್ರ ಸರ್ಕಾರ ಬಾಲಪರಾಧಿ ಕಾಯ್ದೆಗೆ ತಿದ್ದುಪಡಿ ತರುತ್ತಿದ್ದು, ಬಾಲನ್ಯಾಯ ವ್ಯವಸ್ಥೆಯಲ್ಲಿ ವಯೋಮಿತಿಯನ್ನು 18 ರಿಂದ 16 ವರ್ಷಕ್ಕೆ ಇಳಿಸಲು ಚಿಂತನೆ ನಡೆಯುತ್ತಿದೆ.

ಹಾಗೇನಾದರೂ ತಿದ್ದುಪಡಿಯಾದರೆ ದೇಶದಲ್ಲಿರುವ ಪೋಕ್ಸೋ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಲಿದೆ. ಫೋಕ್ಸೋ ಕಾಯ್ದೆಯಲ್ಲಿ ಸಂತ್ರಸ್ತರಿಗೆ ನ್ಯಾಯ ದೊರೆಯಬೇಕು. ಜೊತೆಗೆ ದುರ್ಬಳಕೆ ತಡೆಗಟ್ಟಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.


ಹೈಕೋರ್ಟ್ ನ್ಯಾಯವಾದಿ ಡಾ. ಜಗದೀಶ್ ಹಾಲಶೆಟ್ಟಿ, ದೇವಾಂಗ ಸಂಘದ ಅಧ್ಯಕ್ಷ ಡಾ. ಜಿ. ರಮೇಶ್, ಖಜಾಂಚಿ ಶ್ವೇತಾ ರವಿಶಂಕರ್, ವಕೀಲರಾದ ಗೌರೀಶ್ ಎಸ್, ದೇವಾಂಗ ಸಂಘದ ಉಪಾಧ್ಯಕ್ಷರಾದ ಎ.ವಿಜಯ್ ಕುಮಾರ್, ಪಾರ್ವತಿ, ಯುವ ವಕೀಲರ ಸ್ನೇಹ ಬಳಗದ ಅಧ್ಯಕ್ಷ ಅನಿಲ್ ರೆಡ್ಡಿ, ಕಾಲೇಜಿನ ಪ್ರಾಂಶುಪಾಲೆ ಡಾ. ಶಿಲ್ಪಾ, ದೇವಾಂಗ ಸಂಘದ ಕಾರ್ಯದರ್ಶಿ ಆರ್. ಭಾಸ್ಕರ್, ಖಜಾಂಚಿ ಎಂ. ಲಕ್ಷ್ಮೀ ನಾರಾಯಣ, ಜಂಟಿ ಕಾರ್ಯದರ್ಶಿ ಊರುಕರೆ ಜಿ. ದಯಾನಂದ್ ಮತ್ತಿತರರು ಉಪಸ್ಥಿತರಿದ್ದರು.

# ನಾಳೆಗೆ ಬೇಸಿಗೆ ಅಂತ್ಯ, ಕೆಲವು ಜಿಲ್ಲೆಗಳಲ್ಲಿ ಕಾಡುತ್ತಿದೆ ಬಿಸಿಲಿನ ತೀವ್ರತೆ

**ಬೆಂಗಳೂರು, ಮೇ 29:** ರಾಜ್ಯದಲ್ಲಿ ಮೇ 31ಕ್ಕೆ ಬೇಸಿಗೆಗಾಲ ಮುಕ್ತಾಯವಾಗಲಿದೆ. ಮಾ.1ರಿಂದ ಶುರುವಾದ ಬೇಸಿಗೆಗಾಲ ಮೇ 31ಕ್ಕೆ ಕೊನೆಗೊಳ್ಳಲಿದೆ. ಆದರೆ, ಬೇಸಿಗೆ ಮುಗಿಯಲು 2 ದಿನ ಬಾಕಿ ಇದ್ದರೂ ಹಲವು ಜಿಲ್ಲೆಗಳಲ್ಲಿ ಬಿಸಿಲಿನ ತೀವ್ರತೆ ಇನ್ನೂ ಕಾಡುತ್ತಿದೆ.

ಇದರ ನಡುವೆ ಮುಂದಿನ 5 ದಿನ ರಾಜ್ಯದ ಗರಿಷ್ಠ ತಾಪಮಾನದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಹವಾಮಾನ ಇಲಾಖೆ ಮಾಹಿತಿ ಕೊಟ್ಟಿದೆ.ಇಲಾಖೆ ಪ್ರಕಾರ ಜೂ 1ರಿಂದ ರಾಜ್ಯದಲ್ಲಿ ಮಳೆಗಾಲ ಶುರುವಾಗಲಿದೆ. ವಾಡಿಕೆಯಂತೆ ಕರ್ನಾಟಕದ ಕರಾವಳಿ ಭಾಗಕ್ಕೆ ನೈರುತ್ಯ ಮಾನ್ಸೂನ್ (ಮುಂಗಾರು) ಆಗಮಿಸುವ ಸಾಧ್ಯತೆ ಇದೆ. ಈ ಬಾರಿ 'ಸೂಪರ್ ಎಲ್‌ನಿನೋ' ಆತಂಕ ಹಿನ್ನೆಲೆಯಲ್ಲಿ ಮಳೆ ಅಭಾವ ಎದುರಾಗುವ ಸಂಭವ ಇದೆ.

ಪೆಸಿಫಿಕ್ ಸಾಗರದಲ್ಲಿ ಪ್ರಸ್ತುತ 'ಲಾ–ನಿನಾ' ಸ್ಥಿತಿ ಇದೆ. ಆದರೆ, ಜುಲೈ ವೇಳೆಗೆ ಇದು 'ಎಲ್ ನಿನೋ' ಆಗಿ ಪರಿವರ್ತನೆಗೊಳ್ಳಲಿದೆ. ಈ ಬದಲಾವಣೆಯು ಮುಂಗಾರು ಮಳೆ ಮೇಲೆ ನೇರ ಪರಿಣಾಮ ಬೀರಲಿದೆ. ಜೂನ್, ಜುಲೈನಲ್ಲಿ ವಾಡಿಕೆಯಷ್ಟೇ ಮಳೆಯಾದರೆ, ಆಗಸ್ಟ್ ಮತ್ತು ಸೆಪ್ಟೆಂಬರ್‌ನಲ್ಲಿ ಮಳೆ ಪ್ರಮಾಣ ಗಣನೀಯವಾಗಿ ಇಳಿಮುಖವಾಗಲಿದೆ



ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ ) ಈಗಾಗಲೇ ಭವಿಷ್ಯ ನುಡಿದಿದೆ.

**ದಕ್ಷಿಣ ಕರ್ನಾಟಕದಲ್ಲಿ ಮಳೆ ಬಿರುಸು:** ಅರಬ್ಬಿ ಸಮುದ್ರದಲ್ಲಿ ಉಂಟಾಗಿರುವ ಮೇಲ್ಮೈ ಸುಳಿಗಾಳಿ ಪರಿಣಾಮ ದಕ್ಷಿಣ ಕನ್ನಡದ ಬಹುತೇಕ ಜಿಲ್ಲೆಗಳಲ್ಲಿ ಬಿರುಸಾಗಿ ವರ್ಷಧಾರೆಯಾಗಲಿದೆ. ಬೆಂಗಳೂರು ನಗರ, ಬೆಂ.ಗ್ರಾಮಾಂತರ, ಬೆಂ. ದಕ್ಷಿಣ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ತುಮಕೂರು ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಬಳ್ಳಾರಿ ಮತ್ತು ವಿಜಯನಗರದಲ್ಲಿ ಮೇ 30ರಿಂದ ಜೂ 1ವರೆಗೆ ರಭಸದಿಂದ ಮಳೆ ಸುರಿಯಲಿದೆ.ಕೆಲ ಜಿಲ್ಲೆಗಳಲ್ಲಿ ಮೇ 30ರಂದು ಬಿರುಗಾಳಿ ಸಹಿತ ಜೋರು ಮಳೆಯಾಗುವ ಹಿನ್ನೆಲೆಯಲ್ಲಿ ಇಲಾಖೆ, ಯೆಲ್ಲೋ ಅಲರ್ಟ್ ಕೊಟ್ಟಿದೆ. ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡದಲ್ಲಿ ಮುಂದಿನ 5 ದಿನ ಸಾಧಾರಣ ಮಳೆಯಾಗಲಿದೆ. ಉತ್ತರ ಕರ್ನಾಟಕದಲ್ಲಿ ಒಣಹವೆ ಮುಂದುವರಿಯಲಿದೆ.

## ಡಾ.,ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

# ನಿಷ್ಠಾವಂತ ಪ್ರಾಧ್ಯಾಪಕ ವಿ.ಆರ್. ದೇವರಾಜ್ ಅವರಿಗೆ ಆತ್ಮೀಯ ಬೀಳ್ಕೊಡುಗೆ



**ಬೆಂಗಳೂರು, ಮೇ.29–** ಪ್ರತಿಷ್ಠಿತ ಸೆಂಟ್ರಲ್ ಕಾಲೇಜಿನಲ್ಲಿ ಮೂರು ದಶಕಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ಇದೀಗ ನಿವೃತ್ತರಾದ ಜೀವ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ವಿಜ್ಞಾನ ನಿಕಾಯದ ಹಿಂದಿನ ಡೀನರಾದ ಪ್ರೊ. ವಿ.ಆರ್. ದೇವರಾಜ್ ಅವರನ್ನು ಸಹೋದ್ಯೋಗಿಗಳು ಮತ್ತು ಶಿಷ್ಯವೃಂದ ಆತ್ಮೀಯವಾಗಿ ಅಭಿನಂದಿಸಿ ಬೀಳ್ಕೊಟ್ಟರು.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗದ ವತಿಯಿಂದ ಏರ್ಪಡಿಸಲಾಗಿದ್ದ ವಿದಾಯ ಸಮಾರಂಭದಲ್ಲಿ ಕುಲಪತಿಗಳಾದ ಪ್ರೊ. ರಮೇಶ್.ಬಿ., ವಿಶ್ರಾಂತ ಕುಲಪತಿಗಳಾದ ಪ್ರೊ.ಲಿಂಗರಾಜ ಗಾಂಧಿ ಸೇರಿದಂತೆ ಅನೇಕ ಪ್ರಮುಖರು ಪ್ರೊ. ವಿ.ಆರ್. ದೇವರಾಜ್ ಅವರ ಅಮೂಲ್ಯ ಕೊಡುಗೆಯನ್ನು ಸ್ಮರಿಸಿದರು.

ಕುಲಪತಿಗಳಾದ ಪ್ರೊ. ರಮೇಶ್. ಬಿ. ಮಾತನಾಡಿ ಬೋಧನೆ ಮತ್ತು ಸಂಶೋಧನೆ ಎರಡೂ ಕ್ಷೇತ್ರಗಳಲ್ಲಿ ಮಹತ್ವಪೂರ್ಣ ಸೇವೆಯ ಮೂಲಕ ಅಪಾರ ಸಂಖ್ಯೆಯ ವಿದ್ಯಾರ್ಥಿಗಳಿಗೆ ಅತ್ಯಮೂಲ್ಯ ಮಾರ್ಗದರ್ಶನ ನೀಡಿದ ಪ್ರೊ. ವಿ..ಆರ್. ದೇವರಾಜ್ ಹೊಸ ಪೀಳಿಗೆಯ ಅಧ್ಯಾಪಕರಿಗೆ ಅತ್ಯುತ್ತಮ ಮಾದರಿಯಾಗಿದ್ದಾರೆಂದು ಬಣ್ಣಿಸಿದರು.

ಹಳೆಯ ತಲೆಮಾರಿನ ಬಹುತೇಕ ಅನುಭವಿ ಪ್ರಾಧ್ಯಾಪಕರು ಸರದಿಯಂತೆ ನಿವೃತ್ತರಾಗುತ್ತಿರುವ ಹಿನ್ನೆಲೆಯಲ್ಲಿ ಖಾಯಂ ಬೋಧಕರ ನೇಮಕಾತಿ ಪ್ರಕ್ರಿಯೆಗೆ ಸರ್ಕಾರದ ನೆರವಿನಿಂದ ಆದಷ್ಟು ಬೇಗ ಚಾಲನೆ ನೀಡಲಾಗುವುದೆಂದು ಅವರು ಇದೇ ಸಂದರ್ಭದಲ್ಲಿ ಸಕಾರಾತ್ಮಕ ಭರವಸೆಯಿತ್ತರು. ಪ್ರೊ.ಲಿಂಗರಾಜ ಗಾಂಧಿಯವರು ಮಾತನಾಡಿ ದೇಶದಲ್ಲೇ ಮೂಲ ವಿಜ್ಞಾನ ವಿಷಯಗಳ ಅಧ್ಯಯನದ ಪ್ರಮುಖ ಕೇಂದ್ರವಾದ ಸೆಂಟ್ರಲ್ ಕಾಲೇಜಿನ ಮಹೋನ್ನತ ಪರಂಪರೆಯನ್ನು ಮುಂದುವರಿಸುವ ಮೂಲಕ ಉನ್ನತ ಶಿಕ್ಷಣದ ಗುಣಮಟ್ಟ ಸುಧಾರಣೆಗೆ ಪ್ರೊ. ವಿ.ಆರ್. ದೇವರಾಜ್ ಪ್ರಾಮಾಣಿಕವಾಗಿ ಶ್ರಮಿಸಿದ್ದಾರೆಂದು ಶ್ಲಾಘಿಸಿದರು.

ಕಲ್ಬುರ್ಗಿ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಡಾ.ವಿ.ಎಚ್.ಮೂಲಿಮನಿ, ಸೆಂಟ್ರಲ್ ಕಾಲೇಜಿನಲ್ಲಿಯೇ ಸೇವೆ ಸಲ್ಲಿಸಿದ್ದ ಪ್ರೊ. ಎನ್. ರಾಮಚಂದ್ರಸ್ವಾಮಿ ಹಾಗೂ ಪ್ರೊ.ಬಿ.ಎಂ.ಸ್ವಾಮಿ ಪ್ರೊ.ದೇವರಾಜ್ ರವರ ಕರ್ತವ್ಯನಿಷ್ಠೆ, ಶಿಸ್ತು ಮತ್ತು ವಿದ್ಯಾರ್ಥಿ ಕೇಂದ್ರಿತ ಸೇವಾ ಮನೋಭಾವದ ಬಗ್ಗೆ ವಿಶೇಷ ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರೊ. ವಿ.ಆರ್. ದೇವರಾಜ್ ದಂಪತಿಗಳನ್ನು ಗೌರವಿಸಿ ಶುಭ ಹಾರೈಸಲಾಯಿತು. ಕುಲಸಚಿವರಾದ ಎ. ನವೀನ್ ಜೋಸೆಫ್, ಎಂ.ವಿ.ವಿಜಯಲಕ್ಷ್ಮಿ, ನಿವೃತ್ತ ಪ್ರಭಾರ ಕುಲಪತಿ ಪ್ರೊ. ಎನ್.ನರಸಿಂಹಮೂರ್ತಿ, ಪ್ರೊ. ಎಚ್. ಹರಿಪ್ರಸಾದ್,ಪ್ರೊ. ಪಿ.ಆರ್. ಚೇತನ, ಉಪಸ್ಥಿತರಿದ್ದರು.


ಚಿಕ್ಕಮಗಳೂರು ಬಳಿ ಶುಕ್ರವಾರ ಸೇವಂತಿ 2ಹೂವುಗಳನ್ನು ಕೀಳುತ್ತಿರುವ ಕಾರ್ಮಿಕರು.

# ಶಿಕ್ಷಕರ ನೇಮಕಕ್ಕೆ ಆಗ್ರಹಿಸಿ ಹೋರಾಟ

**ರಾಯಚೂರು, ಮೇ. 29:** ಪ್ರಾಥಮಿಕ, ಪದವೀಧರ, ಪ್ರೌಢಶಾಲಾ ಶಿಕ್ಷಕರು ಸೇರಿದಂತೆ ದೈಹಿಕ ಶಿಕ್ಷಣ, ಚಿತ್ರಕಲಾ, ಸಂಗೀತ ಹಾಗೂ ರಂಗಕಲಾ ಶಿಕ್ಷಕರ ನೇಮಕಾತಿಗೆ ತಕ್ಷಣ ಅಧಿಸೂಚನೆ ಹೊರಡಿಸಬೇಕು ಎಂದು ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಪದಾಧಿಕಾರಿಗಳು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಧರಣಿ ನಡೆಸಿದರು.

ಎಐಡಿವೈಒ ರಾಜ್ಯ ಘಟಕದ ಅಧ್ಯಕ್ಷ ಶರಣಪ್ಪ ಉದ್ಬಾಳ್ ಮಾತನಾಡಿ, 'ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ, ಒಂದು ಲಕ್ಷ ಹುದ್ದೆ ಭರ್ತಿ ಮಾಡುವುದಾಗಿ ಪ್ರಣಾಳಿಕೆಯಲ್ಲಿ ಭರವಸೆ ನೀಡಲಾಗಿತ್ತು. ಅಧಿಕಾರಕ್ಕೆ ಬಂದು ಮೂರು ವರ್ಷಗಳಾದರೂ ಒಂದೇ ಒಂದು ಹುದ್ದೆ ಭರ್ತಿ ಮಾಡಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಿಕ್ಷಣ ಸಚಿವರು ಮೂರು ವರ್ಷಗಳಿಂದಲೂ 10 ಸಾವಿರ, 15 ಸಾವಿರ, 20 ಸಾವಿರ ಶಿಕ್ಷಕರ ನೇಮಕಾತಿ ಮಾಡುವುದಾಗಿ ಹೇಳಿಕೆ ನೀಡುತ್ತಲೇ ಇದ್ದಾರೆ. ಅತಿ ಶೀಘ್ರ ಎಂಬ ಪದಕ್ಕೆ ಅರ್ಥವೇ ಇಲ್ಲದಂತಾಗಿದೆ. ಮೂರು ತಿಂಗಳಲ್ಲಿ ನೇಮಕಾತಿ ಪ್ರಕ್ರಿಯೆ ಮುಗಿಸಿ ಜೂನ್ ಒಂದಕ್ಕೆ ಹೊಸ ಶಿಕ್ಷಕರು ಬಂದೇ ಬರುತ್ತಾರೆ ಎಂದಿದ್ದರು.


ರಾಯಚೂರು ಡಾ.ಅಂಬೇಡ್ಕರ್ ವೃತ್ತದಲ್ಲಿ ಪ್ರಾಥಮಿಕ, ಪದವೀಧರ, ಪ್ರೌಢಶಾಲಾ ಶಿಕ್ಷಕರ ಹುದ್ದೆಗಳೂ ಸೇರಿದಂತೆ ದೈಹಿಕ ಶಿಕ್ಷಣ, ಚಿತ್ರಕಲೆ, ಸಂಗೀತ ಹಾಗೂ ರಂಗಕಲಾ ಶಿಕ್ಷಕರ ನೇಮಕಾತಿ ಮಾಡುವಂತೆ ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಪ್ರತಿಭಟನೆ ನಡೆಸಿತು.

ಜೂನ್ ಒಂದಕ್ಕೆ ಕೇವಲ ಒಂದು ವಾರ ಮಾತ್ರ ಉಳಿದಿದ್ದು, ಇನ್ನೂ ಕೂಡ ನೇಮಕಾತಿ ಅಧಿಸೂಚನೆಯನ್ನೇ ಹೊರಡಿಸಿಲ್ಲ ಎಂದು ದೂರಿದರು.

ಇತ್ತೀಚೆಗೆ ಮುಖ್ಯಮಂತ್ರಿ ಅವರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ, 15,000 ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಗೆ ಪ್ರಸ್ತಾವ ಸಲ್ಲಿಸಲು ಸೂಚಿಸಿದ್ದಾರೆ. ಶಿಕ್ಷಣ ಸಚಿವರು ಬರಿ ಸುಳ್ಳುಗಳನ್ನೇ ಹೇಳಿಕೊಂಡು ಬಂದಿದ್ದಾರೆ ಎಂದು ಟೀಕಿಸಿದರು.

ಹೋರಾಟ ಸಮಿತಿಯ ರಾಜ್ಯ ಸಹ ಸಂಚಾಲಕ ಚನ್ನಬಸವ ಜಾನೇಕಲ್ ಮಾತನಾಡಿ, 'ಕಲ್ಯಾಣ ಕರ್ನಾಟಕ ಭಾಗ ಇಡೀ ರಾಜ್ಯದಲ್ಲಿಯೇ ಶಿಕ್ಷಕರ ಗಂಭೀರ ಕೊರತೆ ಎದುರಿಸುತ್ತಿದೆ.

ಕಲ್ಯಾಣ ಕರ್ನಾಟಕದ ಶಾಲೆಗಳಲ್ಲಿ ಒಟ್ಟು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಸೇರಿದಂತೆ 22,595 ಹುದ್ದೆಗಳು ಖಾಲಿ ಬಿದ್ದಿವೆ. ಅದರಲ್ಲಿ 18,317 ಪ್ರಾಥಮಿಕ ಶಾಲಾ ಶಿಕ್ಷಕರು, 4278 ಪ್ರೌಢಶಾಲಾ ಶಿಕ್ಷಕರ ಮಂಜೂರಾತಿ ಹುದ್ದೆಗಳು ಖಾಲಿ ಬಿಡಲಾಗಿದೆ. ಈ ವಿಷಯದಲ್ಲಿ ರಾಯಚೂರು ಜಿಲ್ಲೆ ಅತ್ಯಂತ ಗರಿಷ್ಠ ಪ್ರಮಾಣದ ಶಿಕ್ಷಕರ ಕೊರತೆಯನ್ನು ಎದುರಿಸುತ್ತಿದೆ ಎಂದು ತಿಳಿಸಿದರು.

ಹುದ್ದೆಗಳ ಭರ್ತಿಗೆ ಕ್ರಮ ಕೈಗೊಂಡು ಮಕ್ಕಳ ಸಮಗ್ರ ಬೆಳವಣಿಗೆಗೆ ದಾರಿ ಮಾಡಿಕೊಡಬೇಕು' ಎಂದು ಒತ್ತಾಯಿಸಿದರು. ಮುಖ್ಯಮಂತ್ರಿ ಅವರಿಗೆ ಬರೆದ ಮನವಿ ಪತ್ರವನ್ನು ಗ್ರೇಡ್–2 ತಹಶೀಲ್ದಾರ್ ಪರಶುರಾಮ ಅವರಿಗೆ ಸಲ್ಲಿಸಲಾಯಿತು.

## ಹಳಬರು ಹೊಸಬರಿಗೆ ದಾರಿ ಮಾಡಿಕೊಡಲಿ ಸಚಿವ ಆಕಾಂಕ್ಷಿ ತನ್ವೀರ್‌ಸೇಠ್ ನೇರ ಒತ್ತಾಯ



**ಮೈಸೂರು, ಮೇ 29:** ರಾಜ್ಯದಲ್ಲಿ ಸಿದ್ದರಾಮಯ್ಯ ಅವರ ರಾಜೀನಾಮೆ ಪ್ರಕ್ರಿಯೆ ಮುಗಿದು ನೂತನ ಸರ್ಕಾರ ರಚನೆಯ ಕಸರತ್ತುಗಳು ತಾರಕಕ್ಕೇರಿ ರುವ ಬೆನ್ನಲ್ಲೇ, ಸಚಿವ ಸಂಪುಟ ಸೇರಲು ಶಾಸಕರು ಬಹಿರಂಗವಾಗಿಯೇ ಹಕ್ಕು ಮಂಡಿ ಸಲು ಶುರು ಮಾಡಿದ್ದಾರೆ.

ಇದೀಗ ಮಾಜಿ ಸಚಿವ ಹಾಗೂ ಮೈಸೂರಿನ ನರಸಿಂಹರಾಜ ಕ್ಷೇತ್ರದ ಹಿರಿಯ ಶಾಸಕ ತನ್ವೀರ್ ಸೇಠ್ ಅವರು ಹೊಸ ಸಂಪುಟದಲ್ಲಿ ಸಚಿವ ಸ್ಥಾನ ಸಿಗುವ ವಿಶ್ವಾಸ ವ್ಯಕ್ತಪಡಿಸಿದ್ದು, ಹಳೆಯ ಸಚಿವರು ಈಗ ಅಧಿಕಾರ ತ್ಯಾಗ ಮಾಡಿ ಹೊಸಬರಿಗೆ ದಾರಿ ಮಾಡಿಕೊಡಲಿ ಎಂದು ನೇರವಾಗಿಯೇ ಒತ್ತಾಯಿಸಿದ್ದಾರೆ.

ಮಾಧ್ಯಮಗಳೊಂದಿಗೆ ಸಿದ್ದರಾಮಯ್ಯ ಅವರ ರಾಜೀನಾಮೆಯ ಕುರಿತು ಕೇಳಲಾದ ಪ್ರಶ್ನೆಗೆ ಅತ್ಯಂತ ಮಾರ್ಮಿಕವಾಗಿ ಉತ್ತರಿಸಿದರು. ಸಿದ್ದರಾಮಯ್ಯ ಅವರು ಅಧಿಕಾರ ಬಿಟ್ಟುಕೊಟ್ಟರು ಅಂತಾ ಈಗ ನಾನು ಕೊರಗಿ ಕೂರಬೇಕಿತ್ತಾ ಎಂದು ಮರುಪ್ರಶ್ನಿಸಿದ ಅವರು, ರಾಜಕೀಯ ದಲ್ಲಿ ಬದಲಾವಣೆಗಳು ಸಹಜ ಎಂಬಂತೆ ಮಾತನಾಡಿದರು. ತಾವೊಬ್ಬ ಸಿದ್ದರಾಮಯ್ಯ ವಿರೋಧಿ ಎಂಬಂತೆ ಬಿಂಬಿತವಾಗುತ್ತಿರುವುದನ್ನು ನಿರಾಕರಿಸಿದ ಸೇಠ್, ನಾನು ಯಾವತ್ತೂ ಸಿದ್ದರಾಮಯ್ಯ ಅವರ ವಿರೋಧಿ ಬಣದಲ್ಲಿ ಇರಲಿಲ್ಲ. ನನಗೆ ಯಾರ ಮೇಲೂ ಯಾವುದೇ ವೈಯಕ್ತಿಕ ವಿರೋಧ ಇರಲಿಲ್ಲ. ಕಳೆದ ಬಾರಿ ಏನೇನೋ ಕಾರಣಕ್ಕೆ ನನಗೆ ಮಂತ್ರಿ ಸ್ಥಾನ ತಪ್ಪಿತು ಅಷ್ಟೆ ಎಂದು ಸ್ಪಷ್ಟನೆ ನೀಡಿದರು.

ಡಿ.ಕೆ. ಶಿವಕುಮಾರ್ ನೇತೃತ್ವದ ಸಂಪುಟದಲ್ಲಿ ತಮಗೆ ಸ್ಥಾನ ಸಿಗುವ ಬಗ್ಗೆ ಮಾತನಾಡಿದ ಅವರು, ಕಳೆದ ಬಾರಿಯೇ ನನಗೆ ಸಚಿವ ಸ್ಥಾನ ಸಿಗಬೇಕಿತ್ತು. ಆದರೆ ಕೆಲವು ಕಾರಣಾಂತರಗಳಿಂದ ಅದು ಸಾಧ್ಯವಾಗಲಿಲ್ಲ. ಈಗ ಮತ್ತೆ ಸಚಿವನಾಗುವ ಸುಸಂದರ್ಭ ಬಂದಿದೆ. ಕಾಂಗ್ರೆಸ್ ವರಿಷ್ಠರು ಈ ಬಾರಿ ನನ್ನ ಹಿರಿತನವನ್ನು ಖಂಡಿತವಾಗಿಯೂ ಪರಿಗಣಿಸುತ್ತಾರೆ ಎಂಬ ಬಲವಾದ ವಿಶ್ವಾಸ ನನಗಿದೆ ಎಂದರು.

ಇದೇ ವೇಳೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿದ್ದ ಸಚಿವರಿಗೆ ಪರೋಕ್ಷವಾಗಿ ಟಾಂಗ್ ನೀಡಿದ ತನ್ವೀರ್ ಸೇಠ್, ಇಷ್ಟು ದಿನ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿದ್ದವರು ಈಗಲಾದರೂ ಅಧಿಕಾರ ತ್ಯಾಗ ಮಾಡುವ ದೊಡ್ಡ ಮನಸ್ಸು ಮಾಡಲಿ. ಅವರೆಲ್ಲಾ ತಾವಾಗಿಯೇ ಹಿಂದೆ ಸರಿದು, ನಮ್ಮಂತಹ ಹಿರಿಯರಿಗೆ ಹಾಗೂ ಹೊಸಬರಿಗೆ ಅಧಿಕಾರ ಸಿಗುವಂತೆ ಮಾಡಲಿ ಎಂದು ಆಗ್ರಹಿಸಿದರು.

## ಎಂ.ಎಸ್.ಪಿ.ಎಲ್ ಸಂಸ್ಥೆಯಿಂದ ಉಚಿತ ಲಂಬಾಣಿ ಕಸೂತಿ ತರಬೇತಿ ಕೇಂದ್ರ ಉದ್ಘಾಟನೆ



**ಬಳ್ಳಾರಿ, ಮೇ 29.** ನಗರದ ಬಿ.ಟಿ.ಆರ್ ನಗರದಲ್ಲಿ 3 ತಿಂಗಳ ಲಂಬಾಣಿ ಕಸೂತಿ ತರಬೇತಿ ಕಾರ್ಯಾಗಾರದ ಉದ್ಘಾಟನೆ ಹಾಗೂ 6 ತಿಂಗಳ ಟೈಲರಿಂಗ್ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಬೀಳ್ಕೊಡುಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ತಾರಳ್ಳಿ ಜಂಬುನಾಥ, ಸಮಾಜ ಸೇವಾ ವಿಭಾಗದ ಉಪಾಧ್ಯಕ್ಷರಾದ ಎಚ್.ಕೆ. ರಮೇಶ್, ಜನರಲ್ ಮ್ಯಾನೇಜರ್ ಅಶ್ವಿನ್ ಕುಮಾರ್, ಬಿ.ಎಂ. ನಾಗರಾಜ್ ಹಾಗೂ ಸ್ಥಳೀಯ ಮುಖಂಡರು ಮತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು.

ಸಮಾಜಸೇವಾ ವಿಭಾಗದ ಉಪಾಧ್ಯಕ್ಷ ಎಚ್.ಕೆ. ರಮೇಶ್ ಅವರು, ಎಂ.ಎಸ್.ಪಿ.ಎಲ್ ಸಂಸ್ಥೆ ಈಗಾಗಲೇ ಹೊಸಪೇಟೆ ನಗರದಲ್ಲಿ ಟೈಲರಿಂಗ್, ಕಂಪ್ಯೂಟರ್, ಸ್ಪೋಕನ್ ಇಂಗ್ಲಿಷ್, ಸೌಂದರ್ಯ ವರ್ಧಕ ಹಾಗೂ ಎಂಬ್ರಾಯ್ಡರಿ ತರಬೇತಿಗಳನ್ನು ನೂರಾರು ಮಹಿಳೆಯರಿಗೆ ನೀಡಿದ್ದು, ಅವರಲ್ಲಿ ಅನೇಕರು ಆರ್ಥಿಕವಾಗಿ ಸ್ವಾವಲಂಬಿ ಜೀವನ ನಡೆಸುತ್ತಿರುವುದು ಸಂತಸದ ವಿಷಯವಾಗಿದೆ ಎಂದರು.

ಈಗ ಆರಂಭವಾಗಿರುವ ಲಂಬಾಣಿ ಕಸೂತಿ ತರಬೇತಿಗೆ ದೇಶದಾದ್ಯಂತ ಹೆಚ್ಚಿನ ಬೇಡಿಕೆಯಿದ್ದು, ಮಹಿಳೆಯರು ಈ ತರಬೇತಿಯ ಸದುಪಯೋಗ ಪಡೆದು ಸ್ವಾವಲಂಬಿ ಗಳಾಗಿ ತಮ್ಮ ಕುಟುಂಬಗಳಿಗೆ ಆಸರೆಯಾಗಬೇಕು ಎಂದು ತಿಳಿಸಿದರು.

ನಗರಸಭಾ ಸದಸ್ಯರಾದ ತಾರಳ್ಳಿ ಜಂಬುನಾಥ ಮಾತನಾಡಿ, ಬಡವರು ಹೆಚ್ಚಾಗಿ ವಾಸಿಸುತ್ತಿರುವ ಈ ವಾರ್ಡಿನಲ್ಲಿ ಎಂ.ಎಸ್.ಪಿ.ಎಲ್ ಸಂಸ್ಥೆ ಆರು ತಿಂಗಳ ಟೈಲರಿಂಗ್ ತರಬೇತಿ ನೀಡಿರುವುದು ಶ್ಲಾಘನೀಯ ಕಾರ್ಯವಾಗಿದೆ. ಎಲ್ಲಾ ಶಿಬಿರಾರ್ಥಿಗಳು ಉತ್ತಮ ತರಬೇತಿ ಪಡೆದಿರುವುದು ಅತ್ಯಂತ ಸಂತೋಷದ ವಿಷಯವಾಗಿದ್ದು, ಇದೀಗ ಮೂರು ತಿಂಗಳ ಲಂಬಾಣಿ ಕಸೂತಿ ತರಬೇತಿ ಕೇಂದ್ರವನ್ನು ಆರಂಭಿಸಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದು ಹೇಳಿದರು.

ತರಬೇತಿಗೆ ಹೆಸರು ನೋಂದಾಯಿಸಿಕೊಂಡಿದ್ದ 35 ಮಹಿಳೆಯರು ಭಾಗವಹಿಸಿದ್ದರು. ಹಾಗೆಯೇ ಟೈಲರಿಂಗ್ ತರಬೇತಿ ಪೂರ್ಣಗೊಳಿಸಿದ 37 ಮಹಿಳೆಯರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ನೇತ್ರಾವತಿ ಕಾರ್ಯಕ್ರಮವನ್ನು ನಿರೂಪಿಸಿದರು. ಗಂಗಮ್ಮ ಸ್ವಾಗತ ಭಾಷಣ ಮಾಡಿದರು ಹಾಗೂ ಅಂಜಲಿ ಪ್ರಾರ್ಥನೆ ಸಲ್ಲಿಸಿದರು. ತರಬೇತಿ ಪಡೆದ ರೇಣುಕಾ, ಅನು ಹಾಗೂ ಶಿವಮ್ಮ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರೆ,

## ಡಿ.ಕೆ.ಶಿವಕುಮಾರ್ ಭೇಟಿ: ಅಭಿನಂದನೆ ಸಲ್ಲಿಸಿದ ಶಾಸಕ ಬಿ.ನಾಗೇಂದ್ರ

**ಬಳ್ಳಾರಿ, ಮೇ 29.** ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ. ನಾಗೇಂದ್ರ ರಾಜ್ಯ ಸರ್ಕಾರದ ನೂತನ ಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ರವರನ್ನು ಕಾಂಗ್ರೆಸ್ ಹೈಕಮಾಂಡ್ ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.



### ಹೆಚ್ಚಿನ ಇಳುವರಿ ಮತ್ತು ದೀರ್ಘಾವಧಿ ಲಾಭಕ್ಕಾಗಿ

## 'ಅಂಗಾಂಶ ಕೃಷಿ ಬಾಳೆ ಬೇಸಾಯಕ್ಕೆ ರೈತರು ಮುಂದಾಗಲು ತೋಟಗಾರಿಕೆ ಇಲಾಖೆ ಕರೆ

**ಬೆಂಗಳೂರು,ಮೇ.29**–ಬಾಳೆ ಹಣ್ಣು ದೇಶದ ಅತ್ಯಂತ ಪ್ರಮುಖ ವಾಣಿಜ್ಯ ಬೆಳೆಯಾಗಿದ್ದು, ಕರ್ನಾಟಕ ರಾಜ್ಯದಲ್ಲಿ ಇದರ ಉತ್ಪಾದಕತೆಯನ್ನು ಹೆಚ್ಚಿಸಲು ಸಾಂಪ್ರದಾಯಿಕ ಬಾಳೆ ಕಂದುಗಳ ಬದಲಿಗೆ ವೈಜ್ಞಾನಿಕ ತಂತ್ರಜ್ಞಾನದ ಅಂಗಾಂಶ ಕೃಷಿ (Tissue Culture) ಬಾಳೆ ಸಸಿಗಳನ್ನು ಬಳಸುವಂತೆ ತೋಟಗಾರಿಕೆ ಇಲಾಖೆ ರೈತರಲ್ಲಿ ವಿನಂತಿಸಿದೆ. ರೈತರಲ್ಲಿ ಸಮರ್ಪಕ ಮಾಹಿತಿಯ ಕೊರತೆಯಿಂದಾಗಿ ಇಂದಿಗೂ ಹಳೆಯ ಹಾಗೂ ಸಾಂಪ್ರದಾಯಿಕ ಬಾಳೆ ಕಂದು ಗಳನ್ನು ನಾಟಿ ಮಾಡುತ್ತಿರುವುದೇ ಇದಕ್ಕೆ ಪ್ರಮುಖ ಕಾರಣವಾಗಿದೆ.

## ಪೋಕ್ಸೋ ಪ್ರಕರಣ: ವಚನಾನಂದಶ್ರೀ ಜಾಮೀನು ಅರ್ಜಿ ವಿಚಾರಣೆ ಜೂ.3ಕ್ಕೆ ಮುಂದೂಡಿಕೆ



**ದಾವಣಗೆರೆ, ಮೇ 29:** ಹರಿಹರದ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾನೂನು ಪ್ರಕ್ರಿಯೆಗಳು ತೀವ್ರಗೊಂಡಿವೆ. ಸ್ವಾಮೀಜಿಗೆ ನೀಡಲಾಗಿರುವ ನಿರೀಕ್ಷಣಾ ಜಾಮೀನನ್ನು ರದ್ದುಗೊಳಿಸುವಂತೆ ಕೋರಿ ಹರಿಹರ ಗ್ರಾಮಾಂತರ ಠಾಣೆಯ ಪೊಲೀಸರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಾಲಯವು ಜೂನ್ 3ಕ್ಕೆ ಮುಂದೂಡಿದೆ.

ದಾವಣಗೆರೆ ಜಿಲ್ಲೆಯ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಈ ಅತ್ಯಂತ ಸೂಕ್ಷ್ಮ ಪ್ರಕರಣದಲ್ಲಿ, ಸ್ವಾಮೀಜಿಗೆ ಈ ಹಿಂದೆ ನಿರೀಕ್ಷಣಾ ಜಾಮೀನು ಮಂಜೂರಾಗಿತ್ತು. ಆದರೆ, ತನಿಖೆಯ ಹಿತದೃಷ್ಟಿಯಿಂದ ಹಾಗೂ ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಈ ಜಾಮೀನನ್ನು ರದ್ದುಪಡಿಸಬೇಕು ಎಂದು ಪೊಲೀಸರು ನ್ಯಾಯಾಲಯದ ಮೊರೆಹೋಗಿದ್ದರು. ಈ ಅರ್ಜಿಯ ಸುದೀರ್ಘ ವಿಚಾರಣೆಯು ಇಂದು ನಡೆಯಬೇಕಿತ್ತಾದರೂ, ಕೆಲವು ಕಾರಣಗಳಿಂದಾಗಿ ನ್ಯಾಯಾಲಯವು ವಿಚಾರಣೆಯ ದಿನಾಂಕವನ್ನು ಮುಂದೂಡಿದೆ.

ಪೊಲೀಸರ ಈ ನಡೆಗೆ ಪ್ರತಿಯಾಗಿ ವಚನಾನಂದ ಸ್ವಾಮೀಜಿ ಅವರ ಪರ ವಕೀಲರಾದ ಎಸ್.ವಿ. ಪಾಟೀಲ್ ಅವರು ನ್ಯಾಯಾಲಯಕ್ಕೆ ತಕರಾರು ಅರ್ಜಿಯೊಂದನ್ನು ಸಲ್ಲಿಸಿದ್ದಾರೆ. ಪೊಲೀಸರ ಮನವಿಗೆ ಕಾನೂನು ಬದ್ಧವಾಗಿಯೇ ಆಕ್ಷೇಪಣೆ ಎತ್ತಿರುವ ಅವರು, ತಮ್ಮ ಕಕ್ಷಿದಾರರ ಪರವಾಗಿ ಪ್ರಬಲ ವಾದ ಮಂಡಿಸಲು ಸಿದ್ಧತೆ ನಡೆಸಿದ್ದಾರೆ.

ಜೂನ್ 3 ರಂದು ನಡೆಯಲಿರುವ ಮುಂದಿನ ವಿಚಾರಣೆಯ ಸಂದರ್ಭದಲ್ಲಿ ಈ ತಕರಾರು ಅರ್ಜಿಯ ಅಂಶಗಳು ಪ್ರಮುಖ ಪಾತ್ರ ವಹಿಸಲಿವೆ.ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಸ್ವಾಮೀಜಿ ಪರ ವಕೀಲ ಎಸ್.ವಿ. ಪಾಟೀಲ್, "ಪೊಲೀಸರು ಸಲ್ಲಿಸಿದ್ದ ಜಾಮೀನು ರದ್ದತಿ ಅರ್ಜಿಯ ವಿಚಾರಣೆ ಇಂದು ನಿಗದಿಯಾಗಿತ್ತು. ಆದರೆ ನ್ಯಾಯಾಲಯವು ಅದನ್ನು ಜೂನ್ 3ಕ್ಕೆ ಮುಂದೂಡಿದೆ. ನಾವು ಈಗಾಗಲೇ ಸ್ವಾಮೀಜಿಯವರ ಪರವಾಗಿ ತಕರಾರು ಅರ್ಜಿಯನ್ನು ಸಲ್ಲಿಸಿದ್ದೇವೆ" ಎಂದು ಸ್ಪಷ್ಟಪಡಿಸಿದರು.

ಇದೇ ಸಂದರ್ಭದಲ್ಲಿ ಸ್ವಾಮೀಜಿಯವರ ಕೋರ್ಟ್ ಹಾಜರಾತಿ ಕುರಿತು ಮಾಹಿತಿ ನೀಡಿದ ಅವರು, ಸದ್ಯದ ಪರಿಸ್ಥಿತಿಯಲ್ಲಿ ವಿಚಾರಣೆಗಾಗಿ ವಚನಾನಂದ ಸ್ವಾಮೀಜಿಯವರು ಖುದ್ದಾಗಿ ನ್ಯಾಯಾಲಯಕ್ಕೆ ಹಾಜರಾಗುವ ಅಗತ್ಯವಿಲ್ಲ ಮತ್ತು ಅವರು ಬರುವುದಿಲ್ಲ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಕೋರ್ಟ್ ಈ ಪ್ರಕರಣದಲ್ಲಿ ಯಾವ ರೀತಿಯ ತೀರ್ಮಾನ ತೆಗೆದುಕೊಳ್ಳಲಿದೆ ಎಂಬುದು ತೀವ್ರ ಕುತೂಹಲ ಮೂಡಿಸಿದೆ.

### ಸಿಎಂ ಸ್ಥಾನದಿಂದ ಕೆಳಗಿಳಿಸಿ ಸಿದ್ದರಾಮಯ್ಯಗೆ ಅವಮಾನ

## ನಿತ್ಯ ಕಿರಿಕಿರಿ ನೀಡಿ ರಾಜೀನಾಮೆ ಕೊಡಿಸಿದರು: ಶ್ರೀರಾಮುಲು ಆರೋಪ

**ಬಳ್ಳಾರಿ, ಮೇ 29:** ಸದಾಕಾಲವೂ ಸಿದ್ದರಾಮಯ್ಯ ವಿರೋಧ ಮಾಡುತ್ತಿದ್ದ ಮಾಜಿ ಸಚಿವ ಶ್ರೀರಾಮುಲು, ಇದೀಗ ಸಿದ್ದರಾಮಯ್ಯ ರಾಜೀನಾಮೆ ಹಿನ್ನೆಲೆಯಲ್ಲಿ ಅನುಕಂಪ ಮತ್ತು ಬೆಂಬಲ ವ್ಯಕ್ತಪಡಿಸಿ ಮಾತನಾಡಿದ್ದಾರೆ.

ಸುದ್ದಿಗಾರರೊಂದಿಗೆ, ಮಾಜಿ ಸಚಿವ ಶ್ರೀರಾಮುಲು, ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಕ್ಕಿಳಿಸಿ ಅವಮಾನ ಮಾಡಲಾಗಿದೆ. ಎಂಟು ವರ್ಷ ಮುಖ್ಯಮಂತ್ರಿಯಾಗಿ ಕೆಲಸ ಮಾಡಿದ್ದಾರೆ. 2023ರಲ್ಲಿ ಸಿಎಂ ಆದ ದಿನದಿಂದ ಸಿದ್ದರಾಮಯ್ಯ ಅವರನ್ನು ಸುಮ್ಮನೆ ಇರಲು ಬಿಡಲಿಲ್ಲ. ಅವರಿಗೆ ನಿತ್ಯ ಕಿರಿಕಿರಿ ಮಾಡಿ ನೆಮ್ಮದಿಯಿಂದ ಇರಲು ಬಿಡಲಿಲ್ಲ ಕೊನೆಗೆ ನಿನ್ನೆ ಕ್ಲೈಮ್ಯಾಕ್ಸ್ ಹಂತದಲ್ಲಿ ರಾಜೀನಾಮೆ ಕೊಡಿಸಿದರು ಎಂದು ಆರೋಪಿಸಿದರು.

ಅವರ ಮುಖದಲ್ಲಿ ನೋವಿತ್ತು. ಅದನ್ನು ನೋಡಿ ನನಗೂ ನೋವಾಗಿದೆ. ಹಿಂದುಳಿದ ನಾಯಕನಿಗೆ ನೋವು ತರುವ ಕೆಲಸವನ್ನು ಕಾಂಗ್ರೆಸ್ ಹೈಕಮಾಂಡ್ ಮಾಡಿದೆ. ಗೌರವದಿಂದ ನಡೆಸಿಕೊಳ್ಳಬೇಕಿತ್ತು. ಒಳ್ಳೆಯ ರೀತಿಯಲ್ಲಿ ನಡೆಸಿಕೊಳ್ಳಲಿಲ್ಲ. ಮೂರು ವರ್ಷದಲ್ಲಿ ತೀವ್ರ ತೊಂದರೆ ಕೊಟ್ಟರು. ನೆಮ್ಮದಿಯಿಂದ ಕೂಡಲು ಬಿಡಲಿಲ್ಲ. ಒಂದು ಕಡೆ ಡಿಕೆ ಶಿವಕುಮಾರ್ ಕಾಲು ಎಳೆದರು. ಮತ್ತೊಂದು ಖರ್ಗೆ ಅವರು ಕಾಲು ಎಳೆದರು. ಸಿಎಂ ಕುರ್ಚಿಯನ್ನು ಎಳೆದಾಡಿ ಸಿದ್ದರಾಮಯ್ಯ ಅವರಿಂದ ಕಸಿದುಕೊಂಡರು. ಸಿಎಂ ಕುರ್ಚಿಗೆ ಬೆಲೆ ಇಲ್ಲದಂತೆ ಮಾಡಿದರು. ಡಿಕೆ ಶಿವಕುಮಾರ್ ಈ ಪ್ರಯತ್ನದಲ್ಲಿ ಯಶಸ್ವಿಯಾದರು. ಸಿದ್ದರಾಮಯ್ಯ ಅವರಿಗೆ ತುಂಬಾ ನೋವು ಕೊಟ್ಟಿದ್ದಾರೆ ಎಂದರು.

ರಾಜ್ಯದಲ್ಲಿ ದೊಡ್ಡ ಬೆಂಬಲಿಗರನ್ನು ಹೊಂದಿರುವ ಸಿದ್ದರಾಮಯ್ಯ ಸಿದ್ದರಾಮಯ್ಯ ರಾಜೀನಾಮೆ ಅಹಿಂದ ವರ್ಗಕ್ಕೆ ನೋವಾಗಿದೆ. ರಾಹುಲ್ ಗಾಂಧಿಯವರು ಪದೇ ಪದೇ ಒಬಿಸಿ ನಾಯಕರು ಎಂದು ಹೇಳುತ್ತಾರೆ. ಒಬಿಸಿ ನಾಯಕರನ್ನು ಬೆಂಬಲಿಸಬೇಕು ಎನ್ನುತ್ತಾರೆ. ಮೋದಿ ಕ್ಯಾಬಿನೆಟ್‌ನಲ್ಲಿ ಎಷ್ಟು ಜನರು ಒಬಿಸಿ ಇದ್ದೀರಾ ಎಂದು ಪ್ರಶ್ನೆ ಮಾಡುತ್ತಾರೆ. ಆದರೆ ಇದೀಗ ಹಿಂದುಳಿದ ನಾಯಕನಾದ ಸಿದ್ದರಾಮಯ್ಯರನ್ನು ಇಳಿಸಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿರುವ ಕರ್ನಾಟಕ ರಾಜ್ಯದ ಒಬಿಸಿ ನಾಯಕನನ್ನು ಕೆಳಗಿಸಿದ್ದಾರೆ. ಒಬಿಸಿ ಎಂದು ಬಾಯಿ ಬಡೆದುಕೊಂಡ ರಾಹುಲ್ ಗಾಂಧಿ ಏನು ಹೇಳುತ್ತಾರೆ. ಕಾಂಗ್ರೆಸ್ ಪಕ್ಷ ರಾಜ್ಯದಿಂದ ತೊಲಗಬೇಕು ಎಂದು ಜನರು ಬಯಸುತ್ತಿದ್ದಾರೆ. ಹಿಂದುಳಿದ ನಾಯಕನ್ನು ಕೆಳಗಿಳಿಸಿ ದೊಡ್ಡ ತಪ್ಪು ಮಾಡಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಿದ್ದರಾಮಯ್ಯ ಫೋಟೋ ಹಾಕಿಕೊಂಡು ಹಲವು ನಾಯಕರು ಗೆದ್ದಿದ್ದಾರೆ. ಸಿದ್ದರಾಮಯ್ಯ ಅವರಿಂದಲೇ ಕಾಂಗ್ರೆಸ್ ಈ ಹಂತಕ್ಕೆ ಬಂದಿರುವುದು, ಸಿದ್ದರಾಮಯ್ಯ ಹೆಸರು ಹೇಳಿಕೊಂಡು ಗೆದ್ದ ನಾಯಕರು ಈಗ ಡಿಕೆಶಿ ಮನೆ ಮುಂದೆ ನಿಂತಿದ್ದಾರೆ ಎಂದರು.

**ಯಡಿಯೂರಪ್ಪ ರಾಜೀನಾಮೆ ವಿಚಾರವೇ ಬೇರೆ:** ಯಡಿಯೂರಪ್ಪ ವಿಚಾರ ರಾಜೀನಾಮೆ ವಿಚಾರ ಬೇರೆ, ಇನ್ನೊಬ್ಬ ನಾಯಕನ ಸೃಷ್ಟಿಗಾಗಿ ಯಡಿಯೂರಪ್ಪ ರಾಜೀನಾಮೆ ನೀಡಿದ್ದರು. ಸಿದ್ದರಾಮಯ್ಯ ವಿಚಾರದಲ್ಲಿ ಕುರ್ಚಿ ಕಸಿದುಕೊಂಡರು. ಐದು ವರ್ಷಗಳ ಅಧಿಕಾರ ಕೊಟ್ಟಿದ್ದಾರೆ ಅವರೇ ಸಿಎಂ ಅಗಬೇಕಿತ್ತು. ಮುಂದೆ ಕಾಂಗ್ರೆಸ್ ಪಶ್ಚಾತ್ತಾಪ ಪಡುತ್ತದೆ. ರಾಜಕೀಯವಾಗಿ ಸಿದ್ದರಾಮಯ್ಯ ವಿರೋಧಿಸಿದ್ದೇನೆ. ವೈಯಕ್ತಿಕ ಸಂಬಂಧ ಬೇರೆ ರಾಜಕೀಯವೇ ಬೇರೆ ಎಂದರು.



ಬಳ್ಳಾರಿ ಜಿಲ್ಲೆಯ ಎಲ್ಲಾ ಶಾಸಕರು ಸಿದ್ದರಾಮಯ್ಯ ಫೋಟೋ ಇಟ್ಟು ಗೆದ್ದವರು ಈಗ ಡಿಕೆ ಶಿವಕುಮಾರ್ ಮುಂದೆ ಹೋಗಿ ನಿಲ್ಲುತ್ತಿದ್ದಾರೆ. ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಕನಿಷ್ಠ ನೋವು ನಮ್ಮ ಜಿಲ್ಲೆಯ ಶಾಸಕರ ಬಳಿ ಇಲ್ಲ. ನಗುತ್ತಾ ನಗುತ್ತಾ ಡಿಕೆಶಿಗೆ ಹೂಗುಚ್ಚ ಕೊಡುತ್ತಾರೆ. ಸಿದ್ದರಾಮಯ್ಯ ಸಿಎಂ ಆಗಬೇಕು ಎಂದು ಕುರುಬರು ಸೇರಿದಂತೆ ಎಲ್ಲ ಜನಾಂಗದವರು ಮತ ಹಾಕಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಚಾರದ ಬಗ್ಗೆ, , ವಿಜಯೇಂದ್ರ ಅವರೇ ಬಹುತೇಕ ಮುಂದುವರೆಯುತ್ತಾರೆ. 2028ರಲ್ಲಿ ನೂರಕ್ಕೂ ನೂರರಷ್ಟು ಬಿಜೆಪಿ ಗೆಲ್ಲಲಿದೆ. ಎಲ್ಲಾ ಸಮುದಾಯದ ಜನರು ಕಾಂಗ್ರೆಸ್‌ಗೆ ಪಾಠ ಕಲಿಸುತ್ತಾರೆ. ಹಿಂದುಳಿದ ವರ್ಗಗಳ ಜನರ ಸೆಳೆಯುವ ಪ್ರಯತ್ನ ಮಾಡುತ್ತೇನೆ ಎಂದರು.

## ಡಿಎಪಿ ರಸಗೊಬ್ಬರದ ಕೊರತೆ, ಕಾಳಸಂತೆಯಲ್ಲಿ ಮಾರಾಟ: ಬೆಲೆ ಏರಿಕೆ ತಡೆಗೆ ರೈತಸಂಘದ ಆಗ್ರಹ

**ಕಲಬುರಗಿ, ಮೇ. 29:** ಮುಂಗಾರು ಹಂಗಾಮಿನಲ್ಲಿ ಬಿತ್ತನೆಗೆ ಡಿಎಪಿ ರಸಗೊಬ್ಬರ ಕೊರತೆಯುಂಟಾಗಿದ್ದು, ಕಾಳಸಂತೆಯಲ್ಲಿ ಮಾರಾಟವನ್ನು ತಡೆದು ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಒತ್ತಾಯಿಸಿದರು.

ಡಿಎಪಿ ರಸಗೊಬ್ಬರ ಕೊರತೆಯಿಂದ ರೈತರು ಪರದಾಡುತ್ತಿದ್ದಾರೆ. ಕೂಡಲೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮರ್ಪಕ ರಸಗೊಬ್ಬರ ಪೂರೈಸಲು ಕ್ರಮ ಕೈಗೊಳ್ಳಬೇಕು. ಕಾಂಪ್ಲೆಕ್ಸ್ ರಸಗೊಬ್ಬರ 10,26,26 ರಸಗೊಬ್ಬರಕ್ಕೆ ಸಹಾಯಧನ ನೀಡಬೇಕು ಎಂದು ಒತ್ತಾಯಿಸಿದ ಅವರು, ಗೊಬ್ಬರದ ಅಭಾವ ಮಧ್ಯೆ ದುಬಾರಿ ಆದ ರಸಗೊಬ್ಬರ. ಬೆಲೆ ಏರಿಕೆ ರೈತರ ಮೇಲೆ ಕೇಂದ್ರ ಸರ್ಕಾರ ಬರೆ ಎಳೆದಿದೆ. ಕಾಂಪ್ಲೆಕ್ಸ್, ಪೋಟ್ಯಾಷ್ ಬೆಲೆ 1400 ರೂ.ಗಳಿಂದ 2200ರೂ.ಗಳಿಗೆ ಗೊಬ್ಬರದ ಬೆಲೆ ಏರಿಕೆ ರೈತ ಕಂಗಾಲಾಗುವಂತೆ ಮಾಡಿದೆ ಕಳಪೆ ಮಟ್ಟದ ರಸಗೊಬ್ಬರ ಬಿಜ ಕಾಳ ಸಂತೆಯಲ್ಲಿ ಮಾರಾಟ ಮಾಡುವುದು ಜಿಲ್ಲಾಡಳಿತ ತಡೆಗಟ್ಟಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಾಂಪ್ಲೆಕ್ಸ್ ಮತ್ತು ಪೊಟ್ಯಾಷ್ ರಸಗೊಬ್ಬರ ಮೇ ತಿಂಗಳ ಆರಂಭದಲ್ಲಿ 1400 ರೂ.ಗಳು (50 ಕೇಜಿ ಚಿಲಾ ಇದ್ದಿದ್ದು) 1700 ರೂ.ಗಳ ಬೆಲೆ ಏರಿಕೆ ಆಗಿದೆ. ಹೊಸ ದಾಸ್ತಾನು 2200ಕ್ಕೆ ಹೆಚ್ಚಳವಾಗಿದೆ ಅಲ್ಲದೇ ಮುಂದಿನ ದಿನಗಳಲ್ಲಿ ಇದು ಇನ್ನೂ ಹೆಚ್ಚಳವಾಗುವ ಸಾಧ್ಯತೆ ಇದೆ. ರಸಗೊಬ್ಬರ ಬೆಲೆ ಏರೀಕೆಯಲ್ಲಿ ಅಯ ರಸಗೊಬ್ಬರ ಕಂಪೆನಿಗಳು ವಿಭಿನ್ನವಾಗಿ ಏರೀಕೆ ಮಾಡುತ್ತಿದ್ದು ಮಧ್ಯ ಪ್ರಾಚ್ಯ ಯುದ್ಧವೆ ಇದೆಲ್ಲದಕ್ಕೂ ಕಾರಣ ಎಂದು ಎತ್ತಿ ತೋರಿಸಿ ರಸಗೊಬ್ಬರ ತಯ್ಯಾರಿಕಾ ಕಂಪೆನಿಗಳು ಹೇಳುತ್ತಿವೆ. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಬಚಾವ್ ಆಗುತ್ತಿವೆ ಎಂದು ಅವರು ಕಟುವಾಗಿ ಟೀಕಿಸಿದರು.



ಮ್ಯುರಿಯೇಟ್ ಆಫ್ ಪೊಟ್ಯಾಷ್ ಬೆಲೆ 2009–10ರಲ್ಲಿ ಪ್ರತಿ ಟನ್‌ಗೆ 4455ರೂ.ಗಳಿಂದ 2023 (ಆಗಸ್ಟ್)ರಲ್ಲಿ ಪ್ರತಿ ಟನ್‌ಗೆ 34,644ರೂ.ಗಳಿಗೆ ಏರಿತು ಮತ್ತು ಆಂಕ ಬೆಲೆ 2009–10ರಲ್ಲಿ 15085ರೂ.ಗಳಿಂದ 2023ರಲ್ಲಿ 27000ರೂ.ಗಳಿಗೆ ಹೆಚ್ಚಿತು. ಖನಿಜ ಸಂಪನ್ಮೂಲಗಳು ಮತ್ತು ರಸಗೊಬ್ಬರ ಉತ್ಪಾದನೆಯ ಮೇಲೆ ಕೆಲವು ಜಾಗತಿಕ ನಿಗಮಗಳ ಏಕಸ್ವಾಮ್ಯ ನಿಯಂತ್ರಣದಿಂದಾಗಿ ಬೆಲೆಗಳಲ್ಲಿನ ಏರಿಕೆ ಹೆಚ್ಚಾಗಿದೆ. ಈ ಜಾಗತಿಕ ಪೂರೈಕೆದಾರರ ಲಾಭವು ಅಂತರರಾಷ್ಟ್ರೀಯ ಬೆಲೆಗಳನ್ನು ಮತ್ತಷ್ಟು ಹೆಚ್ಚಿಸಿತು. 2022ರಲ್ಲಿ ರಸಗೊಬ್ಬರ ಕಂಪೆನಿಗಳ ಲಾಭದ ಅಂಚುಗಳು ಶೇಕಡಾ 36ಕ್ಕೆ ಏರಿದೆ ಮತ್ತು 2007–08ರ ಜಾಗತಿಕ ಬಿಕ್ಕಟ್ಟಿನ ನಂತರದ ಅತ್ಯಧಿಕವಾಗಿದೆ ಎಂದು ಅಧ್ಯಯನಗಳು ತೋರಿಸಿವೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಕಳೆದ ಮೂರು ದಶಕಗಳಲ್ಲಿ, ದೇಶೀಯ ಉತ್ಪಾದನೆಯು ಎಲ್ಲ ರಸಗೊಬ್ಬರಗಳಿಗೆ ಬೇಡಿಕೆಗಿಂತ ಕಡಿಮೆಯಾಗಿದೆ ಮತ್ತು ಭಾರತವು ಹೆಚ್ಚು ಹೆಚ್ಚು ಆಮದು ಅವಲಂಬಿತವಾಗಿದೆ. ರಸಗೊಬ್ಬರಗಳ ಒಟ್ಟು ಪೂರೈಕೆಯಲ್ಲಿ ಆಮದುಗಳ ಪಾಲು ಆಂಕಗೆ ಶೇಕಡಾ 60ರಿಂದ 100ವರೆಗೆ ಇರುತ್ತದೆ. ಇದು ಭಾರತದ ಕೃಷಿ ಉತ್ಪಾದನೆ ಮತ್ತು ಆಹಾರ ಭದ್ರತೆಯನ್ನು ಅಂತರರಾಷ್ಟ್ರೀಯ ಮಾರುಕಟ್ಟೆಗಳು ಮತ್ತು ಭೌಗೋಳಿಕ ರಾಜಕೀಯ ಪರಿಸ್ಥಿತಿಗಳ ಏರಿಳಿತಗಳಿಗೆ ಗುರಿಯಾಗುವಂತೆ ಮಾಡಿದೆ. ಸ್ವಯಂ–ಸುಸ್ಥಿರತೆಯನ್ನು ಖಚಿತಪಡಿಸಿಕೊಳ್ಳುವ ಬದಲು, ರಸಗೊಬ್ಬರ ಕೊರತೆಯ ಸಮಸ್ಯೆಗೆ ಪರಿಹಾರವಾಗಿ ನ್ಯಾನೊ ಯೂರಿಯಾ ಮತ್ತು ಶೂನ್ಯ ಬಜೆಟ್ ಕೃಷಿಯಂತಹ ಸಾಬೀತಾಗದ ತಂತ್ರಜ್ಞಾನಗಳನ್ನು ಮೋದಿ ಸರ್ಕಾರವು ಉತ್ತೇಜಿಸುತ್ತಿದೆ. ಭಾರತದ ಆಹಾರ ಅಪಾಯವನ್ನುಂಟು ಮಾಡಲು ಮತ್ತು ಮಾರುಕಟ್ಟೆ ಶಕ್ತಿಗಳು ರೈತರನ್ನು ಲೂಟಿ ಮಾಡಲು ಆಡಳಿತಾರೂಢ ಪಕ್ಷವೇ ಕಾರಣ ಎಂದು ಅವರು ದೂಷಿಸಿದರು.

ಕೇಂದ್ರ ಸರ್ಕಾರವು ನಿಯಂತ್ರಿತ ಬೆಲೆಗಳ ವ್ಯವಸ್ಥೆಯನ್ನು ಸಂಪೂರ್ಣ ವಾಗಿ ಪುನಃಸ್ಥಾಪಿಸಬೇಕು ಮತ್ತು ರೈತರಿಗೆ ಸಮಂಜಸ ಬೆಲೆಯಲ್ಲಿ ರಸಗೊಬ್ಬರಗಳನ್ನು ಒದಗಿಸುವುದನ್ನು ಖಚಿತಪಡಿಸಿಕೊಳ್ಳಬೇಕು.. ಭಾರತವನ್ನು ಸ್ವಾವಲಂಬಿಗೊಳಿಸಲು ಸರ್ಕಾರವು ಸಾರ್ವಜನಿಕ ವಲಯದಲ್ಲಿ ರಸಗೊಬ್ಬರ ಉತ್ಪಾದನೆಯಲ್ಲಿ ಬಂಡವಾಳ ಹೂಡಿಕೆಯನ್ನು ತಕ್ಷಣವೇ ಹೆಚ್ಚಿಸಬೇಕು. ರಸಗೊಬ್ಬರಗಳ ಸಂಗ್ರಹಣೆ ಮತ್ತು ಕಪ್ಪು ಮಾರುಕಟ್ಟೆಯ ವಿರುದ್ಧ ಕಟ್ಟುನಿಟ್ಟಿನ ಜಾಗರೂಕತೆ ಇರಬೇಕು. ಪ್ರತಿ ರಾಜ್ಯದಲ್ಲಿ ರಸಗೊಬ್ಬರಗಳ ವಿತರಣೆಗ ಪ್ರಾಥಯಿಮಿಕ ಸಂಸ್ಥೆಗಳಾಗಲು ರೈತರ ಸಹಕಾರ ಸಂಘಗಳನ್ನು ಬಲಪಡಿಸಬೇಕು ಎಂದು ಅವರು ಒತ್ತಾಯಿಸಿದರು.

### ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ

## ಪ್ರಸಕ್ತ ಶೈಕ್ಷಣಿಕ ಸಾಲಿನಿಂದ 6 ಹೊಸ ಪಿ.ಜಿ. ಕೋರ್ಸ್ ಶುರು: ಪ್ರೊ.ಬಿ.ಸತ್ಯನಾರಾಯಣ



**ಕಲಬುರಗಿ, ಮೇ. 29:** ಇಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಪ್ರಸಕ್ತ 2026–27ನೇ ಶೈಕ್ಷಣಿಕ ಸಾಲಿಗೆ ಅನ್‌ಲೈನ್ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಈಗಾಗಲೆ ಪ್ರವೇಶ ಪರೀಕ್ಷೆಯಲ್ಲಿ ಅಂಕ ಗಳಿಸಿದ ಅಭ್ಯರ್ಥಿಗಳು ವಿ.ವಿ.ಯಲ್ಲಿ ಅಭ್ಯಾಸಕ್ಕೆ ಆನ್ ಲೈನ್ ಮೂಲಕ ಪ್ರವೇಶಾತಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಈ ವರ್ಷ ಹೊಸ ಆರು ಕೋರ್ಸ್ ಗಳನ್ನು ಆರಂಭಿಸಲಾಗುತ್ತಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕುಲಪತಿಗಳು, ಸಿ.ಯು.ಇ.ಟಿ (ಪಿ.ಜಿ)–2026 ಅಥವಾ ಗೇಟ್ ಪರೀಕ್ಷೆಯಲ್ಲಿ ಅಂಕ ಪಡೆದ ಅಭ್ಯರ್ಥಿಗಳು ಮಾತ್ರ ಸಿ.ಯು.ಕೆ. ಸಮರ್ಥ್ ಪೋರ್ಟಲ್ ಮೂಲಕ ಮಾತ್ರ ಪ್ರವೇಶ ನೋಂದಣಿ ಮಾಡಿಕೊಳ್ಳಬೇಕಾಗುತ್ತದೆ. ಪ್ರಸ್ತುತ ಸಿ.ಯು.ಕೆ.ಯಲ್ಲಿ ಎರಡು ವರ್ಷ ಅವಧಿಯ 34 ಪಿ.ಜಿ. ಕೋರ್ಸ್‌ಗಳು, ಒಮದು ವರ್ಷ ಅವಧಿಯ 15 ಪಿ.ಜಿ. ಕಾರ್ಯಕ್ರಮಗಳು ಅಭ್ಯಾಸಕ್ಕೆ ಲಭ್ಯಗಳಿವೆ. ಪ್ರವೇಶ ಪಡೆಯುವ ಪ್ರತಿಯೊಬ್ಬ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಕಲ್ಪಿಸಲಾಗುವುದು ಎಂದರು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ 371–ಜೆ ಅನ್ವಯ ಶೇ.8ರಷ್ಟು ಮೀಸಲಾತಿ ಇದ್ದು, ಪ್ರದೇಶದ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಬೇಕು. ಪ್ರವೇಶ ಪ್ರಕ್ರಿಯೆ ಹಾಗೂ ಕೋರ್ಸ್‌ಗಳ ಕುರಿತು ಹೆಚ್ಚಿನ ವಿವರಗಳಿಗೆ ವೆಬ್‌ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು.

ವಿಶ್ವವಿದ್ಯಾಲಯವು ಆರಂಭವಾದಾಗಿನಿಂದಲೂ ಗುಣಮಟ್ಟದ ಉನ್ನತ ಶಿಕ್ಷಣ, ಹೊಸ–ಹೊಸ ಸಂಶೋಧನೆ, ನಾವೀನ್ಯತೆ ಮತ್ತು ಕೌಶಲ್ಯಾಭಿವೃದ್ಧಿಗೆ ಹೆಚ್ಚು ಒತ್ತು ನೀಡುತ್ತಿದೆ. ವಿ.ವಿಯಲ್ಲಿ ಸುಸಜ್ಜಿತ ಹಾಸ್ಟೆಲ್‌ಗಳ ಸೌಲಭ್ಯ, ಆಧುನಿಕ ಗ್ರಂಥಾಲಯ, ಕ್ರೀಡಾಂಗಣ ಸೇರಿದಂತೆ ಅನೇಕ ಸುಸಜ್ಜಿತ ಸೌಲಭ್ಯ ಹೊಂದಿದೆ. ಈ ವಿಶ್ವವಿದ್ಯಾಲಯದಲ್ಲಿ 6 ವಿಭಾಗಗಳಲ್ಲಿ ಪದವಿ, ಸ್ನಾತ್ತಕೋತ್ತರ, ಪಿ.ಎಚ್.ಡಿ ಶಿಕ್ಷಣ ನೀಡುತ್ತಿರುವ ದೇಶದ ಪ್ರಮುಖ ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಯಾಗಿ ಸಿ.ಯು.ಕೆಮ ಹೊರಹೊಮ್ಮುತ್ತಿದೆ ಎಂದರು.

# ರೈತರಿಗೆ ಗುಣಮಟ್ಟದ ಬೀಜ ಒದಗಿಸಿ: ಶಾಸಕ ಪ್ರಭು ಚವ್ಹಾಣ

**ಔರಾದ, ಮೇ. 29:** ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಶಾಸಕ ಪ್ರಭು ಬಿ.ಚವ್ಹಾಣ ಅವರು ಔರಾದ(ಬಿ) ರೈತ ಸಂಪರ್ಕ ಕೇಂದ್ರಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷ ಮುಂಗಾರು ಶೀಘ್ರವೇ ಬರುವ ಮುನ್ಸೂಚನೆ ಇರುವುದರಿಂದ ರೈತರಿಗೆ ಬಿತ್ತನೆ ಸಮಯಕ್ಕೆ ಬೀಜಗಳು ಲಭ್ಯವಾಗಬೇಕು ಎನ್ನುವ ಉದ್ದೇಶದಿಂದ ಮುಂಚಿತವಾಗಿ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಲಾಗುತ್ತಿದೆ. ಮುಂಗಾರು ಹಂಗಾಮಿಗೆ ಅಗತ್ಯವಿರುವ ವಿವಿಧ ಬೆಳೆಗಳ ಬೀಜಗಳನ್ನು ಕೃಷಿ ಇಲಾಖೆಯ ಮೂಲಕ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.



ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಬಾರದು. ಈ ಕುರಿತು ಅಧಿಕಾರಿಗಳು ಹಾಗೂ ಮಾರಾಟಗಾರರ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ರೈತರ ಸಂಪರ್ಕ ಕೇಂದ್ರಗಳಲ್ಲಾಗಲಿ, ಖಾಸಗಿ ಕೇಂದ್ರಗಳಲ್ಲಾಗಲಿ ಯಾವುದೇ ಕಾರಣಕ್ಕೂ ರೈತರಿಂದ ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ. ಇಂತಹ ಘಟನೆಗಳು ಎಲ್ಲಿಯಾದರೂ ನಡೆದರೆ ಅಂಥವರ ವಿರುದ್ಧ ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು. ಬಿತ್ತನೆ ಬೀಜ ಅಥವಾ ರಸಗೊಬ್ಬರ ನೀಡಿದ ನಂತರ ರೈತರಿಗೆ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ದರದ ಪಟ್ಟಿಯನ್ನು ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಸ್ಪಷ್ಟವಾಗಿ ಕಾಣುವಂತೆ ಕಡ್ಡಾಯವಾಗಿ ಪ್ರದರ್ಶಿಸಬೇಕು. ಯಾವುದೇ ರೈತರಿಗೆ ದರದ ಬಗ್ಗೆ ಗೊಂದಲ ಅಥವಾ ಅನ್ಯಾಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರಿಗೆ ಪೂರೈಸುವ ಬಿತ್ತನೆ ಬೀಜಗಳು ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಈ ಬಗ್ಗೆ ಅಧಿಕಾರಿಗಳು ರೈತರಿಗೆ ಕೊಡುವ ಮುನ್ನ ಪರಿಶೀಲಿಸಬೇಕು.

ಈ ವಿಷಯದಲ್ಲಿ ಯಾವುದೇ ರೀತಿಯ ದೂರುಗಳಿಗೆ ಅವಕಾಶ ಕೊಟ್ಟಲ್ಲಿ ಸುಮ್ಮನಿರುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಪ್ರತಿವರ್ಷ ಇಲ್ಲಿಂದ ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಅಕ್ರಮ ಸಾಗಾಟ ನಡೆಯುತ್ತಿರುವುದು ಗಮನಕ್ಕೆ ಬಂದಿದೆ. ಗಡಿ ಭಾಗಗಳಲ್ಲಿ ಅಧಿಕಾರಿಗಳು ವಿಶೇಷ ತಪಾಸಣೆ ನಡೆಸಿ, ಅಕ್ರಮ ಸಾಗಾಟವನ್ನು ಸಂಪೂರ್ಣವಾಗಿ ತಡೆಗಟ್ಟಬೇಕು. ನಮ್ಮ ರೈತರಿಗೆ ಬಂದ ಬಿತ್ತನೆ ಬೀಜ, ರಸಗೊಬ್ಬರ ಅನ್ಯರ ಪಾಲಾಗಬಾರದು. ನಮ್ಮ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದೆಂದು ಖಡಕ್ ಸೂಚನೆ ನೀಡಿದರು.

ಔರಾದ(ಬಿ) ಕ್ಷೇತ್ರದಲ್ಲಿ ಹೆಚ್ಚಾಗಿ ಬೆಳೆಸಲಾಗುವ ಸೋಯಾ ಬೀನ್ ಹಾಗೂ ಮತ್ತಿತರ ಬೆಳೆಗಳ ಬಿತ್ತನೆ ಬೀಜಗಳನ್ನು ಸಮರ್ಪಕವಾಗಿ ಪೂರೈಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ಅಗತ್ಯ ಪ್ರಮಾಣದ ಬೀಜಗಳು ಸಿಗುವಂತೆ ಸಮರ್ಪಕ ವ್ಯವಸ್ಥೆ ಮಾಡಬೇಕು. ಯಾವುದೇ ರೈತ ಬೀಜಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಎಲ್ಲ ಗ್ರಾಮಗಳಲ್ಲಿ ಕಡ್ಡಾಯವಾಗಿ ಡಂಗೂರ ಸಾರಿಸಿ ಬಿತ್ತನೆ ಬೀಜ ವಿತರಿಸುವ ದಿನಾಂಕದ ಬಗ್ಗೆ ತಿಳಿಸಬೇಕು.

ರೈತ ಸಂಪರ್ಕ ಕೇಂದ್ರಗಳು ರೈತರ ಸ್ನೇಹಿಯಾಗಿ ಕೆಲಸ ಮಾಡಬೇಕು. ರೈತರಿಗೆ ಯಾವುದೇ ರೀತಿಯ ಅನ್ಯಾಯವಾದರೆ ಸುಮ್ಮನಿರುವುದಿಲ್ಲ. ತಪ್ಪಿತಸ್ಥರು ಯಾರೇ ಇರಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಧೂಳಪ್ಪ ಪ್ರಾಸ್ತಾವಿಕ ಮಾತನಾಡಿ, ಸೋಯಾಬೀನ್ 36,100 ಕ್ವಿಂಟಾಲ್ ಬೇಡಿಕೆಯ ಪೈಕಿ 31,218 ಕ್ವಿಂಟಾಲ್ ಬಂದಿದೆ. ಹೆಸರು 300 ಕ್ವಿಂಟಾಲ್ ಪೈಕಿ 220 ಕ್ವಿಂಟಾಲ್ ಬಂದಿದೆ. ಹೆಸರು 100 ಕ್ವಿಂಟಾಲ್ ಪೈಕಿ 25 ಕ್ವಿಂಟಾಲ್ ಹಾಗೂ 50 ಕ್ವಿಂಟಾಲ್ ಪೈಕಿ 13 ಕ್ವಿಂಟಾಲ್ ಬಂದಿದೆ. ಉಳಿದ ಎಲ್ಲ ಬಿತ್ತನೆ ಬೀಜಗಳು ಅಗತ್ಯಕ್ಕೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಲಾಗಿದೆ. ರೈತರು ಆತಂಕಪಡಬೇಕಿಲ್ಲ ತಮಗೆ ತಿಳಿಸಿದ ದಿನಾಂಕದಂದು ಬಿತ್ತನೆ ಬೀಜ ಪಡೆಯಬೇಕು ಎಂದು ತಿಳಿಸಿದರು.

ಎಲ್ಲ ರೈತರು ಒಂದೇ ಬೆಳೆಗೆ ಮೊರೆ ಹೋಗದೆ ಬೇರೆ-ಬೇರೆ ಬೆಳೆಗಳನ್ನು ಬಿತ್ತನೆ ಮಾಡಿದರೆ ಆರ್ಥಿಕ ಸಂಕಷ್ಟದಿಂದ ತಪ್ಪಿಸಿಕೊಳ್ಳಬಹುದು. ಹಾಗೆಯೇ 80 ಎಂ.ಎಂ ಮಳೆಯಾದ ನಂತರವೇ ಸೋಯಾಬೀನ್ ಬಿತ್ತನೆ ಮಾಡಬೇಕು.

ದೊಡ್ಡ ಟ್ರಾಕ್ಟರ್‌ಗಳಿಂದ ಹೆಚ್ಚಿನ ಆಳಕ್ಕೆ ಬಿತ್ತನೆ ಮಾಡುವುದರಿಂದ ಮೊಳಕೆ ಒಡೆಯುವುದು ಕಷ್ಟ ಹಾಗಾಗಿ ರೈತರು ಅಗತ್ಯ ಮುನ್ನೆಚ್ಚರಿಕೆಯೊಂದಿಗೆ ಬಿತ್ತನೆ ಕೈಗೊಳ್ಳಬೇಕು. ಎಲ್ಲ ಬೆಳೆಗಳಿಗೂ ತಪ್ಪದೇ ವಿಮೆ ಮಾಡಿಸಬೇಕು ಎಂದು ರೈತರಿಗೆ ಪ್ರಭು ಚವ್ಹಾಣ್ ಸಲಹೆ ನೀಡಿದರು.




ಕೇರಳದ ಮಾಜಿ ಮುಖ್ಯಮಂತ್ರಿ ಮತ್ತು ಸಿಪಿಐ(ಎಂ) ಪಾಲಿಟ್ ಬ್ಯೂರೋ ಸದಸ್ಯ ಪಿಣರಾಯಿ ವಿಜಯನ್ ಅವರ ಮನೆಯ ಮೇಲೆ ಜಾರಿ ನಿರ್ದೇಶನಾಲಯ ನಡೆಸಿದ ದಾಳಿಯನ್ನು ಖಂಡಿಸಿ ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಪಿಐಎಂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

# ದಲಿತ ನಾಯಕರಿಗೆ ಕಾಂಗ್ರೆಸ್‌ನಲ್ಲಿ ಭವಿಷ್ಯವಿಲ್ಲ: ಛಲವಾದಿ ನಾರಾಯಣಸ್ವಾಮಿ

**ಬೀದರ್, ಮೇ. 29:** ಕಾಂಗ್ರೆಸ್ಸಿನಲ್ಲಿ ಮೇಲ್ಜಾತಿಯವರೇ ಮುಖ್ಯಮಂತ್ರಿ ಆಗುವುದಾದರೇ ದಲಿತರ ಪಾಡೇನು ಕಾಂಗ್ರೆಸ್ ದಲಿತರನ್ನು ಮತ್ತೊಮ್ಮೆ ದೋಖಾ ಮಾಡುತ್ತಿದೆ. ದಲಿತ ನಾಯಕರಿಗೆ ಕಾಂಗ್ರೆಸ್ಸಿನಲ್ಲಿ ಭವಿಷ್ಯವಿಲ್ಲ. ಅಂಬೇಡ್ಕರ್ ಬಗ್ಗೆ ಗೌರವ, ಸ್ವಾಭಿಮಾನದ ಬದುಕು ಬೇಕಾದರೆ ಬಿಜೆಪಿಗೆ ಬನ್ನಿ ಎಂದ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಹ್ವಾನ ನೀಡಿದ್ದಾರೆ.

ಸುದ್ದಿಗಾರರ, ಕಾಂಗ್ರೆಸ್ 80 ವರ್ಷಗಳಿಂದ ಪರಿಶಿಷ್ಟರನ್ನು ವಂಚಿಸುತ್ತ ಬಂದಿದೆ. ದೊಡ್ಡ ಬಹುಮತ ಇದ್ದಾಗಲೇ ದಲಿತರನ್ನು ಸಿಎಂ ಮಾಡಲಿಲ್ಲ. ಮುಂದೆ ಆ ಪಕ್ಷಕ್ಕೆ ಅಧಿಕಾರಕ್ಕಂತೂ ಬರುವುದಿಲ್ಲ. ಹಾಗಾದರೆ ದಲಿತರಿಗೆ ಯಾವಾಗ ಅಧಿಕಾರ ಕೊಡುತ್ತೀರಿ ? ಎಐಸಿಸಿ ಅಧ್ಯಕ್ಷ ಸ್ಥಾನಕ್ಕೇರಿದ ಡಾ. ಖರ್ಗೆ ಅವರಿಗೆ ಸಿಎಂ ಪಟ್ಟ ಕಟ್ಟಬೇಕಾಗಿತ್ತು. ಇಲ್ಲವೇ ಆ ಸ್ಥಾನಕ್ಕೆ ಪಕ್ಷದಲ್ಲಿ ಪರಮೇಶ್ವರ, ಮುನಿಯಪ್ಪ ಸೇರಿ ಹಲವು ನಾಯಕರು ಇರಲಿಲ್ಲವೇ ಎಂದು ಪ್ರಶ್ನಿಸಿದರು.

ದಲಿತ ನಾಯಕರೇ ದಯವಿಟ್ಟು ಬಿಜೆಪಿಗೆ ಬನ್ನಿ, ನಾನು ಜವಾಬ್ದಾರಿ ತೆಗದುಕೊಳ್ಳುತ್ತೇನೆ. ದಲಿತ ಸಮಾಜಕ್ಕೆ ನ್ಯಾಯ ಕೊಡುವ ಕೆಲಸವನ್ನು ನಮ್ಮ ಪಕ್ಷ ಮಾಡುತ್ತದೆ ಎಂದು ಛಲವಾದಿ ಭರವಸೆ ನೀಡಿದರು.

ಎಂಟು ವರ್ಷಗಳ ಕಾಲ ರಾಜ್ಯವನ್ನು ಆಳಿದ ಸಿಎಂ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಅಗೌರವದಿಂದ ನಡೆಸಿಕೊಂಡಿದೆ. ಅವರನ್ನು



ರಾಜೀನಾಮೆ ನೀಡುವಂತೆ ತಾಕೀತು ಮಾಡಲಾಗಿತ್ತು. ಆದರೆ, ಸಿದ್ದರಾಮಯ್ಯ ಹಿರಿತನದ ಗೌರವ ಹೋಗಬಾರದು ಎಂದು ತಮ್ಮ ನೋವು ತೋರಿಕೊಂಡಿಲ್ಲ. ರಾಹುಲ್ ಮತ್ತು ಗಾಂಧಿ ಕುಟುಂಬ ಅಷ್ಟೇ ಹೈಕಮಾಂಡಾ, ಎಐಸಿಸಿ ಅಧ್ಯಕ್ಷ ಖರ್ಗೆ ಅವರಿಗೆ ಯಾವುದೇ ಸಂಬಂಧ ಇಲ್ಲವೇ. ಈ ವಿಷಯವನ್ನು ಅವರು ಮಾತನಾಡಬೇಕಿತ್ತು ಎಂದು ಹೇಳಿದರು.

## ಗಡಿಭಾಗದಲ್ಲಿ ಕನ್ನಡ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯ: ಪ್ರಕಾಶ ದೇಶಮುಖ



**ಬೀದರ್, ಮೇ. 29:** ಗಡಿಭಾಗದಲ್ಲಿ ಕನ್ನಡ ನಾಡು-ನುಡಿ, ಸಂಸ್ಕೃತಿಯನ್ನು ಉಳಿಸಿ ಬೆಳೆಸಿಕೊಂಡು ಹೋಗುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ ಎಂದು ಸಂಪನ್ಮೂಲ ಶಿಕ್ಷಕ ಪ್ರಕಾಶ ದೇಶಮುಖ್ ಅವರು ಹೇಳಿದರು.

ಜಿಲ್ಲೆಯ ಔರಾದ್ ತಾಲ್ಲೂಕಿನ ಸಂತಪುರ ಗ್ರಾಮದ ಆನಂದ ಪ್ರೌಢ ಶಾಲೆಯಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ ಧಾರವಾಡ ಹಾಗೂ ಜಿಲ್ಲಾ ಘಟಕದ ಸಹಯೋಗ ದಲ್ಲಿ ಮಂಗಳವಾರ ಆಯೋಜಿಸಿದ್ದ 'ಗಡಿಭಾಗದಲ್ಲಿ ಕನ್ನಡ ಭಾಷೆಯ ಉಳಿವು' ಕುರಿತ ಜಾಗೃತಿ ಕಾರ್ಯಕ್ರಮ ದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ಗಡಿಭಾಗದಲ್ಲಿ ಕನ್ನಡ ಶಾಲೆಗಳ ಸಂಖ್ಯೆ ಕುಸಿಯುತ್ತಿದ್ದು, ಆಂಗ್ಲ ಮಾಧ್ಯಮದ ಪ್ರಭಾವ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಕನ್ನಡ ಭಾಷೆಯ ಉಳಿವಿಗಾಗಿ ಸರ್ಕಾರ ಮತ್ತು ಸಮಾಜ ಜಂಟಿಯಾಗಿ ಕಾರ್ಯನಿರ್ವ ಹಿಸಬೇಕು. ಕನ್ನಡ ಶಾಲೆಗಳನ್ನು ಬಲಪಡಿಸಿ, ಶಿಕ್ಷಕರ ನೇಮಕಾತಿ, ಗ್ರಂಥಾಲಯಗಳ ಸ್ಥಾಪನೆ ಹಾಗೂ ಸಾಹಿತ್ಯ-ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಆದ್ಯತೆ ನೀಡಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಉಪನ್ಯಾಸಕ ದತ್ತಾತ್ರಿ ಮಡಿವಾಳ್ ಅವರು ಮಾತನಾಡಿ, ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘವು ನಾಡಿನ ಪ್ರಮುಖ ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಸಂಸ್ಥೆಯಾಗಿದ್ದು, ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಂಯೋಜಕ ಮಹೇಶ್ ಗೋರನಾಳಕರ್ ಅವರು ಮಾತನಾಡಿ, ಯುವ ಜನರು ಇತರ ಭಾಷೆಗಳಿಗೆ ಗೌರವ ನೀಡುವ ಜೊತೆಗೆ ಕನ್ನಡ ಬಳಕೆಗೆ ಹೆಚ್ಚಿನ ಒತ್ತು ನೀಡಬೇಕು. ಮನೆಗಳಲ್ಲಿ ಮಕ್ಕಳೊಂದಿಗೆ ಕನ್ನಡದಲ್ಲೇ ಮಾತನಾಡುವ ಅಭ್ಯಾಸ ಬೆಳೆಸಬೇಕೆಂದರು.

ಗಡಿಭಾಗದಲ್ಲಿ ಕನ್ನಡದ ಬಹುತ್ವ ಸಂಸ್ಕೃತಿ ಉಳಿಸಿ ಬೆಳೆಸಲು ಸಂಘದಿಂದ ವಿವಿಧ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕಾರ್ಯ ಕ್ರಮಗಳನ್ನು ಆಯೋಜಿಸಲಾಗುವುದು ಎಂದು ಭರವಸೆ ನೀಡಿದರು. ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ವಿನಯಕುಮಾರ ಮಾಳಗೆ ಮಾತನಾಡಿ, ಕನ್ನಡ ಭಾಷೆಯ ಬೆಳವಣಿಗೆಯ ಜೊತೆಗೆ ಪರಿಸರ ಸಂರಕ್ಷಣೆಯೂ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ಸಾಹಿತಿ ಹಾಗೂ ಪತ್ರಕರ್ತ ಬಾಲಾಜಿ ಕುಂಬಾರ್ ಮಾತನಾಡಿ, ಬಹುಭಾಷಾ ಸಂಗಮ ಭೂಮಿಯಾಗಿರುವ ಔರಾದ್‌ನಲ್ಲಿ ಕನ್ನಡ ಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯದ ಕುರಿತು ಸಮಗ್ರ ಚರ್ಚೆಗಳು ನಡೆಯಬೇಕಿದ್ದು, ಕನ್ನಡದ ಉಳಿವಿಗಾಗಿ ಸರ್ಕಾರದ ಗಮನ ಸೆಳೆಯುವ ಅಗತ್ಯವಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ನಡೆದ ನೃತ್ಯ, ನಾಟಕ ಹಾಗೂ ಗಾಯನ ಕಾರ್ಯಕ್ರಮಗಳು ಸಭಿಕರ ಗಮನ ಸೆಳೆದವು.

# ಡಿಕೆಶಿ ಆಡಳಿತ ನೋಡಿ ಬಿಜೆಪಿ ಹೋರಾಟ: ಶಾಸಕ ಜನಾರ್ದನ ರೆಡ್ಡಿ

**ಕೊಪ್ಪಳ, ಮೇ 29:** ಡಿ.ಕೆ. ಶಿವಕುಮಾರರೊಂದಿಗೆ ಹಿಂದೆ ವಿಮಾನ ನಿಲ್ದಾಣ ಕಾಮಗಾರಿಯ ಕೆಲಸ ಮಾಡಿದ್ದೇನೆ. ಈಗ ಅವರು ಸಿಎಂ ಆಗುತ್ತಿದ್ದಾರೆ. ದೂರದೃಷ್ಟಿಯುಳ್ಳ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಹೇಳಿದರು.

ಕೊಪ್ಪಳದಲ್ಲಿ, ಸಿದ್ದರಾಮಯ್ಯ ತತ್ವಗಳನ್ನು ಇಟ್ಟುಕೊಂಡು ರಾಜಕೀಯ ಮಾಡಿದವರು. ಈ ವಯಸ್ಸಿನಲ್ಲಿ ಅವರು ತಮ್ಮ ರಾಜಕೀಯ ತತ್ವಗಳನ್ನು ಬದಲಾಯಿಸಿಕೊಳ್ಳುತ್ತಾರೆ ಎನ್ನುವುದಕ್ಕೆ ಆಗುವುದಿಲ್ಲ. ಹಿಂದೆ ನಾನು ಸಿದ್ದರಾಮಯ್ಯ ರಾಜಿನಾಮೆ ನೀಡು




2ತ್ತಾರೆ, ಡಿ.ಕೆ. ಶಿವಕುಮಾರ ಸಿಎಂ ಆಗುತ್ತಾರೆ ಎಂದಿದ್ದೆ ಈಗ ಅವರು ರಾಜಿನಾಮೆ ನೀಡಿದ್ದಾರೆ ಸಿದ್ದರಾಮಯ್ಯ ಹೇಳಿದಂತೆ ಡಿಕೆ ಶಿವಕುಮಾರ ಸಿಎಂ ಆಗಲಿದ್ದಾರೆ ಎಂದರು.

ಡಿ.ಕೆ.ಶಿವಕುಮಾರ ಆಡಳಿತ ನೋಡಿಕೊಂಡು ಬಿಜೆಪಿ ಹೋರಾಟ ಮಾಡಲಿದೆ. ಸಿದ್ದರಾಮಯ್ಯ ಕಾಂಗ್ರೆಸ್ ಪಕ್ಷ ಎಲ್ಲವನ್ನು ನೀಡಿದೆ ಎಂದಿದ್ದಾರೆ. ಹೀಗಾಗಿ ಅಹಿಂದ ನಾಯಕನಿಗೆ ಅನ್ಯಾಯ ಎಂದು ಹೇಳಲು ಆಗುವುದಿಲ್ಲ.

ಇಲ್ಲಿಯವರೆಗೂ ಸಿದ್ದರಾಮಯ್ಯ ಹೊಗಳುತ್ತಿದ್ದ ಬಸವರಾಜ ರಾಯರಡ್ಡಿ ಈಗ ಡಿ.ಕೆ. ಶಿವಕುಮಾರ ಮುಂದೆ ನಿಂತಿದ್ದಾರೆ. ಸಿದ್ದರಾಮಯ್ಯನವರನ್ನು ಬ್ಲಾಕ್‌ಮೇಲ್ ಮಾಡಿ ಆರ್ಥಿಕ ಸಲಹೆಗಾರರಾಗಿದ್ದರು. ಈಗ ಅಧಿಕಾರ ಬದಲಾದಂತೆ ಅವರು ಜಂಪ್ ಮಾಡಿದ್ದಾರೆ. ರಾಜಕೀಯದಲ್ಲಿ ಇದೆಲ್ಲವೂ ಸಹಜ ಎಂದರು.

# ಆಂಧ್ರದ ಹೊರನಾಡ ಕನ್ನಡ ಮಕ್ಕಳಿಗೆ ಶಿಕ್ಷಣ ಸೌಲಭ್ಯ ಒದಗಿಸಲು ಡಿಡಿಪಿಐ ಅವರಿಗೆ ಮನವಿ



**ಬಳ್ಳಾರಿ, ಮೇ 29:** ಆಂಧ್ರಪ್ರದೇಶದ ಗಡಿ ಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹೊರನಾಡ ಕನ್ನಡ ಮಕ್ಕಳಿಗೆ ಉತ್ತಮ ಶಿಕ್ಷಣ ಸೌಲಭ್ಯಗಳನ್ನು ಒದಗಿಸಬೇಕೆಂದು ಆಗ್ರಹಿಸಿ ಆಂಧ್ರಪ್ರದೇಶ ಕನ್ನಡ ಶಿಕ್ಷಕರ ಸಂಘ ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ಕನ್ನಡ ಮಾಧ್ಯಮದಲ್ಲಿ ಓದುತ್ತಿರುವ ಮಕ್ಕಳಿಗೆ ಉಚಿತ ಕನ್ನಡ ಪಠ್ಯಪುಸ್ತಕಗಳನ್ನು ನೀಡಬೇಕು ಎಂದು ಸಂಘದ ಪದಾಧಿಕಾರಿಗಳು ಒತ್ತಾಯಿಸಿದರು. ಕರ್ನಾಟಕ ಸರ್ಕಾರದ ಶಿಕ್ಷಕರಿಗೆ ನೀಡುವ ಸೇವಾ ನಿರತಿ ಶಿಕ್ಷಣ ತರಬೇತಿಯಲ್ಲಿ ಆಂಧ್ರ ಭಾಗದ ಹೊರನಾಡ ಕನ್ನಡ ಶಿಕ್ಷಕರಿಗೂ ಅವಕಾಶ ಕಲ್ಪಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಇದೇ ವೇಳೆ, ಸರ್ಕಾರಿ ಶಾಲಾ ಶಿಕ್ಷಕರಿಗೆ ನೀಡುವ ಶಿಕ್ಷಣ ಸಾಮಗ್ರಿಗಳನ್ನು ಹೊರನಾಡ ಕನ್ನಡ ಶಿಕ್ಷಕರಿಗೂ ವಿತರಿಸಬೇಕು ಹಾಗೂ ಪ್ರತಿ ವರ್ಷ ಕರ್ನಾಟಕದಲ್ಲಿ ನೀಡುವ ಉತ್ತಮ ಶಿಕ್ಷಕರ ಪುರಸ್ಕಾರ ಪ್ರಶಸ್ತಿಗೆ ಆಂಧ್ರ ಭಾಗದ ಕನ್ನಡ ಶಿಕ್ಷಕರನ್ನೂ ಪರಿಗಣಿಸಬೇಕು ಎಂದು ಆಗ್ರಹಿಸಲಾಗಿದೆ.

ಈ ಎಲ್ಲಾ ಬೇಡಿಕೆ ಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳ ಬೇಕೆಂದು ಸಂಘದ ಮುಖಂಡರು ವಿನಂತಿಸಿದರು.

ಆಂಧ್ರಪ್ರದೇಶ ಕನ್ನಡ ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಗಿರಿಜಾಪತಿ, ಉಪಾಧ್ಯಕ್ಷ ಬಿ. ಇರಳಪ್ಪ, ಖಜಾಂಚಿ ಜಿ. ತಿಪ್ಪೇಸ್ವಾಮಿ, ಎಲ್. ಶ್ರೀನಾಥ್, ಬಿ. ಹೊನ್ನೂರಪ್ಪ ಹಾಗೂ ಖಾಸಗಿ ಶಾಲೆಗಳ ಅಧ್ಯಕ್ಷರಾದ ಎನ್. ಮರಿಸ್ವಾಮಿ ರೆಡ್ಡಿ, ರಿಯಾಜ್, ರಂಜಾನ್ ಮತ್ತು ಎಂ. ಹನುಮಂತಪ್ಪ ಸರ್ ಉಪಸ್ಥಿತರಿದ್ದರು.

# ಹೆಲ್ಮೆಟ್ ಕಡ್ಡಾಯ ವಿರೋಧಿಸಿ ಗೃಹ ಸಚಿವರು ಉಸ್ತುವಾರಿ ಸಚಿವರಿಗೆ ಮನವಿ



**ಬಳ್ಳಾರಿ, ಮೇ 29:** ಬಳ್ಳಾರಿ ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯಗೊಳಿಸಬಾರದು ಎಂದು ಒತ್ತಾಯಿಸಿ ಕನ್ನಡ ನಾಡು ರೈತ ಸಂಘ ವತಿಯಿಂದ ರಾಜ್ಯ ಗೃಹ ಸಚಿವ ಜಿ. ಪರಮೇಶ್ವರ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಲಾಯಿತು.

ಕನ್ನಡ ನಾಡು ರೈತ ಸಂಘದ ರಾಜ್ಯಾಧ್ಯಕ್ಷ ಮೆಣಸಿನ ಈಶ್ವರಪ್ಪ ಮಾತನಾಡಿ, ಬಳ್ಳಾರಿ ಜಿಲ್ಲೆಯಲ್ಲಿ ಅಪಘಾತಗಳಿಗೆ ರಸ್ತೆ ಗುಂಡಿಗಳನ್ನು ಮುಚ್ಚದೇ ಇರುವುದು, ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅತಿಯಾಗಿ ಬಾರ್ ಹಾಗೂ ಮದ್ಯದಂಗಡಿಗಳಿಗೆ ಪರವಾನಗಿ ನೀಡಿರುವುದು ಮತ್ತು JSW Steel ಸೇರಿದಂತೆ ಕೈಗಾರಿಕಾ ಪ್ರದೇಶಗಳಲ್ಲಿ ಭಾರಿ ಲೋಡ್ ಲಾರಿಗಳ ಸಂಚಾರ ಹೆಚ್ಚಿರುವುದೇ ಪ್ರಮುಖ ಕಾರಣಗಳಾಗಿವೆ ಎಂದು ಆರೋಪಿಸಿದರು. ಹೆಲ್ಮೆಟ್ ಕಡ್ಡಾಯ ಜಾರಿಗೊಳಿಸುವ ಬದಲು ರಸ್ತೆ ಸುರಕ್ಷತೆ, ರಸ್ತೆ ದುರಸ್ತಿ ಹಾಗೂ ಭಾರಿ ವಾಹನಗಳ ನಿಯಂತ್ರಣಕ್ಕೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

# ಕಲ್ಯಾಣ ಕರ್ನಾಟಕದ ಸಾಹಿತಿಗಳಿಗೆ ಸೂಕ್ತ ವೇದಿಕೆ ದೊರೆಯಲಿ: ಮುಡುಬಿ ಗುಂಡೇರಾವ್

**ಕಲಬುರಗಿ, ಮೇ. 29 :** ಕಲ್ಯಾಣ ಕರ್ನಾಟಕ ಭಾಗದ ಸಾಹಿತಿಗಳಿಗೆ ಸೂಕ್ತ ವೇದಿಕೆಯಿಲ್ಲದೆ ಹಲವಾರು ಪ್ರತಿಭೆಗಳು ರಾಜ್ಯಮಟ್ಟಕ್ಕೆ ಗುರುತಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ, ಮುಂದಿನ ದಿನಗಳಲ್ಲಿ ಹೆಚ್ಚಿನ ಪ್ರಶಸ್ತಿಗಳು, ಅಖಿಲ ಭಾರತ ಸಾಹಿತ್ಯ ಸಮ್ಮೇಳನಗಳಂತಹ ಉನ್ನತ ಗೌರವ ಸ್ಥಾನಮಾನ ಗಳು ನಮ್ಮ ನೆಲದವರಿಗೆ ದೊರೆಕಿಸಿ ಕೊಡುವಂತಹ ಕೆಲಸವಾಗಬೇಕು ಎಂದು ಸಂಶೋಧಕ ಸಾಹಿತಿ ಮತ್ತು ಕಲಬುರಗಿ ಜಿಲ್ಲಾ 22ನೇ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಮುಡುಬಿ ಗುಂಡೇರಾವ ಅಭಿಮತ ವ್ಯಕ್ತಪಡಿಸಿದರು.

ಕಲಬುರಗಿ ನಗರದ ಸಮೀಪದ ಉಪಳಾಂವ ಗ್ರಾಮದ ಶ್ರೀರಾಮ ಕನ್ನಡ ಕಾನ್ವೆಂಟ ಶಾಲೆಯ ಆವರಣದಲ್ಲಿ ಶ್ರೀ ಜೈಸಂತೋಷಿ ಮಾತಾ ಪ್ರಕಾಶನ ಆಯೋಜಿಸಿದ ಕವಿಯತ್ರಿ ಚಂದ್ರಕಲಾ ಎಂ ಪಾಟೀಲ ಅವರು ರಚಿಸಿದ ಎಡಚರು, ಸಾಹಿತ್ಯ ಸುಗಂಧ, ಲೇಖನ ಲೋಕದ ದೀಪಗಳು ಮತ್ತು ಸಾಹಿತಿ ಶಾಂತಮಲ್ಲಪ್ಪ ಕರಿಕಲ್ ಕಣ್ಣಿ ರಚಿತ ಚಂದದ ಕನ್ನಡ ನುಡಿ ಮುಂಜಾನೆಯ ಮಾತುಗಳು ಹಾಗೂ ಡಾ. ಲೀಲಾ ಗುರುರಾಜ ರಚಿತ ಮಳೆಬಿಲ್ಲು ಕೃತಿಗಳನ್ನು ಏಕಕಾಲದಲ್ಲಿ ಲೋಕಾರ್ಪಣೆಗೊಳಿಸಿಕನ್ನಡದ ಪ್ರಥಮ ಗ್ರಂಥ ಕವಿರಾಜಮಾರ್ಗ ಕೃತಿ ನೀಡಿದ ಹೆಗ್ಗಳಿಕೆ ಕಲಬುರಗಿ ನೆಲಕ್ಕೆ ಸೇರುತ್ತದೆ, ಸಾಹಿತ್ಯದ ಸಾವಿರಾರು ಪ್ರತೀಭೆಗಳು ನಮ್ಮ ನೆಲದ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಇವರ ಸಾಧನೆಯನ್ನು ಗುರುತಿಸುವ ಕೆಲಸವಾಗಬೇಕು, ಪ್ರೌಢ ಶಾಲೆಯ ಒಬ್ಬ ಆದರ್ಶ ಶಿಕ್ಷಕಿ ತನ್ನ ಕರ್ತವ್ಯದ ಜೊತೆಗೆ ಸಾಹಿತ್ಯ ಕೃಷಿ ಮಾಡುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ. ಎಡಗೈಯಿಂದ ಬರೆಯುವವರ ಕುರಿತು ಸಾಹಿತ್ಯ ರಚನೆ ಮಾಡಿದ್ದು ಇದೊಂದು ವಿನೂತನ ಪ್ರಯೋಗವಾಗಿದೆ ಎಂದರು.



ಕಲಬುರಗಿಯ ಸಮೀಪದ ಉಪಳಾಂವ ಗ್ರಾಮದ ಶ್ರೀರಾಮ ಕನ್ನಡ ಕಾನ್ವೆಂಟ ಶಾಲೆಯ ಆವರಣದಲ್ಲಿ ಶ್ರೀ ಜೈಸಂತೋಷಿ ಮಾತಾ ಪ್ರಕಾಶನ ಆಯೋಜಿಸಿದ ಕವಯತ್ರಿ ಚಂದ್ರಕಲಾ ಎಂ ಪಾಟೀಲ ಅವರು ರಚಿಸಿದ 'ಎಡಚರು, ಸಾಹಿತ್ಯ ಸುಗಂಧ, ಲೇಖನ ಲೋಕದ ದೀಪಗಳು' ಮತ್ತು ಸಾಹಿತಿ ಶಾಂತಮಲ್ಲಪ್ಪ ಕರಿಕಲ್ ಕಣ್ಣಿ ರಚಿತ 'ಚಂದದ ಕನ್ನಡ ನುಡಿ' 'ಮುಂಜಾನೆಯ ಮಾತುಗಳು' ಹಾಗೂ ಡಾ. ಲೀಲಾ ಗುರುರಾಜ ರಚಿತ 'ಮಳೆಬಿಲ್ಲು' ಕೃತಿಗಳನ್ನು ಸಾಹಿತಿ ಮತ್ತು ಸಂಶೋಧಕ ಮುಡುಬಿ ಗುಂಡೇರಾವ್ ಲೋಕಾರ್ಪಣೆಗೊಳಿಸಿದರು.

ಕ್ಷೇತ್ರಶಿಕ್ಷಣಾಧಿಕಾರಿ ಮಾರುತಿ ಹುಜರಾತಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಶಿಕ್ಷಕ ವೃತ್ತಿಯ ಜೊತೆಗೆ ಉತ್ತಮ ಸಾಹಿತ್ಯ ರಚನೆ ಮಾಡುತ್ತಿರುವ ಚಂದ್ರಕಲಾ ಎಂ ಪಾಟೀಲರ ಕಾರ್ಯ ಶ್ಲಾಘನೀಯ. ಸಾಹಿತ್ಯದಿಂದ ಸಮಾಜ ಪರಿವರ್ತನೆ ಸಾಧ್ಯ ಎಂದರು.

ಕಸಾಪ ಜಿಲ್ಲಾಧ್ಯಕ್ಷ ವಿಜಯ ಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ ಈ ನೆಲದಲ್ಲಿ ಸಾಹಿತ್ಯ ಪ್ರತಿಭೆಗಳನ್ನು ಗುರುತಿಸುವ ಕಾರ್ಯವನ್ನು ಕಳೆದ ಹಲವಾರು ವರ್ಷಗಳಿಂದ ಮಾಡುತ್ತಿದ್ದು ಇಲ್ಲಿಯ ಸಾಹಿತಿಗಳು ಯಾವ ಭಾಗ ಕ್ಕಿಂತಲೂ ಕಡಿಮೆಯಿಲ್ಲ, ಕಸಾಪದಿಂದ ವೇದಿಕೆ ಒದಗಿಸಲಾಗುತ್ತಿದೆ ಎಂದರು.

ಎಡಚರು, ಸಾಹಿತ್ಯ ಸುಗಂಧ, ಮಳೆಬಿಲ್ಲು ಕೃತಿಗಳ ಕುರಿತು ಕೆ ಹರೀಶ ಡೋಂಗ್ರೆ, ಚಂದದ ಕನ್ನಡ ನುಡಿ ಮುಂಜಾನೆಯ ಮಾತುಗಳು ಕೃತಿ ಕುರಿತು ಷಣ್ಮುಖಯ್ಯ ಎಂ ಸ್ವಾಮಿ ಮತ್ತು ಲೇಖನ ಲೋಕದ ದೀಪಗಳು ಕೃತಿಯ ಬಗ್ಗೆ ಡಾ. ಲೀಲಾ ಗುರುರಾಜ ಪರಿಚಯಿಸಿದರು. ಮಹಿಳಾ ನೌಕರ ಸಂಘದ ಜಿಲ್ಲಾಧ್ಯಕ್ಷೆ ರೇಣುಕಾ ಡಾಂಗೆ,ಶ ನಿವೃತ್ತ ನಾಲ್ಕು ಚಕ್ರ ಚಾರಿಟೇಬಲ ಟ್ರಸ್ಟ ಅಧ್ಯಕ್ಷೆ ಮಾಲಾ ಹೆಚ್ ಕಣ್ಣಿ, ಹಿರಿಯ ಸಾಹಿತಿ ಶಾಂತಾ ಪಸ್ತಪುರ ಕೃತಿಯ ಲೇಖಕರಾದ ಚಂದ್ರಕಲಾ ಎಂ ಪಾಟೀಲ, ಏ ಹರೀಶ ಡೋಂಗ್ರೆ ಡಾ. ಲೀಲಾ ಗುರುರಾಜ, ಸಾಹಿತಿ ಶಾಂತಮಲ್ಲಪ್ಪ ಕರಿಕಲ್ ಕಣ್ಣಿ ಮುಂತಾದವರು ಮಾತನಾಡಿದರು.

ಶಾಲೆ ಮುಖ್ಯೋಪಾಧ್ಯಾಯಿನಿ ಜ್ಯೋತಿ ಪಿ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆ ಮುಖ್ಯಸ್ಥ ಗೌಡೇಶ ಬಿರಾದಾರ, ಸಂಘಟಕ ನೀಲಕಂಠೇಶ್ವರ, ಮುಖ್ಯೋಪಾಧ್ಯಾಯಿನಿ ಮಹಾದೇವಿ ಪಾಟೀಲ, ಕಸಾಪ ಗೌರ ಕಾರ್ಯದರ್ಶಿ ಶಿವರಾಜ ಅಂಡಗಿ, ಪತ್ರಕರ್ತ ರಾಜು ಅಪ್ಪಾಜಿ, ಹಣಮಂತರಾಯ ಭೈರಾಮಡಗಿ, ಪ್ರಮುಖರಾದ ವಿಶ್ವನಾಥ ಗೌನಳ್ಳಿ, ರಾಘವೇಂದ್ರ ಭಕ್ರಿ, ರಾಜೇಂದ್ರ ಝಳಕಿ, ಅನ್ನಪೂರ್ಣ ಸಂಗೋಳಗಿ, ಚೈತ್ರಾ, ಶಿವಶರಣಪ್ಪ ಅಂತಪನಳ್ಳಿ, ಅಣವೀರಪ್ಪಗೌಡ, ಜಗದೀಶ ಹಿರೇಮಠ, ವಿಜಯಕುಮಾರ ಪಾಟೀಲ ಆಡಕಿ, ಶಿವಶರಣಪ್ಪ ಹೂಗಾರ, ಗೂಳಿನಾಥ ಸಾಹುಕಾರ, ಗುಂಡಮ್ಮ ಇತರರಿದ್ದರು. ಎಡಚುಗೈ ಸಾಧಕರಿಗೆ, ಪ್ರಕಾಶಕರಿಗೆ, ಗ್ರಂಥ ಸಂಪಾದಕ ಮಂಡಳಿ ಸದಸ್ಯರನ್ನು ಸತ್ಕರಿಸಲಾಯಿತು. ಶಾಂತಮಲ್ಲಪ್ಪ ಕರಿಕಲ ಕಣ್ಣಿ ಸ್ವಾಗಿಸಿದರು. ತಪಿತಾ ನಿರೂಪಿಸಿದರು. ಸಿದ್ದಣಗೌಡ ಪಾಟೀಲ ವಂದಿಸಿದರು.

# ನಿರುದ್ಯೋಗಿ ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಸಹಕಾರ, ಪೂರಕ ತರಬೇತಿ: ಪಟೇಲ್



**ಕಲಬುರಗಿ, ಮೇ. 29:** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವುಗಳ ಸಹಯೋಗದೊಂದಿಗೆ ನೀರುದ್ಯೋಗಿ ವಿಕಲಚೇತನರಿಗೆ "ಸ್ವಯಂ ಉದ್ಯೋಗ' ಕೈಗೊಳ್ಳಲು ಆರ್ಥಿಕ ಸಹಕಾರ ಮತ್ತು ಪೂರಕ ತರಬೇತಿ ಕುರಿತು ಗ್ರಾಮೀಣ, ನಗರ ವಿವಿದ್ಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ತಾಲೂಕು ಪಂಚಾಯತಿ ಕಚೇರಿಯಲ್ಲಿ ಒಂದು ದಿನದ ತರಬೇತಿ ಕಾರ್ಯಾಗಾರ ಜರುಗಿತು.

ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿ ಎಮ್.ಡಿ.ಸೈಯದ್ ಪಟೇಲ ಅವರು, ಸೇಲ್ಕೋ ಫೌಂಡೇಶನ್‌ರವರು ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಮಾಜದ ಮುಖ್ಯ ವಾಹಿನಿಗೆ ತರಲು ಹಾಗೂ ಸ್ವಾವಲಂಭಿಗಳಾಗಿ ಬದುಕಲು ಆರ್ಥಿಕ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ್ ಹುಸೇನ್ ಖಾನ್ ಅವರು ಮಾತನಾಡಿ, ಗ್ರಾಮೀಣ ಪ್ರದೇಶದ ವಿಕಲಚೇತನರನ್ನು ಗುರುತಿಸಿ ಅವರಿಗೆ ಸ್ವಯಂ ಉದ್ಯೋಗ ತರಬೇತಿ ನೀಡಲು ಅವಕಾಶ ಒದಗಿಸಬೇಕು. ಸರ್ಕಾರದ ಯೋಜನೆಗಳ ಕುರಿತು ಅವರಿಗೆ ಮಾಹಿತಿ ನೀಡಬೇಕು. ಕಾರ್ಯಕ್ರಮದಲ್ಲಿ ಬೆಂಗಳೂರಿನ ಸೇಲ್ಕೋ ಫೌಂಡೇಶನ್ ಹಿರಿಯ ವ್ಯವಸ್ಥಾಪಕರಾದ ಫಣೀಂದ್ರ ಸಿಂಗ್ ಅವರು ಮಾತನಾಡಿದರು.

ನಂತರದಲ್ಲಿ ಸೇಲ್ಕೋ ವಲಯ ವ್ಯವಸ್ಥಾಪಕ ಯಲ್ಲಾಲಿಂಗ ದೊಡ್ಡಮನಿ ಅವರು ಸೌರಶಕ್ತಿ ಆಧಾರಿತ ಉದ್ಯೋಗವನ್ನು ಪ್ರಾರಂಭಿಸಲು ಬೇಕಾದ ಮಾಹಿತಿ ನೀಡಿದರು. ವಿಕಲಚೇತನರು ಸ್ವಂತ ಉದ್ಯೋಗವನ್ನು ಪ್ರಾರಂಭಿಸಿ ಆರ್ಥಿಕವಾಗಿ ಹೇಗೆ ಸಬಲರಾಗಬೇಕು ಎಂಬುವುದರ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಈಗಾಗಲೇ 350ಕ್ಕೂ ಹೆಚ್ಚು ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಂಡು ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಯೋಜಕ ಸಂತೋಷ ಪಟ್ಟೆದ್ದಾರ್, ತಾಲೂಕು ವಿವಿದ್ಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಖಾಸಿಂ ಸಾಬ ಮತ್ತು ಕಲಬುರಗಿ ತಾಲೂಕಿನ ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ ಭಾಗವಹಿಸಿದ್ದರು.

# ಹಾರ್ಮುಜ್ ಜಲಸಂಧಿ ನಿರ್ವಹಣಾ ಸಂಸ್ಥೆಯ ಅಧಿಕಾರ ನಿರ್ಬಂಧ: ಅಮೆರಿಕದ ಖಜಾನೆ ಇಲಾಖೆ ನಿರ್ಧಾರ

**ವಾಷಿಂಗ್ಟನ್/ಟೆಹ್ರಾನ್,ಮೇ 29:** ಇರಾನ್‌ನ ಹೊಸದಾಗಿ ರಚಿಸಲಾದ ಪರ್ಷಿಯನ್ ಗಲ್ಫ್ ಜಲಸಂಧಿ ಪ್ರಾಧಿಕಾರವನ್ನು ನಿರ್ಬಂಧಗಳ ಅಡಿಯಲ್ಲಿ ಇರಿಸಿದೆ. ಇಸ್ಲಾಮಿಕ್ ಗಣರಾಜ್ಯವು ಹಾರ್ಮುಜ್ ಜಲಸಂಧಿಯ ಮೂಲಕ ಸಂಚಾರವನ್ನು ಮೇಲ್ವಿಚಾರಣೆ ಮಾಡಲು ಮತ್ತು ವಾಣಿಜ್ಯ ಹಡಗುಗಳಿಂದ ಟೆಹ್ರಾನ್ ನ್ಯಾವಿಗೇಷನಲ್ ಸೇವಾ ಶುಲ್ಕವನ್ನು ಸಂಗ್ರಹಿಸಲು ಈ ಸಂಸ್ಥೆಯನ್ನು ಸ್ಥಾಪಿಸಿದೆ. ನಡೆಯುತ್ತಿರುವ ಕದನ ವಿರಾಮ ಮತ್ತು ವಿಶಾಲವಾದ ಇತ್ಯರ್ಥವನ್ನು ತಲುಪಲು ನಿರಂತರ ರಾಜತಾಂತ್ರಿಕ ಪ್ರಯತ್ನಗಳ ಹೊರತಾಗಿಯೂ, ಅಮೆರಿಕ ಮತ್ತು ಇರಾನ್ ನಡುವೆ ನಡೆಯುತ್ತಿರುವ ಆರ್ಥಿಕ ಮುಖಾಮುಖಿಯಲ್ಲಿ ಈ ಕ್ರಮವು ಇತ್ತೀಚಿನ ಉಲ್ಬಣವನ್ನು ಸೂಚಿಸುತ್ತದೆ. ಆರ್ಥಿಕ ಲಾಭಕ್ಕಾಗಿ ಜಾಗತಿಕ ವ್ಯಾಪಾರ ಮಾರ್ಗಗಳ ಮೇಲೆ ಒತ್ತಡ ಹೇರಲು ಇರಾನ್ ಪ್ರಯತ್ನಿಸುತ್ತಿದೆ ಎಂದು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಆರೋಪಿಸಿದರು. "ಜಾಗತಿಕ ಕಡಲ ವ್ಯಾಪಾರವನ್ನು ಸುಲಿಗೆ ಮಾಡಲು ಇರಾನ್ ಮಿಲಿಟರಿಯ ಇತ್ತೀಚಿನ ಪ್ರಯತ್ನವು ಆರ್ಥಿಕ ಕೋಪವು ಆಡಳಿತವನ್ನು ಹಣಕ್ಕಾಗಿ ಹತಾಶರನ್ನಾಗಿ ಮಾಡಿದೆ ಎಂಬುದಕ್ಕೆ ಪುರಾವೆಯಾಗಿದೆ" ಎಂದು ಬೆಸೆಂಟ್ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇರಾನಿನ ಬೇಡಿಕೆಗಳಿಗೆ ಸಮ್ಮತಿಸುವ ಮತ್ತು ಹೊಸ ಶುಲ್ಕವನ್ನು ಪಾವತಿಸುವ ಯಾವುದೇ ಕಂಪನಿಗಳು




ಅಥವಾ ಹಡಗು ನಿರ್ವಾಹಕರು ಸಹ ನಿರ್ಬಂಧಗಳ ಅಡಿಯಲ್ಲಿ ತಮ್ಮನ್ನು ಕಂಡುಕೊಳ್ಳಬಹುದು ಎಂದು ವಾಷಿಂಗ್ಟನ್ ಎಚ್ಚರಿಕೆ ನೀಡಿದೆ, ಏಕೆಂದರೆ ಅಧಿಕಾರವು ಇರಾನ್‌ನ ಪ್ರಬಲ ದೇವಪ್ರಭುತ್ವ ಕಾವಲುಗಾರ ಐಆರ್‌ಜಿಸಿಗೆ ಸಂಬಂಧಿಸಿದೆ, ಇದನ್ನು ಅಮೆರಿಕ ಸ್ಟೇಟ್ ಡಿಪಾರ್ಟ್ಮೆಂಟ್ ಭಯೋತ್ಪಾದಕ ಸಂಘಟನೆ ಎಂದು ಘೋಷಿಸಿದೆ. ಖಜಾನೆ ಪ್ರಕಾರ, ಪ್ರಾಧಿಕಾರಕ್ಕೆ ಪಾವತಿ ಮಾಡುವ ಯಾರಾದರೂ ಖಖಉಅ ಗೆ "ಬೆಂಬಲ ನೀಡುತ್ತಿರಬಹುದು ಮತ್ತು ಸೇವೆಗಳನ್ನು ಪಡೆಯುತ್ತಿರಬಹುದು". "ಖಜಾನೆಯು ಇರಾನ್ ಆಡಳಿತಕ್ಕೆ ಅವರ ಶಸ್ತ್ರಾಸ್ತ್ರ ಕಾರ್ಯಕ್ರಮಗಳು, ಭಯೋತ್ಪಾದಕ ಪ್ರಾಕ್ಸಿಗಳು ಮತ್ತು ಪರಮಾಣು ಮಹತ್ವಾಕಾಂಕ್ಷೆಗಳಿಗಾಗಿ ಆದಾಯವನ್ನು ಕಸಿದುಕೊಂಡಿದೆ" ಎಂದು ಬೆಸೆಂಟ್ ಹೇಳಿದರು.

ತನ್ನ ನಿರ್ಬಂಧಗಳ ಅಭಿಯಾನವು ಟೆಹ್ರಾನ್ "ಹತ್ತಾರು ಶತಕೋಟಿ ಡಾಲರ್" ಸಂಭಾವ್ಯ ಆದಾಯವನ್ನು ಪ್ರವೇಶಿಸುವುದನ್ನು ನಿರ್ಬಂಧಿಸಿದೆ ಎಂದು ಅಮೆರಿಕ ಹೇಳುತ್ತದೆ. ಈ ವರ್ಷದ ಆರಂಭದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ಹಾರ್ಮುಜ್ ಜಲಸಂಧಿಯಲ್ಲಿ ಇರಾನ್‌ನ ಹೆಚ್ಚುತ್ತಿರುವ ದೃಢವಾದ ಕ್ರಮಗಳ ನಂತರ ನಿರ್ಬಂಧಗಳು ಬಂದಿವೆ. ಮೇ 20 ರಂದು, ಪರ್ಷಿಯನ್ ಕೊಲ್ಲಿ ಜಲಸಂಧಿ ಪ್ರಾಧಿಕಾರವು ತನ್ನ "ನಿಯಂತ್ರಕ ನ್ಯಾಯವ್ಯಾಪ್ತಿ" ಎಂದು ಕರೆಯುವ ನಕ್ಷೆಯನ್ನು ಪ್ರಕಟಿಸಿತು, ಇದು ಕಾರ್ಯತಂತ್ರದ ಜಲಮಾರ್ಗದ ಎರಡೂ ಬದಿಗಳಲ್ಲಿ ಸಮುದ್ರ ವಲಯಗಳನ್ನು ಗುರುತಿಸುತ್ತದೆ, ಅಲ್ಲಿ ಹಡಗುಗಳು ಹಾದುಹೋಗಲು ಇರಾನಿನ ಅನುಮತಿಯ ಅಗತ್ಯವಿರುತ್ತದೆ. ಇರಾನ್ ತಾನು ಸುಂಕಗಳನ್ನು ವಿಧಿಸುತ್ತಿಲ್ಲ, ಬದಲಿಗೆ ಜಲಸಂಧಿಯ ಹೊಸ ಆಡಳಿತ ವ್ಯವಸ್ಥೆಯ ಭಾಗವಾಗಿ ಒಮಾನ್‌ನೊಂದಿಗೆ ಸಮನ್ವಯದೊಂದಿಗೆ ಭದ್ರತೆ, ಸಂಚರಣೆ ಮತ್ತು ಪರಿಸರ ಸಂರಕ್ಷಣಾ ಸೇವೆಗಳಿಗೆ ಶುಲ್ಕ ವಿಧಿಸುತ್ತಿದೆ ಎಂದು ಒತ್ತಾಯಿಸುತ್ತದೆ. ಇದಕ್ಕೂ ಮೊದಲು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಈ ವಾರ ಟೆಹ್ರಾನ್ ಜಲಸಂಧಿಯ ಮೂಲಕ ಸಂಚಾರವನ್ನು ನಿರ್ವಹಿಸುವುದನ್ನು ಮತ್ತು "ಸಮುದ್ರ ಸೇವೆಗಳಿಗೆ" ಶುಲ್ಕವನ್ನು ಸಂಗ್ರಹಿಸುವುದನ್ನು ಮುಂದುವರಿಸುತ್ತದೆ ಎಂದು ಹೇಳಿದರು.

# ಜಾಗತಿಕ ಭದ್ರತಾ ಸಭೆಗಾಗಿ ಮಾಸ್ಕೋದಲ್ಲಿ ಶೋಯಿಗು ಜೊತೆ ದೋವಲ್ ಮಾತುಕತೆ

**ಮಾಸ್ಕೋ, ಮೇ 29:** ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್ ಮಾಸ್ಕೋಗೆ ಭೇಟಿ ನೀಡುತ್ತಿದ್ದಾರೆ. ಅವರು ಅಂತರರಾಷ್ಟ್ರೀಯ ಭದ್ರತಾ ಸಮ್ಮೇಳನದಲ್ಲಿ (ಐಎಸ್‌ಎಫ್) ಭಾಗವಹಿಸುವುದರ ಜೊತೆಗೆ ಇತರ ರಾಷ್ಟ್ರಗಳ ತಮ್ಮ ಸಹವರ್ತಿಗಳೊಂದಿಗೆ ಸಭೆಗಳನ್ನು ನಡೆಸಲಿದ್ದಾರೆ.

ಪ್ರಸ್ತುತ ಭೌಗೋಳಿಕ ರಾಜಕೀಯ ವಾತಾವರಣದಲ್ಲಿ, ಭಾರತ–ರಷ್ಯಾ ಸಂಬಂಧವು ಬಹಳ ವಿಶೇಷ ಪಾತ್ರವನ್ನು ಹೊಂದಿದೆ ಎಂದು ದೋವಲ್ ರಷ್ಯಾದ ಭದ್ರತಾ ಮಂಡಳಿಯ ಕಾರ್ಯದರ್ಶಿ ಸೆರ್ಗೆಯ್ ಶೋಯಿಗು ಅವರಿಗೆ ಅಂತರರಾಷ್ಟ್ರೀಯ ಭದ್ರತಾ ಸಮ್ಮೇಳನದ (ಐಎಸ್‌ಎಫ್) ಅಂಚಿನಲ್ಲಿ ನಡೆದ ದ್ವಿಪಕ್ಷೀಯ ಸಭೆಯಲ್ಲಿ ಹೇಳಿದರು. ದೋವಲ್ ಮತ್ತು ಶೋಯಿಗು ರಕ್ಷಣೆ, ಭದ್ರತೆ, ಇಂಧನ ಮತ್ತು ಆರ್ಥಿಕ ಸಂಬಂಧಗಳಲ್ಲಿ ನಡೆಯುತ್ತಿರುವ ಸಹಕಾರವನ್ನು ಪರಿಶೀಲಿಸಿದ್ದಾರೆ ಎಂದು ಸಭೆಯ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಎನ್‌ಎಸ್‌ಎ ಸಭೆಯ ಬಗ್ಗೆಯೂ ಉನ್ನತ ಭದ್ರತಾ ಅಧಿಕಾರಿಗಳು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು ಎಂದು ಅದು ಹೇಳಿದೆ.

ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತವು ರಷ್ಯಾದಂತೆಯೇ ತನ್ನ ಎಲ್ಲಾ




ಶಕ್ತಿಯಿಂದ ಬದ್ಧವಾಗಿದೆ ಎಂದು ದೋವಲ್ ಸಭೆಯಲ್ಲಿ ಗಮನಿಸಿದರು. ಕಳೆದ ಏಪ್ರಿಲ್‌ನಲ್ಲಿ ನಡೆದ ಮಾರಕ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಅವರು ನೆನಪಿಸಿಕೊಂಡರು. "ಭಯೋತ್ಪಾದನೆಯ ಪ್ರಾಯೋಜಕರನ್ನು" ಬೆಂಬಲಿಸುತ್ತಾರೆಯೇ ಅಥವಾ "ನಿರ್ಣಾಯಕ ಆಯ್ಕೆಗಳೊಂದಿಗೆ" ಅವರನ್ನು ಎದುರಿಸಲು ಬಯಸುತ್ತಾರೆಯೇ ಎಂಬುದರ ಕುರಿತು "ಸ್ಪಷ್ಟ ಆಯ್ಕೆಗಳನ್ನು" ಮಾಡಬೇಕೆಂದು ಅವರು ವೇದಿಕೆಯಲ್ಲಿ ಭಾಗವಹಿಸುವವರನ್ನು ಒತ್ತಾಯಿಸಿದರು. ಭಯೋತ್ಪಾದನೆಯ ವಿಷಯದಲ್ಲಿ ಯಾವುದೇ ದ್ವಿಮುಖ ನೀತಿ ಇರಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ. ತಮ್ಮ ಭಾಷಣದಲ್ಲಿ, ದೋವಲ್ ಪಶ್ಚಿಮ ಏಷ್ಯಾ ಸಂಘರ್ಷದ ಬಗ್ಗೆಯೂ ಮಾತನಾಡುತ್ತಾ, ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಹಾದಿಯನ್ನು ಖಚಿತಪಡಿಸಿಕೊಳ್ಳುವ ಅಗತ್ಯತೆಯ ಬಗ್ಗೆ ದೆಹಲಿಯ ನಿಲುವನ್ನು ಪುನರುಚ್ಚರಿಸಿದರು. ಜಾಗತಿಕ ದಕ್ಷಿಣ ರಾಷ್ಟ್ರಗಳ ಹೆಚ್ಚಿನ ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳಲು, ಓಖಂ ಜಾಗತಿಕ ಆಡಳಿತದ ತುರ್ತು ಸುಧಾರಣೆಗಳಿಗೆ ಕರೆ ನೀಡಿತು. ಅಧಿಕಾರವು ಇನ್ನು ಮುಂದೆ ಕೆಲವೇ ಕೈಗಳಲ್ಲಿ ಕೇಂದ್ರೀಕೃತವಾಗಿಲ್ಲ ಎಂದು ದೋವಲ್ ಒತ್ತಿ ಹೇಳಿದರು.

# ಸಿಂಗಾಪುರ್ ಬ್ಯಾಡ್ಮಿಂಟನ್ ಓಪನ್

## ಕ್ವಾರ್ಟರ್ ಫೈನಲ್‌ನಲ್ಲಿ ಸಿಂಧುಗೆ ಸೋಲು

**ಸಿಂಗಾಪುರ, ಮೇ 29:** ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ವಿಶ್ವದ ನಂ. 1 ಮತ್ತು ಹಾಲಿ ಒಲಿಂಪಿಕ್ ಚಾಂಪಿಯನ್ ಕೊರಿಯಾ ಗಣರಾಜ್ಯದ ಆನ್ ಸೆ–ಯಂಗ್ ವಿರುದ್ಧ ಭಾರತೀಯ ಆಟಗಾರ್ತಿ ಸೋತ ನಂತರ ಪಿವಿ ಸಿಂಧು ಅವರ ಸಿಂಗಾಪುರ್ ಬ್ಯಾಡ್ಮಿಂಟನ್ ಓಪನ್ 2026 ಅಭಿಯಾನ ಶುಕ್ರವಾರ ಕೊನೆಗೊಂಡಿತು. ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಸಿಂಧು ಈ ಪಂದ್ಯವನ್ನು 21–17, 21–14 ಅಂತರದಲ್ಲಿ ಸೋತರು, ಆನ್ ಸೆ–ಯಂಗ್ ವಿರುದ್ಧದ ತನ್ನ ಸೋಲಿನ ಸರಣಿಯನ್ನು ಒಂಬತ್ತು ಪಂದ್ಯಗಳಿಗೆ ವಿಸ್ತರಿಸಿದರು. ವಿಶ್ವದ 12 ನೇ ಸ್ಥಾನದಲ್ಲಿರುವ ಸಿಂಧು, 2023 ರ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನಲ್ಲಿ ಆ ಓಟದಲ್ಲಿ ಕೇವಲ ಒಮ್ಮೆ ಮಾತ್ರ ಕೊರಿಯಾ ವಿರುದ್ಧ ಒಂದು ಪಂದ್ಯವನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಭಾರತಕ್ಕೆ ಉತ್ತಮ ಸುದ್ದಿಯೊಂದು ಬಂದಿದ್ದು, ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿಯು ಮಲೇಷ್ಯಾದ 27ನೇ ಶ್ರೇಯಾಂಕಿತ ಜೋಡಿ ಆರನ್ ತಾಯ್ ಮತ್ತು ಕಾಂಗ್ ಖೈ ಕ್ಸಿಂಗ್ ವಿರುದ್ಧ 19–21, 21–17, 21–13 ಅಂತರದಲ್ಲಿ ಜಯಗಳಿಸಿ ಸೆಮಿಫೈನಲ್‌ಗೆ ತಲುಪಿದೆ. ಆರಂಭಿಕ ಪಂದ್ಯದಲ್ಲಿ ಐದು ಅಂಕಗಳಿಂದ ಹಿನ್ನಡೆ ಅನುಭವಿಸಿ, ಎರಡನೇ ಪಂದ್ಯದಲ್ಲಿ 8–3 ಅಂತರದಲ್ಲಿ ಹಿನ್ನಡೆ ಅನುಭವಿಸಿದ ಭಾರತದ ವಿಶ್ವದ 4ನೇ ಶ್ರೇಯಾಂಕಿತ ಜೋಡಿ ಹಾಗೂ ಹಾಲಿ ಏಷ್ಯನ್ ಗೇಮ್ಸ್ ಚಾಂಪಿಯನ್ ಜೋಡಿ, ನಿರ್ಣಾಯಕ ಆಟಗಾರನನ್ನು ನಿಯಂತ್ರಿಸಲು ಬಲವಾಗಿ ಚೇತರಿಸಿಕೊಂಡರು. ಮೂರನೇ ಪಂದ್ಯದಲ್ಲಿ



10–9 ಅಂಕಗಳಿಂದ, ಸಾತ್ವಿಕ್ ಮತ್ತು ಚಿರಾಗ್ ಸತತ ಆರು ಅಂಕಗಳನ್ನು ಗಳಿಸಿ ಥೈಲ್ಯಾಂಡ್ ಓಪನ್ ನಂತರ ಋತುವಿನ ಎರಡನೇ ಸೆಮಿಫೈನಲ್ ಪ್ರವೇಶವನ್ನು ಖಚಿತಪಡಿಸಿಕೊಂಡರು. ಮಿಶ್ರ ಡಬಲ್ಸ್‌ನಲ್ಲಿ, ವಿಶ್ವದ 28ನೇ ಶ್ರೇಯಾಂಕಿತ ತನಿಶಾ ಕ್ರಾಸ್ಟೊ ಮತ್ತು ಧ್ರುವ್ ಕಪಿಲಾ ಅವರು ವಿಶ್ವ ಚಾಂಪಿಯನ್ನಗಳಾದ ಮಲೇಷ್ಯಾದ ಚೆನ್ ಟಾಂಗ್ ಜೀ ಮತ್ತು ತೋಹ್ ಈ ವೀ ಮೊದಲ ಪಂದ್ಯದಲ್ಲಿ 18–16 ಅಂತರದಲ್ಲಿ ಮುನ್ನಡೆ ಸಾಧಿಸಿ ಗಾಯದಿಂದ ನಿವೃತ್ತರಾದ ನಂತರ ಸೆಮಿಫೈನಲ್ಗೆ ಮುನ್ನಡೆದರು. ಏತನ್ಮಧ್ಯೆ, 2024 ರ ಪ್ಯಾರಿಸ್ ಸೆಮಿಫೈನಲಿಸ್ಟ್ ಲಕ್ಷ್ಯ ಸೇನ್ ಅವರ ಅಭಿಯಾನವು ಜಪಾನ್ನ ವಿಶ್ವದ 19 ನೇ ಶ್ರೇಯಾಂಕಿತ ಕೋಕಿ ವಟನಾಬೆ ವಿರುದ್ಧ 21–19, 15–21, 21–15 ಸೋಲಿನ ನಂತರ ಕ್ವಾರ್ಟರ್–ಫೈನಲ್‌ನಲ್ಲಿ ಕೊನೆಗೊಂಡಿತು.

# ವಿಶ್ವಕಪ್‌ಗೆ ಅರ್ಜೆಂಟೀನಾ ತಂಡ ಪ್ರಕಟ: ಮೆಸ್ಸಿಗೆ ಸ್ಥಾನ

**ಬ್ಯೂನಸ್ ಐರಿಸ್, ಮೇ 29:** ಮುಂದಿನ ತಿಂಗಳು ಅಮೆರಿಕ, ಮೆಕ್ಸಿಕೊ ಮತ್ತು ಕೆನಡಾದಲ್ಲಿ ಆರಂಭವಾಗಲಿರುವ ಫಿಫಾ ವಿಶ್ವಕಪ್‌ಗಾಗಿ ಅರ್ಜೆಂಟೀನಾ ತಂಡದಲ್ಲಿ ಹೆಸರಿಸಲಾದ 26 ಆಟಗಾರರಲ್ಲಿ ಲಿಯೋನೆಲ್ ಮೆಸ್ಸಿ ಕೂಡ ಒಬ್ಬರು. ಇಂಟರ್ ಮಿಯಾಮಿ ನಾಯಕ ಮೆಸ್ಸಿ ಆಕ್ರಮಣಕಾರಿ ತಂಡವನ್ನು ಮುನ್ನಡೆಸುತ್ತಾರೆ, ಇದರಲ್ಲಿ ಇಂಟರ್ ಮಿಲನ್ ಸ್ಟ್ರೈಕರ್ ಲೌಟಾರೊ ಮಾರ್ಟಿನೆಜ್ ಮತ್ತು ಅಟ್ಲೆಟಿಕೊ ಮ್ಯಾಡ್ರಿಡ್‌ನ ಜೂಲಿಯನ್ ಅಲ್ವಾರೆಜ್ ಕೂಡ ಸೇರಿದ್ದಾರೆ.

**ಅರ್ಜೆಂಟೀನಾ ತಂಡ: ಗೋಲ್‌ಕೀಪರ್‌ಗಳು:** ಎಮಿಲಿಯಾನೊ ಮಾರ್ಟಿನೆಜ್ (ಆಸ್ಟನ್ ವಿಲ್ಲಾ), ಗೆರೊನಿಮೊ ರುಲ್ಲಿ (ಒಲಿಂಪಿಕ್ ಡಿ ಮಾರ್ಸಿಲ್ಲೆ), ಜುವಾನ್ ಮುಸ್ಸೊ (ಅಟ್ಲೆಟಿಕೊ ಮ್ಯಾಡ್ರಿಡ್)


**ಡಿಫೆಂಡರ್‌ಗಳು:** ಲಿಯೊನಾರ್ಡೊ ಬಲೆರ್ಡಿ (ಒಲಿಂಪಿಕ್ ಡಿ ಮಾರ್ಸಿಲ್ಲೆ), ನಿಕೋಲಸ್ ಟ್ಯಾಗ್ಲಿಯಾಫಿಕೊ (ಒಲಿಂಪಿಕ್ ಲಿಯೊನ್ನೈಸ್),



ಗೊಂಜಾಲೊ ಮೊಂಟಿಯೆಲ್ (ರಿವರ್ ಪ್ಲೇಟ್), ಲಿಸಾಂಡ್ರೊ ಮಾರ್ಟಿನೆಜ್ (ಮ್ಯಾಂಚೆಸ್ಟರ್ ಯುನೈಟೆಡ್), ಕ್ರಿಸ್ಟಿಯನ್ ರೊಮೆರೊ (ಟೊಟೆನ್ಹ್ಯಾಮ್ ಹಾಟ್ಸ್ಪರ್), ನಿಕೋಲಸ್ ಒಟಮೆಂಡಿನಾ (ಬೆನ್ಫಿಕಾಮೆಡಿನಾ), ನಹುಯೆಲ್ ಮೊಲಿನಾ (ಅಟ್ಲೆಟಿಕೊ ಮ್ಯಾಡ್ರಿಡ್)

**ಮಿಡ್‌ಫೀಲ್ಡರ್‌ಗಳು:** ಲಿಯಾಂಡ್ರೊ ಪರೆಡೆಸ್ (ಬೋಕಾ ಜೂನಿಯರ್ಸ್), ರೊಡ್ರಿಗೋ ಡಿ ಪಾಲ್ (ಇಂಟರ್ ಮಿಯಾಮಿ), ವ್ಯಾಲೆಂಟಿನ್ ಬಾರ್ಕೊ (ರೇಸಿಂಗ್ ಸ್ಟ್ರಾಸ್ಬರ್ಗ್), ಜಿಯೋವಾನಿ ಲೊ ಸೆಲ್ಸೊ (ರಿಯಲ್ ಬೆಟಿಸ್), ಎಕ್ಸೆಕ್ವಿಯೆಲ್ ಪಲಾಸಿಯೊಸ್ (ಬೇಯರ್ ಲೆವರ್ಕುಸೆನ್), ಅಲೆಕ್ಸಿಸ್ ಮ್ಯಾಕ್ ಅಲಿಸ್ಟರ್ (ಲಿವರ್‌ಪೂಲ್), ಎಂಝೊ ಫರ್ನಾಂಡೆಜ್

**ಫಾರ್ವರ್ಡ್‌ಗಳು:** ಜೂಲಿಯನ್ ಅಲ್ವಾರೆಜ್ (ಅಟ್ಲೆಟಿಕೊ ಮ್ಯಾಡ್ರಿಡ್), ಲಿಯೋನೆಲ್ ಮೆಸ್ಸಿ (ಇಂಟರ್ ಮಿಯಾಮಿ), ನಿಕೊ ಗೊನ್ಜಾಲೆಜ್ (ಅಟ್ಲೆಟಿಕೊ ಮ್ಯಾಡ್ರಿಡ್), ಥಿಯಾಗೊ ಅಲ್ಮಡಾ (ಅಟ್ಲೆಟಿಕೊ ಮ್ಯಾಡ್ರಿಡ್), ಗಿಯುಲಿಯಾನೊ ಸಿಮಿಯೋನ್ (ಅಟ್ಲೆಟಿಕೊ ಮ್ಯಾಡ್ರಿಡ್), ನಿಕೊ ಪಾಜ್ (ಕೊಮೊ), ಜೋಸ್ ಮ್ಯಾನುಯೆಲ್ ಲೋಪೆಜ್ (ಪಾಲ್ಮೆರಾಸ್), ಲೌಟಾರೊ ಮಾರ್ಟಿನೆಜ್ (ಇಂಟೆರೊ ಮಾರ್ಟಿನ್).



ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರು 'ಸ್ಥಿರ, ಸುರಕ್ಷಿತ ಮತ್ತು ಅಂತರ್ಗತ ಇಂಡೋ–ಪೆಸಿಫಿಕ್‌ಗಾಗಿ ಭಾರತದ ರಕ್ಷಣಾ ರಾಜತಾಂತ್ರಿಕತೆ' ಎಂಬ ವಿಷಯದ ಕುರಿತು ವಿಶೇಷ ಸಭೆಯನ್ನುದ್ದೇಶಿಸಿ ಮಾತನಾಡಿದರು. ಶುಕ್ರವಾರ ಸಿಂಗಾಪುರದಲ್ಲಿ ಶಾಂಗ್ರಿ–ಲಾ ಸಂವಾದ ಸಂದರ್ಭದಲ್ಲಿ ಸಿಂಗಾಪುರಕ್ಕೆ ಭಾರತದ ಹೈಕಮಿಷನರ್ ಡಾ.ಶಿಲ್ಪಕ್ ಅಂಬುಲೆ ಕೂಡ ಸಂವಾದದಲ್ಲಿ ಭಾಗವಹಿಸಿದ್ದರು.

# ಪರ್ತ್‌ನಲ್ಲಿ ಆಸ್ಟ್ರೇಲಿಯಾವನ್ನು ಸೋಲಿಸಿದ

## ಭಾರತೀಯ ಮಹಿಳಾ ಹಾಕಿ ತಂಡ

**ಪರ್ತ್, ಮೇ 29:** ಪರ್ತ್ ಹಾಕಿ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಸೌಹಾರ್ದ ಸರಣಿಯ ಮೂರನೇ ಪಂದ್ಯದಲ್ಲಿ ಭಾರತೀಯ ಮಹಿಳಾ ಹಾಕಿ ತಂಡ ಆಸ್ಟ್ರೇಲಿಯಾ ವಿರುದ್ಧ 2–0 ಅಂತರದ ಅದ್ಭುತ ಜಯ ಸಾಧಿಸಿತು. ಈ ಗೆಲುವಿನೊಂದಿಗೆ, ಎರಡನೇ ಪಂದ್ಯದಲ್ಲಿ 4–2 ಅಂತರದ ಗೆಲುವು ಸಾಧಿಸುವ ಮೂಲಕ ಆರಂಭಿಕ ಪಂದ್ಯದಲ್ಲಿ ಸೋಲಿನಿಂದ ಚೇತರಿಸಿಕೊಂಡ ಭಾರತ ಈಗ ನಾಲ್ಕು ಪಂದ್ಯಗಳ ಸರಣಿಯಲ್ಲಿ 2–1 ಅಂತರದ ಮುನ್ನಡೆ ಸಾಧಿಸಿದೆ.



ಎರಡೂ ತಂಡಗಳ ನಡುವಿನ ಮೂರನೇ ಪಂದ್ಯವು ಎರಡೂ ತಂಡಗಳಿಂದ ಶಿಸ್ತುಬದ್ಧ ರಕ್ಷಣಾತ್ಮಕ ಪ್ರದರ್ಶನಕ್ಕೆ ಸಾಕ್ಷಿಯಾಯಿತು ಏಕೆಂದರೆ ಮೊದಲ ಎರಡು ಕ್ವಾರ್ಟರ್‌ಗಳು ಯಾವುದೇ ಗೋಲುಗಳನ್ನು ಗಳಿಸಲಿಲ್ಲ ಮತ್ತು ಅರ್ಧಾವಧಿಯಲ್ಲಿ 0–0 ಅಂತರದಲ್ಲಿ ಉಳಿದಿತ್ತು. ಮೂರನೇ ಕ್ವಾರ್ಟರ್‌ನಲ್ಲಿ ಸೋನಮ್ (36?) ಫೀಲ್ಡ್ ಗೋಲ್ ಗಳಿಸಿ ಪ್ರವಾಸಿ ತಂಡವನ್ನು ಮುನ್ನಡೆಸಿದಾಗ ಭಾರತ ಅಂತಿಮವಾಗಿ ಪ್ರಗತಿ ಸಾಧಿಸಿತು. ಲಾಲ್ರೆಮ್ಸಿಯಾಮಿ (49?) ಮತ್ತೊಂದು ಫೀಲ್ಡ್ ಗೋಲ್ನೊಂದಿಗೆ ಮುನ್ನಡೆಯನ್ನು ದ್ವಿಗುಣಗೊಳಿಸಿ ತಮ್ಮ ತಂಡಕ್ಕೆ 2–0 ಅಂತರದ ಜಯವನ್ನು ತಂದುಕೊಟ್ಟರು. ಸರಣಿಯ ನಾಲ್ಕನೇ ಮತ್ತು ಅಂತಿಮ ಪಂದ್ಯವು ಶನಿವಾರ, ಮೇ 30, 2026 ರಂದು ಭಾರತೀಯ ಕಾಲಮಾನ ಬೆಳಿಗ್ಗೆ 11:00 ಗಂಟೆಗೆ ಅದೇ ಸ್ಥಳದಲ್ಲಿ ನಡೆಯಲಿದೆ

# ಭದ್ರತಾ ಕಾರಣ: ಬಿಸಿಸಿಐನಿಂದ ಐಪಿಎಲ್ ಸ್ಮಾರ್ಟ್ ಕನ್ನಡಕ ನಿಷೇಧ

**ನವದೆಹಲಿ, ಮೇ 29:** ಭದ್ರತಾ ಕಾರಣಗಳಿಗಾಗಿ ಬಿಸಿಸಿಐನ ಭ್ರಷ್ಟಾಚಾರ ನಿಗ್ರಹ ಮತ್ತು ಭದ್ರತಾ ಘಟಕ ಎಲ್ಲಾ ಐಪಿಎಲ್ ತಂಡಗಳಿಗೆ ಪಂದ್ಯಾವಳಿಯ ಸಮಯದಲ್ಲಿ "ಸ್ಮಾರ್ಟ್ ಕನ್ನಡಕಗಳು" ಅಥವಾ ಸ್ಮಾರ್ಟ್ ಸನ್‌ಗ್ಲಾಸ್‌ಗಳನ್ನು ಹೊಂದಿರಬಾರದು ಅಥವಾ ಬಳಸಬಾರದು ಎಂದು ಸೂಚನೆ ನೀಡಿದೆ. ಮೇ 18 ರಂದು ಫ್ರಾಂಚೈಸಿಗಳೊಂದಿಗೆ ಹಂಚಿಕೊಂಡ ಶಿಷ್ಟಾಚಾರ ಪ್ರಕಾರ, ಮಾರುಕಟ್ಟೆಯಲ್ಲಿ ಲಭ್ಯವಿರುವ ಕೆಲವು ಸ್ಮಾರ್ಟ್ ಕನ್ನಡಕ ಸಾಧನಗಳು ಲೈವ್ ಸ್ಟ್ರೀಮಿಂಗ್, ಪಠ್ಯ ಸಂದೇಶ ಕಳುಹಿಸುವಿಕೆ, ಆಡಿಯೊ ಕರೆಗಳು ಮತ್ತು ಮೊಬೈಲ್ ಡೇಟಾ ಅಥವಾ ವೈ–ಫೈ ಸಂಪರ್ಕಗಳ ಮೂಲಕ ವೀಡಿಯೊ ಕರೆಗಳು ಸೇರಿದಂತೆ ಸುಧಾರಿತ ಸಂವಹನ ವೈಶಿಷ್ಟ್ಯಗಳನ್ನು ಹೊಂದಿವೆ.




ಆಟಗಾರರು ಮತ್ತು ಪಂದ್ಯ ಅಧಿಕಾರಿಗಳ ಪ್ರದೇಶ ನಿಯಮಗಳ ಅಡಿಯಲ್ಲಿ ಬಿಸಿಸಿಐ ಈ ಸಾಧನಗಳನ್ನು "ಸಂವಹನ ಸಾಧನಗಳು" ಮತ್ತು "ಆಡಿಯೋ/ವಿಡಿಯೋ ರೆಕಾರ್ಡಿಂಗ್ ಸಾಧನಗಳು" ಎಂದು ವರ್ಗೀಕರಿಸಿದೆ. ಪರಿಣಾಮವಾಗಿ, PMOA ಒಳಗೆ ಅವುಗಳ ಸ್ವಾಧೀನ ಅಥವಾ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ಆಟಗಾರರು ಮತ್ತು ಬೆಂಬಲ ಸಿಬ್ಬಂದಿಗೆ ನಿರ್ಬಂಧಿತ ಪ್ರದೇಶಗಳಿಗೆ ಪ್ರವೇಶಿಸುವ ಮೊದಲು ಅಂತಹ ಯಾವುದೇ ಸಾಧನಗಳನ್ನು ತಮ್ಮ ಮೊಬೈಲ್ ಫೋನ್ ಮತ್ತು ಸ್ಮಾರ್ಟ್ ವಾಚ್ ಜೊತೆಗೆ ಗೊತ್ತುಪಡಿಸಿದ ಭದ್ರತಾ ಸಂಪರ್ಕ ಅಧಿಕಾರಿಗೆ ಠೇವಣಿ ಇಡಲು ಸೂಚಿಸಲಾಗಿದೆ. ನಿರ್ದೇಶನವನ್ನು ಪಾಲಿಸಲು ವಿಫಲವಾದರೆ ಅದನ್ನು ನಿಯಮಗಳ ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ ಎಂದು ACSU ಎಚ್ಚರಿಸಿದೆ. ಪಂದ್ಯಾವಳಿಯ ಭ್ರಷ್ಟಾಚಾರ–ವಿರೋಧಿ ಮತ್ತು ಭದ್ರತಾ ಶಿಷ್ಟಾಚಾರಗಳನ್ನು ಉಲ್ಲಂಘಿಸಲಾಗಿದೆ ಮತ್ತು ಶಿಸ್ತು ಕ್ರಮ ಅಥವಾ ದಂಡವನ್ನು ವಿಧಿಸಬಹುದು.

## ವಿಶ್ವಕಪ್‌ನ ಉದ್ಘಾಟನಾ ಪಂದ್ಯ

# ನೇಮರ್ ಕಳೆದುಕೊಂಡ ಬ್ರೆಜಿಲ್ ತಂಡ

**ರಿಯೊ ಡಿ ಜನೈರೊ, ಮೇ 29:** ಜೂನ್ 13 ರಂದು ಮೊರಾಕೊ ವಿರುದ್ಧದ ಫಿಫಾ ವಿಶ್ವಕಪ್ನ ಆರಂಭಿಕ ಪಂದ್ಯವನ್ನು ನೇಮರ್ ತಪ್ಪಿಸಿಕೊಳ್ಳಲಿದ್ದಾರೆ ಎಂದು ಬ್ರೆಜಿಲಿಯನ್ ಫುಟ್ಬಾಲ್ ಒಕ್ಕೂಟ ತಿಳಿಸಿದೆ. ರಿಯೊ ಡಿ ಜನೈರೊ ಬಳಿಯ ಟೆರೆಸ್ಪೊಲಿಸ್‌ನಲ್ಲಿರುವ ಬ್ರೆಜಿಲ್ನ ತರಬೇತಿ ಶಿಬಿರದಲ್ಲಿ ನಡೆಸಿದ ಸ್ಕ್ಯಾನ್ಗಳಲ್ಲಿ, ಸ್ಯಾಂಟೋಸ್ ಫಾರ್ವರ್ಡ್‌ಗೆ ಗ್ರೇಡ್–ಟು ಕರು ಸ್ನಾಯು ಸೆಳೆತವಿದೆ ಎಂದು ತಿಳಿದುಬಂದಿದೆ, ಇದು ಎರಡರಿಂದ ಮೂರು ವಾರಗಳ ಚೇತರಿಕೆಯ ಅವಧಿಯನ್ನು ಬಯಸುತ್ತದೆ. "ನೇಮರ್ ನಿನ್ನೆ ಕರ್ತವ್ಯಕ್ಕೆ ಹಾಜರಾಗಿದ್ದರು, ಎಲ್ಲಾ ವೈದ್ಯಕೀಯ ಪರೀಕ್ಷೆಗಳಿಗೆ ಒಳಗಾದರು, ಎಂಆರ್‌ಐ ಸ್ಕ್ಯಾನ್ನಲ್ಲಿ ಗ್ರೇಡ್–ಟು ಕರು ಸ್ನಾಯು ಸೆಳೆತ ಕಂಡುಬಂದಿದೆ, ಕೇವಲ ಊತವಲ್ಲ. ಅವರು ಎರಡರಿಂದ ಮೂರು ವಾರಗಳಲ್ಲಿ ಗುಣಮುಖರಾಗುವ ನಿರೀಕ್ಷೆಯಿದೆ" ಎಂದು ಬ್ರೆಜಿಲ್ ತಂಡದ ವೈದ್ಯ ರೊಡ್ರಿಗೋ ಲಾಸ್ಮರ್ ಹೇಳಿದ್ದಾರೆ. 128 ಅಂತರರಾಷ್ಟ್ರೀಯ ಪಂದ್ಯಗಳಲ್ಲಿ 79 ಗೋಲುಗಳನ್ನು ಗಳಿಸಿರುವ ಬ್ರೆಜಿಲ್‌ನ ಸಾರ್ವಕಾಲಿಕ ಪ್ರಮುಖ ಸ್ಕೋರರ್ ನೇಮರ್, ಮೇ 17 ರಂದು ಕೊರಿಟಿಬಾ ವಿರುದ್ಧ 3–0 ಅಂತರದ ಸೋಲಿನ ನಂತರ ಸ್ಯಾಂಟೋಸ್ ವೈದ್ಯಕೀಯ ಸಿಬ್ಬಂದಿಯಿಂದ ಆರಂಭದಲ್ಲಿ ಊತ ಇರುವುದು ಪತ್ತೆಯಾಯಿತು.



# ಶುಭ್‌ಮನ್ ಗಿಲ್ ಶತಕ: ಗುಜರಾತ್‌ಗೆ ಫೈನಲ್ ಟಿಕೆಟ್

**ಚಂಡೀಗಢ,ಮೇ 29:** ಮಹಾರಾಜ ಯಾದವೀಂದ್ರ ಸಿಂಗ್ ಪಿಸಿಎ ಸ್ಟೇಡಿಯಂನಲ್ಲಿ ನಡೆದ ರಾಜಸ್ಥಾನ್ ಹಾಗೂ ಗುಜರಾತ್ ನಡುವಿನ ಕ್ವಾಲಿಫೈಯರ್ 2 ಪಂದ್ಯದಲ್ಲಿ ರಾಜಸ್ಥಾನ್ ತಂಡವನ್ನು 7 ವಿಕೆಟ್‌ಗಳಿಂದ ಮಣಿಸಿದ ಗುಜರಾತ್ ಟೈಟಾನ್ಸ್ ತಂಡ ಐಪಿಎಲ್ ಫೈನಲ್‌ಗೆ ಟಿಕೆಟ್ ಪಡೆದುಕೊಂಡಿದೆ. ಈ ಹೈವೋಲ್ಟೇಜ್ ಕದನದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ 214 ರನ್ ಬಾರಿಸಿ ಗುಜರಾತ್‌ಗೆ 215 ರನ್ ಗುರಿ ನೀಡಿತು. ಈ ಗುರಿ ಬೆನ್ನಟ್ಟಿದ ಗುಜರಾತ್ 18.4 ಓವರ್?ಗಳಲ್ಲಿ ಗೆಲುವಿನ ದಡ ಮುಟ್ಟಿತು. ಇದೀಗ ಮೇ 31 ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಮೈದಾನದಲ್ಲಿ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಆರ್‌ಸಿಬಿ ತಂಡವನ್ನು ಎದುರಿಸಲಿದೆ. ವಾಸ್ತವವಾಗಿ ಇದೇ ಗುಜರಾತ್ ವಿರುದ್ಧ ಕ್ವಾಲಿಫೈಯರ್ 1 ರಲ್ಲಿ ಗೆಲ್ಲುವ ಮೂಲಕ ಆರ್‌ಸಿಬಿ ಫೈನಲ್‌ಗೇರಿತ್ತು. ಇದೀಗ ಈ ಎರಡು ತಂಡಗಳ ನಡುವೆ ಫೈನಲ್ ಪಂದ್ಯ ನಡೆಯಲಿದೆ.



### ರಾಜಸ್ಥಾನಕ್ಕೆ ಕಳಪೆ ಆರಂಭ

ಈ ನ್ಯೂ ಚಂಡೀಗಢ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ರಾಜಸ್ಥಾನ್ ತಂಡವು 215 ರನ್ ಕಲೆಹಾಕಿತು. ಆದಾಗ್ಯೂ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ತಂಡವು ಮೊದಲ ಎರಡು ಓವರ್‌ಗಳಲ್ಲಿ ಯಶಸ್ವಿ ಜೈಸ್ವಾಲ್ ಮತ್ತು ರಿಯಾನ್ ಪರಾಗ್ ಅವರ ವಿಕೆಟ್‌ಗಳನ್ನು ಕಳೆದುಕೊಂಡಿತು. ಆದರೆ ತಂಡವು ಒತ್ತಡದಲ್ಲಿದ್ದಾಗ ಜೊತೆಯಾದ ವೈಭವ್ ಸೂರ್ಯವಂಶಿ ಮತ್ತು ರವೀಂದ್ರ ಜಡೇಜಾ ತಂಡದ ಇನ್ನಿಂಗ್ಸ್ ನಿಭಾಯಿಸಿದರು. ಮತ್ತೊಮ್ಮೆ ಸ್ಫೋಟಕ ಬ್ಯಾಟಿಂಗ್ ಮಾಡಿದ ವೈಭವ್ 96 ರನ್‌ಗಳ ಸ್ಮರಣೀಯ ಇನ್ನಿಂಗ್ಸ್ ಆಡಿದರು.

### ವೈಭವ್ ಏಕಾಂಗಿ ಹೋರಾಟ

ಈ ಆವೃತ್ತಿಯ ಐದನೇ ಅರ್ಧಶತಕ ಬಾರಿಸಿದ ವೈಭವ್ ಸತತ ಎರಡನೇ ಪಂದ್ಯದಲ್ಲಿ ಶತಕದಂಚಿನಲ್ಲಿ ಎಡವಿದರು. ಉಳಿದಂತೆ ಅಂತಿಮ ಓವರ್‌ನಲ್ಲಿ, ಡೊನೊವನ್ ಫೆರೇರಾ, ರಶೀದ್ ಖಾನ್ ಬೌಲಿಂಗ್‌ನಲ್ಲಿ ನಾಲ್ಕು ಸಿಕ್ಸರ್‌ಗಳನ್ನು ಬಾರಿಸಿ, ಕೇವಲ 11 ಎಸೆತಗಳಲ್ಲಿ ಅಜೇಯ 38 ರನ್ ಗಳಿಸಿ ತಂಡವನ್ನು 214ಕ್ಕೆ ಕೊಂಡೊಯ್ದರು. ಗುಜರಾತ್ ಪರ ಜೇಸನ್ ಹೋಲ್ಡರ್ ಮತ್ತು ಕಗಿಸೊ ರಬಾಡ ತಲಾ ಎರಡು ವಿಕೆಟ್ ಪಡೆದರು.

### ಗುಜರಾತ್‌ಗೆ ಗಿಲ್– ಸುದರ್ಶನ್ ಬಲ

ವಾಸ್ತವವಾಗಿ ಈ ಗುರಿ ಬೆನ್ನಟ್ಟುವುದಕ್ಕೂ ಮುನ್ನವೇ ಗುಜರಾತ್ ತಂಡಕ್ಕೆ ಅದೊಂದು ಆತಂಕ ಕಾಡತೊಡಗಿತ್ತು. ಅದೇನೆಂದರೆ ಗುಜರಾತ್ ತಂಡವು ಐಪಿಎಲ್‌ನಲ್ಲಿ ಈ ಹಿಂದೆ ಎಂದಿಗೂ 210 ರನ್‌ಗಳಿಗಿಂತ ಹೆಚ್ಚಿನ ಗುರಿಯನ್ನು ಬೆನ್ನಟ್ಟಿರಲಿಲ್ಲ. ಹೀಗಾಗಿ ಈ ಪಂದ್ಯದಲ್ಲೂ ಗುಜರಾತ್ ತಂಡಕ್ಕೆ ಸೋಲು ಖಚಿತ ಎನ್ನಲಾಗುತ್ತಿತ್ತು.

ಆದರೆ ಈ ಬಾರಿ ಇತಿಹಾಸ ಬದಲಿಸುವ ಇನ್ನಿಂಗ್ಸ್ ಆಡಿದ ನಾಯಕ ಶುಭಮನ್ ಗಿಲ್ ಮತ್ತು ಸಾಯಿ ಸುದರ್ಶನ್ ಮತ್ತೊಮ್ಮೆ ಶತಕದ ಜೊತೆಯಾಟವನ್ನು ಕಟ್ಟಿ ತಂಡದ ಗೆಲುವು ಖಚಿತಪಡಿಸಿದರು. ಆದರೆ ಈ ಜೊತೆಯಾಟದ ಹಿಂದೆ ರಾಜಸ್ಥಾನ್ ಫೀಲ್ಡರ್‌ಗಳ ಕೈವಾಡವೂ ಇತ್ತು. ಸುದರ್ಶನ್ 14 ರನ್ ಬಾರಿಸಿ ಆಡುತ್ತಿದ್ದಾಗ ನೀಡಿದ್ದ ಸುಲಭ ಕ್ಯಾಚ್ ಅನ್ನು ಡೊನೊವನ್ ಫೆರೇರಾ ಕೈಬಿಟ್ಟರು. ಈ ತಪ್ಪು ಅಂತಿಮವಾಗಿ ರಾಜಸ್ಥಾನಕ್ಕೆ ದುಬಾರಿಯಾಗಿ ಪರಿಣಮಿಸಿ ಫೈನಲ್‌ನಲ್ಲಿ ತಮ್ಮ ಸ್ಥಾನವನ್ನು ಕಳೆದುಕೊಳ್ಳುವಂತೆ ಮಾಡಿತು.

### ಗೆಲುವಿನ ಶತಕ ಬಾರಿಸಿದ ಗಿಲ್

ಈ ಜೀವದಾನದ ಲಾಭ ಪಡೆದ ಸುದರ್ಶನ್ ಅರ್ಧಶತಕ ಬಾರಿಸಿದರೆ, ಗಿಲ್ ಶತಕದ ಇನ್ನಿಂಗ್ಸ್ ಆಡಿದರು. ಹಾಗೆಯೇ ಈ ಇಬ್ಬರೂ ಕೇವಲ 13 ಓವರ್‌ಗಳಲ್ಲಿ 167 ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡರು, ರಾಜಸ್ಥಾನವನ್ನು ಪಂದ್ಯದಿಂದ ಹೊರದಬ್ಬಿದರು. ಸತತ ಎರಡನೇ ಪಂದ್ಯದಲ್ಲೂ ಸುದರ್ಶನ್ (58) ಹಿಟ್ ವಿಕೆಟ್ ಆದರೂ, ನಾಯಕ ಗಿಲ್ ಪ್ಲೇಆಫ್ ಪಂದ್ಯಗಳಲ್ಲಿ ತಮ್ಮ ಎರಡನೇ ಶತಕವನ್ನು ಬಾರಿಸುವ ಮೂಲಕ ತಂಡವನ್ನು ಗೆಲುವಿನ ಹತ್ತಿರಕ್ಕೆ ತಂದರು. ಗಿಲ್ ಕೇವಲ 53 ಎಸೆತಗಳಲ್ಲಿ 104 ರನ್ ಗಳಿಸಿ ಔಟಾದರು. ಅಂತಿಮವಾಗಿ, ಜೋಸ್ ಬಟ್ಲರ್, ವಾಷಿಂಗ್ಟನ್ ಸುಂದರ್ ಮತ್ತು ರಾಹುಲ್ ಟೆವಾಟಿಯಾ ತಂಡವನ್ನು 18.4 ಓವರ್‌ಗಳಲ್ಲಿ ಗುರಿ ತಲುಪಿಸಿದರು.